

ಕರ್ನಾಟಕ ಸ್ಕೌಟ್ ಮತ್ತು ಗೈಡ್

ಮಾಸ ಪತ್ರಿಕೆ

Karnataka Scout & Guide

Monthly Magazine

Vol -65	Issue-06	June 2024	Pages: 24	Annual Subscription: ₹ 100/-
ಸಂಪುಟ: 65	ಸಂಚಿಕೆ: 06	ಜೂನ್ 2024	ಪುಟಗಳು: 24	ವಾರ್ಷಿಕ ಚಂದ ರೂ. 100/-



ಜೂನ್ 29, 2024 ರಂದು ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಕರ್ನಾಟಕ ಹಾಗೂ ಕಲಬುರ್ಗಿ ಜಿಲ್ಲಾ ಸಂಸ್ಥೆಯ ಸಹಯೋಗದೊಂದಿಗೆ ಜಿಲ್ಲೆಯ ಶಿಕ್ಷಣ ಇಲಾಖೆಯ ಅಧಿಕಾರಿಗಳು ಮತ್ತು ಕಲಬುರ್ಗಿ, ಬೀದರ್, ಯಾದಗಿರಿ ಜಿಲ್ಲೆಯ ಪದಾಧಿಕಾರಿಗಳ "ಸಮಾಲೋಚನಾ ಕಾರ್ಯಗಾರ" ಕಾರ್ಯಕ್ರಮದಲ್ಲಿ ಪೂಜ್ಯ ಮಾತೃಶ್ರೀ ಡಾ॥ ದಾಕ್ಷಾಯಿಣಿ ಎಸ್ ಅಪ್ಪ, ಅಧ್ಯಕ್ಷರು, ಶ್ರೀ ಶರಣಬಸವೇಶ್ವರ ವಿದ್ಯಾವರ್ಧಕ ಸಂಘ ಇವರು ಸಾನಿಧ್ಯ ವಹಿಸಿದ್ದರು. ಇದೇ ಸಂದರ್ಭದಲ್ಲಿ ಪೂಜ್ಯ ಮಾತೃಶ್ರೀ ಡಾ॥ ದಾಕ್ಷಾಯಿಣಿ ಎಸ್ ಅಪ್ಪ ರವರನ್ನು ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್, ಕರ್ನಾಟಕ ರಾಜ್ಯ ಸಂಸ್ಥೆಯ ಉಪಾಧ್ಯಕ್ಷರನ್ನಾಗಿ ನೇಮಕ ಮಾಡಲಾಯಿತು. ಶ್ರೀ ಪಿ.ಜಿ.ಆರ್. ಸಿಂಧ್ಯ, ರಾಜ್ಯ ಮುಖ್ಯ ಆಯುಕ್ತರು ಶ್ರೀಮತಿ ಗುರಮ್ಮ ಸಿದ್ದಾರೆಡ್ಡಿ, ಬೀದರ್ ಜಿಲ್ಲಾ ಮುಖ್ಯ ಆಯುಕ್ತರು, ಶ್ರೀ ಕೆ. ಗಂಗಪ್ಪಗೌಡ, ರಾಜ್ಯ ಕಾರ್ಯದರ್ಶಿ ಶ್ರೀ ಎಸ್.ಪಿ. ಸುಳ್ಳದ್, ಜಿಲ್ಲಾ ಸ್ಕೌಟ್ ಆಯುಕ್ತರು, ಶ್ರೀ ಚನ್ನವೀರಯ್ಯ ಸ್ವಾಮಿ, ಜಿಲ್ಲಾ ಕಾರ್ಯದರ್ಶಿ ಶ್ರೀಮತಿ ಮಲ್ಲೇಶ್ವರಿ ಜುಜಾರೆ, ಎ.ಎಸ್.ಓ.ಸಿ. ಮತ್ತು ಇತರ ಪದಾಧಿಕಾರಿಗಳು ಉಪಸ್ಥಿತರಿದ್ದರು.



ಜೂನ್ 16, 2024 ರಂದು ರಾಜ್ಯ ಸಂಸ್ಥೆ ಹಾಗೂ ಬೆಂಗಳೂರು ಉತ್ತರ ಜಿಲ್ಲಾ ಸಂಸ್ಥೆ ಸಹಯೋಗದೊಂದಿಗೆ ಬೆಂಗಳೂರಿನ ಆರ್.ಟಿ. ನಗರ ಪಬ್ಲಿಕ್ ಶಾಲೆಯಲ್ಲಿ ನಡೆದ ಎಸ್.ಎಸ್.ಎಲ್.ಸಿ. ಮತ್ತು ಪಿ.ಯು.ಸಿ ಪರೀಕ್ಷೆಯಲ್ಲಿ 2023–24ನೇ ಸಾಲಿನಲ್ಲಿ ಶೇಖಡ 90%ಕ್ಕಿಂತ ಹೆಚ್ಚು ಅಂಕಗಳಿಸಿದ ಪ್ರತಿಭಾನ್ವಿತ ಸ್ಕೌಟ್ಸ್–ಗೈಡ್ಸ್ ಹಾಗೂ ರೋವರ್ಸ್–ರೇಂಜರ್ಸ್‌ಗಳಿಗೆ ಮಾನ್ಯ ಸಾರಿಗೆ ಹಾಗು ಮುಜರಾಯಿ ಇಲಾಖೆ ಸಚಿವರಾದ ಶ್ರೀ ರಾಮಲಿಂಗಾರೆಡ್ಡಿ ಅವರು ಅಭಿನಂದಿಸಿದರು. ಚಿತ್ರದಲ್ಲಿ ರಾಜ್ಯ ಮುಖ್ಯ ಆಯುಕ್ತರಾದ ಶ್ರೀ ಪಿ.ಜಿ.ಆರ್. ಸಿಂಧ್ಯ, ರಾಜ್ಯ ಉಪಾಧ್ಯಕ್ಷರಾದ ಶ್ರೀ ಕೊಂಡಜ್ಜಿ ಬ. ಷಣ್ಮುಖಪ್ಪ, ರಾಜ್ಯ ಗೈಡ್ ಆಯುಕ್ತರಾದ ಶ್ರೀಮತಿ ಗೀತಾ ನಟರಾಜ್, ರಾಜ್ಯ ಕಾರ್ಯದರ್ಶಿ ಶ್ರೀ ಕೆ. ಗಂಗಪ್ಪಗೌಡ, ಬೆಂಗಳೂರು ಉತ್ತರ ಜಿಲ್ಲಾ ಮುಖ್ಯ ಆಯುಕ್ತರೂ ಹಾಗೂ ಆರ್.ಟಿ. ನಗರ ಪಬ್ಲಿಕ್ ಶಾಲೆಯ ಸಂಸ್ಥಾಪಕರಾದ ಶ್ರೀ ಬಿ.ಆರ್. ಪ್ರಸನ್ನಕುಮಾರ್ ಹಾಗು ಇತರರು ಉಪಸ್ಥಿತರಿದ್ದರು.



ಜೂನ್ 17, 2024 ರಂದು ರಾಜ್ಯ ಸಂಸ್ಥೆ ಹಾಗೂ ದಕ್ಷಿಣ ಕನ್ನಡ ಜಿಲ್ಲಾ ಸಂಸ್ಥೆ ಸಹಯೋಗದಲ್ಲಿ ಮೂಡುಬಿದರೆಯ 'ಕನ್ನಡ ಸ್ಕೌಟ್–ಗೈಡ್ ಭವನ'ದಲ್ಲಿ ನಡೆದ 2023–24ನೇ ಸಾಲಿನ ಎಸ್.ಎಸ್.ಎಲ್.ಸಿ. ಮತ್ತು ಪಿ.ಯು.ಸಿ ಪರೀಕ್ಷೆಯಲ್ಲಿ ಶೇಕಡ 90%ಕ್ಕಿಂತ ಹೆಚ್ಚು ಅಂಕಗಳಿಸಿದ ಪ್ರತಿಭಾನ್ವಿತ ಸ್ಕೌಟ್ಸ್–ಗೈಡ್ಸ್ ಹಾಗೂ ರೋವರ್ಸ್–ರೇಂಜರ್ಸ್‌ಗಳ ಅಭಿನಂದನಾ ಸಮಾರಂಭವನ್ನು ರಾಜ್ಯ ಮುಖ್ಯ ಆಯುಕ್ತರಾದ ಶ್ರೀ ಪಿ.ಜಿ.ಆರ್. ಸಿಂಧ್ಯರವರು ಉದ್ಘಾಟಿಸಿದರು. ಕಾರ್ಯಕ್ರಮದಲ್ಲಿ ಡಾ. ಎಂ. ಮೋಹನ್ ಆಳ್ವ, ದಕ್ಷಿಣ ಕನ್ನಡ ಜಿಲ್ಲಾ ಮುಖ್ಯ ಆಯುಕ್ತರು, ಶ್ರೀಮತಿ ವಿಮಲಾ ರಂಗಯ್ಯ, ಜಿಲ್ಲಾ ಗೈಡ್ ಆಯುಕ್ತರು, ಶ್ರೀ ಕೆ. ಶ್ರೀಪತಿಭಟ್, ಉಪಾಧ್ಯಕ್ಷರು, ಸ್ಥಳೀಯಸಂಸ್ಥೆ, ಮೂಡುಬಿದರೆ, ಶ್ರೀ ಎಚ್.ಎಸ್. ವಿರುಪಾಕ್ಷಪ್ಪ, ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ಇತರ ಜಿಲ್ಲಾ ಹಾಗೂ ಸ್ಥಳೀಯ ಸಂಸ್ಥೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಪೋಷಕರು

ಪಿ.ಜಿ.ಆರ್. ಸಿಂಧ್ಯ

ಗೌರವ ಅಧ್ಯಕ್ಷರು

ಡಾ. ಗೊ.ರು. ಚನ್ನಬಸಪ್ಪ

ಅಧ್ಯಕ್ಷರು

ಕೊಂಡಜ್ಜಿ ಬ. ಷಣ್ಮುಖಪ್ಪ

ಸಂಪಾದಕರು

ಕೆ. ಗಂಗಪ್ಪಗೌಡ

ಸಹಸಂಪಾದಕರು

ಎನ್. ಶ್ರೀನಿವಾಸನ್

ಸಂಚಾಲಕರು

ಬಿ.ಎಸ್. ರವೀಂದ್ರ

ಸದಸ್ಯರು

ಮೋಹನ್ ಕೊಂಡಜ್ಜಿ
ಸಿ.ಪಿ. ಪರಮೇಶ್ವರ
ಚಳ್ಳಕೆರೆ ಯರ್ರಿಸ್ವಾಮಿ
ಎಂ.ಎನ್. ಷಡಕ್ಷರಿ
ಸಿ.ವಿ. ತಿರುಮಲರಾವ್
ಡಾ. ವಿಜಯಲಕ್ಷ್ಮಿ ಬಾಳೆಕುಂದ್ರಿ
ಡಾ. ವಸುಂಧರ ಭೂಪತಿ
ಡಾ. ಶಕುಂತಲ
ಪ್ರಭಾವತಿ ಪಾಟೀಲ್

ಸಂಚಿಕೆಯ ವಾರ್ಷಿಕ ಚಂದಾ ರೂ. 100/–
ವಿದ್ಯಾಸಂಸ್ಥೆ ಹಾಗೂ ಸಂಘ–ಸಂಸ್ಥೆಗಳಿಗೆ
ವಾರ್ಷಿಕ ಚಂದಾ ರೂ. 100/–

ಚಂದಾಹಣವನ್ನು
ಸಂಪಾದಕರು, ಕರ್ನಾಟಕ ಸ್ಕೌಟ್ ಮತ್ತು ಗೈಡ್ ಮಾಸಪತ್ರಿಕೆ
ರಾಜ್ಯ ಕೇಂದ್ರ ಕಛೇರಿ, ಶಾಂತಿಗೃಹ
#39, ಅರಮನೆ ರಸ್ತೆ, ಬೆಂಗಳೂರು – 560 001
ಇಲ್ಲಿಗೆ ಕಳುಹಿಸಲು ಕೋರಿದೆ.

ಕರ್ನಾಟಕ ಸ್ಕೌಟ್ ಮತ್ತು ಗೈಡ್

ಮಾಸಿಕ ವಾರ್ತಾಪತ್ರಿಕೆ

KARNATAKA Scout & Guide

MONTHLY NEWS MAGAZINE

Vol: 65 | Issue : 06 | June 2024

ಒಳಪುಟಗಳಲ್ಲಿ...

ರಾಜ್ಯ ಮುಖ್ಯ ಆಯುಕ್ತರ ನುಡಿ ...04

ಸಂಪಾದಕೀಯ ...05

ಭಾರತದ ಸಂಸದರುಗಳಿಗೆ ಹೃತ್ಪೂರ್ವಕವಾದ ಅಭಿನಂದನೆಗಳು ...06

ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳಿಗೆ ಬೆಂಗಳೂರಿನಲ್ಲಿ ಏರ್ಪಡಿಸಿದ ಅಭಿನಂದನಾ ಸಮಾರಂಭ ...07

ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳಿಗೆ ಗೌರವಿಸುವ ಕಾಯಕ್ರಮ (ಮೂಡುಬಿದರೆ) ...08

ಕೃತಿ ಲೋಕಾರ್ಪಣೆ ಸಮಾರಂಭದ ವರದಿ ...09

ಜುಲೈ 2024ರ ಮಾಹೆಯ ಕಾರ್ಯಕ್ರಮಗಳ ವಿವರಗಳು ...10

ಜಿಲ್ಲಾ ವಾರ್ತೆಗಳು ...12

Practise what you Preach & Preach what you Practise ...29

ಶ್ರದ್ಧಾಂಜಲಿ ...30

ಓದುಗರ ಗಮನಕ್ಕೆ

ಸಹೃದಯ ಓದುಗರೇ,

ಈ ಮಾಸಪತ್ರಿಕೆಯ ಬಗ್ಗೆ ತಮ್ಮ ಅನಿಸಿಕೆ ಅಭಿಪ್ರಾಯ ಮತ್ತು ಸಲಹೆಗಳನ್ನು ಕಳುಹಿಸಲು ಕೋರಿಕೆ. ಇದರಿಂದ ಮಾಸಪತ್ರಿಕೆಯನ್ನು ಮತ್ತಷ್ಟು ಉತ್ತಮಗೊಳಿಸಲು ಸಹಕಾರಿಯಾಗುತ್ತದೆ. ಅಲ್ಲದೆ ತಾವು, ಸ್ಕೌಟ್–ಗೈಡ್ ಚಳವಳಿಯ ಬಗ್ಗೆ ರಚಿಸಿರುವ ಕವನಗಳು, ಸಣ್ಣ ಕತೆಗಳು, ಪ್ರಬಂಧಗಳು, ಪ್ರವಾಸ ಕಥನಗಳು, ಶಿಬಿರದ ಅನುಭವಗಳು ಇತ್ಯಾದಿಗಳನ್ನು ಕಳುಹಿಸಿಕೊಡಲು ಕೋರಿದೆ. ಇವುಗಳಲ್ಲಿ ಸೂಕ್ತ ಕಂಡವುಗಳನ್ನು ಮಾಸಪತ್ರಿಕೆಯಲ್ಲಿ ಪ್ರಕಟಿಸಲಾಗುವುದು.

– ಸಂಪಾದಕರು



ರಾಜ್ಯ ಮುಖ್ಯ ಆಯುಕ್ತರ ನುಡಿ

ಸಮಸ್ತ ಸ್ಕೌಟ್ಸ್–ಗೈಡ್ಸ್ ಬಾಂಧವರಿಗೆ ಶುಭಾಶಯಗಳು

ಕಳೆದ ಶೈಕ್ಷಣಿಕ ವರ್ಷ ನಮ್ಮ ಸಂಸ್ಥೆಗೆ ಪೂರಕವಾದ ವರ್ಷವಾಗಿದೆ. ಗಣತಿಯಲ್ಲಿ ಸಾರ್ವಕಾಲಿಕ ದಾಖಲೆ ಮಾಡಿದ್ದೇವೆ. ನಮ್ಮ ಕಾರ್ಯಸೂಚಿಯಂತೆ ಕಾರ್ಯಕ್ರಮಗಳನ್ನು, ತರಬೇತಿಗಳನ್ನು ಸಮಾಧಾನಕರವಾಗಿ ನಡೆಸಿದ್ದೇವೆ. ಇದು ಒಬ್ಬ ವ್ಯಕ್ತಿ ಅಥವಾ ರಾಜ್ಯ ಸಂಸ್ಥೆಯಿಂದ ಮಾತ್ರ ಸಾಧ್ಯವಾಗಿಲ್ಲ. ಸ್ಕೌಟ್ಸ್–ಗೈಡ್ಸ್ ಚಳುವಳಿಯಲ್ಲಿ ತೊಡಗಿಸಿಕೊಂಡಿರುವ ಪ್ರತಿಯೊಬ್ಬ ವಿದ್ಯಾರ್ಥಿಗಳು, ಪೋಷಕರು, ವಿಶೇಷವಾಗಿ ಶಿಕ್ಷಕರುಗಳು, ನಮ್ಮ ಸ್ಥಳೀಯ ಪದಾಧಿಕಾರಿಗಳು, ಜನಪ್ರತಿನಿಧಿಗಳು ಇದೆಲ್ಲದರ ಜೊತೆಗೆ ಶಿಕ್ಷಣ ಇಲಾಖೆ ಮತ್ತು ಖಾಸಗಿ ಶಿಕ್ಷಣ ಸಂಸ್ಥೆಗಳ ಸಹಕಾರದಿಂದ ಇದು ಸಾಧ್ಯವಾಗಿದೆ.

ಇದೇ ಉತ್ಸಾಹ ಮತ್ತು ಬದ್ಧತೆಯೊಂದಿಗೆ 2024–25ನೇ ಸಾಲಿನಲ್ಲಿಯೂ ಎಲ್ಲರ ಸಹಕಾರದಿಂದ ರಾಜ್ಯದಲ್ಲಿ ಚಳುವಳಿಯ ಶಕ್ತಿ ಮತ್ತಷ್ಟು ಹೆಚ್ಚುತ್ತದೆ ಎಂಬ ನಂಬಿಕೆ ನನಗಿದೆ. ಈಗಾಗಲೇ ರಾಜ್ಯಸಂಸ್ಥೆಯಿಂದ ಈ ಸಾಲಿಗೆ ಹಮ್ಮಿಕೊಳ್ಳಬಹುದಾದ ಕಾರ್ಯಕ್ರಮಗಳ ಮಾರ್ಗಸೂಚಿಗಳನ್ನು ಪುಸ್ತಕರೂಪದಲ್ಲಿ ಸಿದ್ಧಪಡಿಸಿದ್ದು, ಅವುಗಳನ್ನು ರಾಜ್ಯದೆಲ್ಲೆಡೆ ತಲುಪಿಸುವ ಕಾರ್ಯದಲ್ಲಿ ತೊಡಗಿದ್ದೇವೆ. ಈ ಬಾರಿ ನಮ್ಮ ಕಾರ್ಯಕ್ರಮಗಳು ಮತ್ತು ತರಬೇತಿಗಳು ಗುಣಾತ್ಮಕ ಮತ್ತು ಆಕರ್ಷಣೀಯವಾಗಿವೆ. 2024–25ನೇ ಸಾಲಿನ ಸ್ಕೌಟ್ಸ್–ಗೈಡ್ಸ್ ಚಟುವಟಿಕೆಗಳಪ್ರಗತಿ ಮತಷ್ಟು ಯಶಸ್ವಿಗೊಳಿಸಲು ಉತ್ತಮ ಪೂರ್ವಯೋಜಿತ ತಯಾರಿ ಮುಖ್ಯವಾಗುತ್ತದೆ. ಇದರ ಹಿನ್ನೆಲೆಯಲ್ಲಿ, ರಾಜ್ಯಾದ್ಯಂತ ವಿವಿಧ ರೀತಿಯ ಶಿಬಿರಗಳನ್ನು ಆಯೋಜಿಸಿ, ಮಾಹಿತಿಗಳನ್ನು ಹಂಚಿಕೊಳ್ಳುವ ಪ್ರಯತ್ನದಲ್ಲಿದ್ದೇವೆ. ಅದಕ್ಕೆ ಸಕಾರಾತ್ಮಕ ಸ್ಪಂದನೆ ಸಿಕ್ಕಿರುವುದು ಸಂತೋಷದ ವಿಷಯ.

ದೊಡ್ಡಬಳ್ಳಾಪುರ, ಕೊಂಡಜ್ಜಿ, ವಿಜಯಪುರ, ಉಡುಪಿ ಮತ್ತು ಕೊಪ್ಪಳ ತರಬೇತಿ ಕೇಂದ್ರಗಳಲ್ಲಿ ಜುಲೈ 24 ರಿಂದ 30ರ ವರೆಗೆ ಆಯೋಜಿಸಿರುವ ಮುಂದುವರೆದ ತರಬೇತಿ ಶಿಬಿರಗಳಲ್ಲಿ ಸುಮಾರು 300ಕ್ಕಿಂತಲೂ ಹೆಚ್ಚಿನ ಸಂಖ್ಯೆಯಲ್ಲಿ ಶಿಬಿರಾರ್ಥಿಗಳು ಭಾಗವಹಿಸಿದ್ದಾರೆ. ಬೆಂಗಳೂರು, ರಾಯಚೂರು, ಕಲಬುರಗಿ, ಶಿವಮೊಗ್ಗ, ಧಾರವಾಡ, ದಕ್ಷಿಣ ಕನ್ನಡ ಮತ್ತು ಮೈಸೂರು ಜಿಲ್ಲೆಗಳಲ್ಲಿ ಹಮ್ಮಿಕೊಂಡಿರುವ ವಿಭಾಗಮಟ್ಟದ ಜಿಲ್ಲಾ ಮತ್ತು ಸ್ಥಳೀಯ ಸಂಸ್ಥೆಗಳ ಪದಾಧಿಕಾರಿಗಳು, ಉಪ ನಿರ್ದೇಶಕರುಗಳು ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳೊಂದಿಗಿನ ಸಮಾಲೋಚನಾ ಸಭೆಗಳು ಯಶಸ್ವಿಯಾಗಿ ನಡೆಯುತ್ತಿದ್ದು, ಸಭೆಗಳಲ್ಲಿ ವ್ಯಕ್ತವಾಗುವ ಸಲಹೆಗಳು ಮತ್ತು ಅಭಿಪ್ರಾಯಗಳನ್ನು ಸ್ವೀಕರಿಸುವ ಪ್ರಕ್ರಿಯೆಗಳು ಉತ್ತಮವಾಗಿ ನಡೆಯುತ್ತಿವೆ.

ಎಸ್.ಎಸ್.ಎಲ್.ಸಿ. ಮತ್ತು ಪಿ.ಯು.ಸಿ ಪರೀಕ್ಷೆಗಳು ಮಕ್ಕಳಿಗೆ ಪ್ರಾಥಮಿಕ ಹಂತದಲ್ಲಿ ಗುಣಮಟ್ಟದ ಶಿಕ್ಷಣದ ದೃಷ್ಟಿಯಿಂದ ಬಹಳ ಪ್ರಮುಖವಾದುವು. ಕಳೆದ ವರ್ಷಕ್ಕೆ ಹೋಲಿಸಿದರೆ ಈ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಫಲಿತಾಂಶದ ಪ್ರಮಾಣ ಕುಸಿತ ಕಂಡಿದೆ. ಆದರೆ ಪರೀಕ್ಷೆ ಬರೆದಿದ್ದ ನಮ್ಮ ಸ್ಕೌಟ್ಸ್–ಗೈಡ್ಸ್‌ಗಳು ಗಣನೀಯ ಪ್ರಮಾಣದಲ್ಲಿ ತೇರ್ಗಡೆ ಹೊಂದುವ ಮೂಲಕ ಸಂಸ್ಥೆಗೆ ಹೆಮ್ಮೆ ತಂದಿರುತ್ತಾರೆ. ಅಂತಹ ಎಲ್ಲ ವಿದ್ಯಾರ್ಥಿಗಳನ್ನು ನಾನು ಅಭಿನಂದಿಸುತ್ತೇನೆ. ಬೆಂಗಳೂರಿನ ಆರ್.ಟಿ.ನಗರ ಶಾಲೆಯಲ್ಲಿ ಮತ್ತು ಮೂಡಬಿದಿರೆಯ ಆಳ್ವಾಸ್ ಶಿಕ್ಷಣ ಸಂಸ್ಥೆಯಲ್ಲಿ ಎಸ್.ಎಸ್.ಎಲ್.ಸಿ. ಮತ್ತು ಪಿ.ಯು.ಸಿ.ಯಲ್ಲಿ ಶೇ. 90% ಗಿಂತ ಹೆಚ್ಚು ಅಂಕಗಳಿಸಿದ ರಾಜ್ಯದ ಪ್ರತಿಭಾನ್ವಿತ ಸ್ಕೌಟ್ಸ್–ಗೈಡ್ಸ್‌ಗಳನ್ನು ನಮ್ಮ ಸಂಸ್ಥೆಯ ಪರವಾಗಿ ಅಭಿನಂದಿಸಿದ್ದೇವೆ. ಈ ಮಹತ್‌ಕಾರ್ಯಕ್ಕೆ ಸಹಾಯ ಮತ್ತು ನೆರವು ನೀಡಿರುವ ಆಳ್ವಾಸ್ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಡಾ. ಮೋಹನ್ ಆಳ್ವ ಮತ್ತು ಆರ್.ಟಿ. ನಗರ ಪಬ್ಲಿಕ್ ಶಾಲೆಯ ಅಧ್ಯಕ್ಷರಾದ ಶ್ರೀ ಬಿ.ಆರ್. ಪ್ರಸನ್ನಕುಮಾರ್ ಅವರಿಗೆ ಕೃತಜ್ಞತೆಗಳನ್ನು ಸಲ್ಲಿಸುತ್ತೇನೆ. ನಮ್ಮ ಸಂಸ್ಥೆಯ ಪದಾಧಿಕಾರಿಗಳೂ ಆಗಿರುವ ಈ ಇಬ್ಬರು ಚಳುವಳಿಗೆ ನೀಡುತ್ತಿರುವ ಪ್ರೋತ್ಸಾಹ ಶ್ಲಾಘನೀಯವಾದುದು.

ಜೂನ್ ತಿಂಗಳೆಂದರೆ ಅದಕ್ಕೊಂದು ವಿಶೇಷತೆ ಇದೆ. ಈ ತಿಂಗಳಿನಲ್ಲಿ ಪರಿಸರ ದಿನಾಚರಣೆ ಮತ್ತು ಯೋಗದಿನವನ್ನು ರಾಜ್ಯಾದ್ಯಂತ ನಮ್ಮ ಸಂಸ್ಥೆಯಿಂದ ವೈವಿದ್ಯಪೂರ್ಣವಾಗಿ ಮತ್ತು ಯಶಸ್ವಿಯಾಗಿ ಆಚರಿಸಲಾಗಿದೆ. ಪರಿಸರ ದಿನಾಚರಣೆಯಲ್ಲಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಹಾಗೂ ಯೋಗ ದಿನದ ಆಚರಣೆಯಲ್ಲಿ ರಾಜ್ಯ ಆಯುಷ್ ಇಲಾಖೆ ಸ್ಕೌಟ್ಸ್–ಗೈಡ್ಸ್ ನಮ್ಮ ಸಂಸ್ಥೆಯನ್ನು ತೊಡಗಿಸಿಕೊಂಡಿದೆ. ಅದಕ್ಕಾಗಿ ಈ ಇಲಾಖೆಗಳ ಅಧಿಕಾರಿಗಳಿಗೆ ಧನ್ಯವಾದಗಳನ್ನು ತಿಳಿಸುತ್ತಾ, ಇವುಗಳ ಆಚರಣೆಗಳ ಯಶಸ್ವಿಗಾಗಿ ಶ್ರಮಿಸಿದ ಎಲ್ಲ ಶಿಕ್ಷಕರಿಗೆ, ಸಂಸ್ಥೆಯ ಪದಾಧಿಕಾರಿಗಳಿಗೆ, ಸಿಬ್ಬಂದಿಗಳಿಗೆ ಮತ್ತು ಪೋಷಕರಿಗೆ ನನ್ನ ಹೃದಯಪೂರ್ವಕ ಅಭಿನಂದನೆಗಳು.

ಸ್ಕೌಟ್ಸ್–ಗೈಡ್ಸ್ ಚಳುವಳಿಯ ತತ್ವಗಳು ಮಕ್ಕಳಲ್ಲಿ ಶಿಸ್ತು, ಸಹನೆ, ಸಮಯಪಾಲನೆ, ಸಹಬಾಳ್ವೆಗಳು ಚಿಕ್ಕಂದಿನಿಂದಲೇ ಮೈಗೂಡುವಂತೆ ಮಾಡುತ್ತವೆ. ಇವುಗಳು ವಿದ್ಯಾರ್ಥಿಗಳ ಸಾಧನೆಯಲ್ಲಿ ಗಮನಾರ್ಹವಾದ ಬದಲಾವಣೆಗಳನ್ನು ತರಬಹುದಾಗಿವೆ. ಈ ನಿಟ್ಟಿನಲ್ಲಿ ಶಿಕ್ಷಣ ಇಲಾಖೆ ಮತ್ತು ಖಾಸಗಿ ಶಿಕ್ಷಣ ಸಂಸ್ಥೆಗಳು ಸ್ಕೌಟ್ಸ್–ಗೈಡ್ಸ್ ಸಂಸ್ಥೆಯಿಂದ ಸಾಕಷ್ಟು ನಿರೀಕ್ಷೆಗಳನ್ನು ಇಟ್ಟುಕೊಂಡಿವೆ. ಇದಕ್ಕೆ ಪೂರಕವಾಗಿ ನಾವು ಅವರೊಂದಿಗೆ ಸಮನ್ವಯ ಸಾಧಿಸಬೇಕು. ಶಿಕ್ಷಕರಿಗೆ ಹಲವಾರು ಸಮಸ್ಯೆಗಳು ಮತ್ತು ಹೊರಲಾರದಷ್ಟು ಒತ್ತಡಗಳಿರುತ್ತವೆ. ಅದನ್ನೆಲ್ಲಾ ಗಮನದಲ್ಲಿಟ್ಟುಕೊಂಡು, ನಮ್ಮ ರಾಜ್ಯ, ಜಿಲ್ಲಾ ಮತ್ತು ಸ್ಥಳೀಯ ಸಂಸ್ಥೆಯ ಎಲ್ಲ ಪದಾಧಿಕಾರಿಗಳು ಕರ್ತವ್ಯ ನಿರ್ವಹಿಸುವ ನಂಬಿಕೆ ನನಗಿದೆ.

ನಮ್ಮ ರಾಜ್ಯದ ಸಂಸದರುಗಳು ರಾಜ್ಯದಲ್ಲಿ ಸ್ಕೌಟ್ಸ್–ಗೈಡ್ಸ್ ಚಳುವಳಿಯ ಬೆಳವಣಿಗೆಗೆ ಒಂದಲ್ಲಾ ಒಂದು ರೀತಿಯಲ್ಲಿ ಪ್ರೋತ್ಸಾಹ ನೀಡುತ್ತಾ ಬಂದಿರುವುದನ್ನು ಸ್ಮರಿಸುತ್ತಾ, 18ನೇ ಲೋಕಸಭಾ ಚುನಾವಣೆಯಲ್ಲಿ ಜಯಶೀಲರಾಗಿರುವ ಎಲ್ಲ ಸಂಸದರಿಗೆ ಹಾಗೂ ಅವರಲ್ಲಿ ಕೇಂದ್ರ ಸರ್ಕಾರದ ಸಚಿವ ಸಂಪುಟದಲ್ಲಿ ಸದಸ್ಯರುಗಳಾಗಿರುವ ಶ್ರೀ ಹೆಚ್.ಡಿ. ಕುಮಾರಸ್ವಾಮಿ, ಶ್ರೀ ಪ್ರಹ್ಲಾದ್ ಜೋಷಿ, ಶ್ರೀಮತಿ ನಿರ್ಮಲಾ ಸೀತಾರಾಮನ್ ಹಾಗೂ ಕುಮಾರಿ ಶೋಭಾ ಕರಂದ್ಲಾಜೆ ಹಾಗೂ ಶ್ರೀ ವಿ. ಸೋಮಣ್ಣ ಅವರುಗಳಿಗೆ ನಮ್ಮ ರಾಜ್ಯ ಸಂಸ್ಥೆಯ ಪರವಾಗಿ ಹೃತ್ಪೂರ್ವಕವಾದ ಅಭಿನಂದನೆಗಳನ್ನು ಸಲ್ಲಿಸುತ್ತೇನೆ.

ಬೆಂಗಳೂರು ಅರಮನೆ ರಸ್ತೆಯ ನಮ್ಮ ರಾಜ್ಯ ಸಂಸ್ಥೆಯ ಕ್ಯಾಂಪಸ್‌ನ ಒಳಾಂಗಣದ ರಸ್ತೆಗಳ ಅಭಿವೃದ್ಧಿ ಕಾಮಗಾರಿಯನ್ನು ಬಿಬಿಎಂಪಿ ವತಿಯಿಂದ ಕೈಗೆತ್ತಿಕೊಳ್ಳುವ ಮೂಲಕ ನಮ್ಮ ದೀರ್ಘಕಾಲದ ಬೇಡಿಕೆಯನ್ನು ಈಡೇರಿಸಿರುವ ರಾಜ್ಯದ ಉಪಮುಖ್ಯಮಂತ್ರಿಗಳಾದ ಸನ್ಮಾನ್ಯ ಶ್ರೀ ಡಿ.ಕೆ. ಶಿವಕುಮಾರ್ ಅವರಿಗೆ ನನ್ನ ಧನ್ಯವಾದಗಳನ್ನು ಸಲ್ಲಿಸುತ್ತೇನೆ. ಕನ್ನಡ ಸಾಹಿತ್ಯ ಕ್ಷೇತ್ರದಲ್ಲಿ ಅಪಾರ ಸಾಧನೆ ಮಾಡಿರುವ ಹಾಗೂ ಮೂಡಬಿದಿರೆಯಲ್ಲಿ ನಡೆದ 71ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರಾಗಿದ್ದ ಶ್ರೇಷ್ಠ ಸಾಹಿತಿ ಶ್ರೀಮತಿ ಕಮಲಾ ಹಂಪನಾ ಅವರು ಇತ್ತೀಚೆಗೆ ನಮ್ಮನ್ನಗಲಿದ್ದಾರೆ. ಅವರ ಆತ್ಮಕ್ಕೆ ಚಿರಶಾಂತಿಯನ್ನು ಕೋರುತ್ತೇನೆ.

ಸ್ಕೌಟ್ಸ್ ಮತ್ತು ಗೈಡ್ಸ್ ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ

(ಪಿ.ಜೆ.ಆರ್. ಸಿಂಧ್ಯ)

ರಾಜ್ಯ ಮುಖ್ಯ ಆಯುಕ್ತರು

ಸಂಪಾದಕೀಯ



ಮಾನ್ಯರೆ,

ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್‌ನ ಕಾರ್ಯಕ್ರಮಗಳು, ಚಟುವಟಿಕೆಗಳು, ತರಬೇತಿಗಳು ಈ ಚಳವಳಿಗೆ ಪೂರಕ ಮತ್ತು ಪ್ರೇರಕವಾಗುವಲ್ಲಿ 2024–25ನೇ ಸಾಲಿನಲ್ಲಿ, ಪ್ರಾರಂಭಿಕ ಹಂತದಿಂದಲೇ ಯೋಜಿಸಿ, ಯೋಚಿಸಿ ನಿರ್ವಹಿಸುವಲ್ಲಿ ಹಲವಾರು ಕ್ರಮಗಳನ್ನು ಕೈಗೊಂಡಿರುವುದು ಸುವೇದ್ಯ.

ಈ ಚಳವಳಿಯ ಎಲ್ಲಾ ಕಾರ್ಯಕ್ರಮಗಳು, ಚಟುವಟಿಕೆಗಳು, ತರಬೇತಿಗಳು ಸಕಾಲದಲ್ಲಿ ಸಮರ್ಪಕವಾಗಿ ನಿರ್ವಹಣೆ ಆಗುವಲ್ಲಿ ಆಯಾಯ ಸ್ಥಳೀಯ ಸಂಸ್ಥೆಗಳ, ಜಿಲ್ಲಾ ಸಂಸ್ಥೆಗಳ ಮತ್ತು ರಾಜ್ಯ ಸಂಸ್ಥೆಗಳ ಹಂತದಲ್ಲಿ ಆಯಾಯ ತಿಂಗಳುಗಳಲ್ಲಿ ನಿರ್ವಹಿಸಬೇಕಾದವುಗಳ ಬಗ್ಗೆ ಸ್ಪಷ್ಟ ಮಾಹಿತಿಗಳನ್ನು ರಾಜ್ಯ ಮುಖ್ಯ ಆಯುಕ್ತರ ನೇತೃತ್ವದಲ್ಲಿ ಬಹಳಷ್ಟು ಚಿಂತನ–ಮಂಥನ, ಪರಸ್ಪರ ಚರ್ಚೆ, ವಿಮರ್ಶಾತ್ಮಕ ಕ್ರಮಗಳೊಂದಿಗೆ (Consultative processes) 2024–25ರ ವಾರ್ಷಿಕ ಕಾರ್ಯಕ್ರಮಗಳ ಯೋಜನಾ ಪುಸ್ತಕವನ್ನು ಕಾರ್ಯಾನುಷ್ಠಾನ ಅಧಿಕಾರಿಗಳೆಲ್ಲರಿಗೂ / ನಾಯಕರುಗಳೆಲ್ಲರಿಗೂ ತಲುಪಿಸುವಲ್ಲಿ ಕ್ರಮವಹಿಸುವುದು ಹರ್ಷದಾಯಕ. ಇದನ್ನು ಸಕ್ರಿಯವಾಗಿ ಅನುಷ್ಠಾನಗೊಳಿಸುವಲ್ಲಿ ಆದ್ಯಕ್ರಮವಹಿಸುವಲ್ಲಿ, ಜಿಲ್ಲಾ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖಾ ಅಧಿಕಾರಿಗಳೊಂದಿಗೆ, ಆಯ್ದ ಸ್ಥಳೀಯ ಸಂಸ್ಥೆಗಳ, ಜಿಲ್ಲಾ ಸಂಸ್ಥೆಗಳ ಪದಾಧಿಕಾರಿಗಳೊಂದಿಗೆ ರಾಜ್ಯದ ಆಯ್ದ ಅಧಿಕಾರಿಗಳೊಂದಿಗೆ, ವಿವಿಧ ಜಿಲ್ಲಾ ಕೇಂದ್ರಗಳಲ್ಲಿ ಹಮ್ಮಿಕೊಂಡ "ಸಮಾಲೋಚನಾ ಕಾರ್ಯಾಗಾರ" ಬಹಳಷ್ಟು ಫಲಪ್ರದವಾಗಿರುವುದು ಹರ್ಷದಾಯಕ. ಸದರಿ "ಸಮಾಲೋಚನಾ ಕಾರ್ಯಾಗಾರ"ದ ಘನ ತೀರ್ಮಾನಗಳನ್ನು ಸಕ್ರಿಯವಾಗಿ ಅನುಷ್ಠಾನಗೊಳಿಸಿ, ಸ್ಕೌಟ್ಸ್–ಗೈಡ್ಸ್ ಚಟುವಟಿಕೆಗಳು ಇನ್ನೂ ಹೆಚ್ಚು ಗುಣಾತ್ಮಕ ಶಿಕ್ಷಣದ ಸಾಧನೆಗೆ ಪೂರಕವಾಗುವಲ್ಲಿ ಶ್ರಮಿಸಲು ವಿನಂತಿಸಿದೆ.

ಮಕ್ಕಳ "ಅಂಕಗಳಿಕೆಯಿಂದ ಸಕಲ ಭಾಗ್ಯಗಳೂ ವಶಕ್ಕೆ" ಎಂಬ ಸೂತ್ರದಲ್ಲಿ ಕೇವಲ ಶಿಕ್ಷಕರು, ಶಾಲಾ–ಕಾಲೇಜು ಮುಖ್ಯಸ್ಥರೂ ಮಾತ್ರ ಅಲ್ಲದೆ ಪಾಲಕರೂ ಪಾತ್ರವಹಿಸುತ್ತಿರುವುದು ಆತಂಕಕಾರಿ. ಈ ಮನೋಭಾವ ಮಕ್ಕಳ ಸಹಜಾನಂದವನ್ನು ಕಬಳಿಸುವುದನ್ನು ಮನಗಂಡು, ಇದನ್ನು ಹೋಗಲಾಡಿಸುವಲ್ಲಿ ಈ ಬಗ್ಗೆ 6 ವರ್ಷಗಳಿಂದ ಸ್ಕೌಟ್ಸ್–ಗೈಡ್ಸ್‌ನ 10 ಮತ್ತು 12 ತರಗತಿಯ (2ನೇ ಪಿ.ಯು.ಸಿ) ವಿದ್ಯಾರ್ಥಿಗಳ ಪಬ್ಲಿಕ್ ಪರೀಕ್ಷೆಗಳಲ್ಲಿ ಅತೀ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳನ್ನು ಸನ್ಮಾನಿಸುವ ವಿಶೇಷ ಕಾರ್ಯಕ್ರಮವನ್ನು ರಾಜ್ಯ ಸಂಸ್ಥೆಯು ಹಮ್ಮಿಕೊಂಡಿರುವುದು ಸರಿಯಷ್ಟೆ. ತನ್ಮೂಲಕ ವಿದ್ಯಾರ್ಥಿಗಳು ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಚಟುವಟಿಕೆಗಳಲ್ಲಿ ಭಾಗವಹಿಸಿದರೆ ಅವರ ಗುಣಮಟ್ಟದ ಶಿಕ್ಷಣದ ಶ್ರೇಷ್ಠತೆಯ ಸಾಧನೆಗೆ ಪೂರಕ, ಪ್ರೇರಕವೇ ವಿನಹ ಅಡಚಣೆಯಲ್ಲ ಎಂಬುದನ್ನು ಪ್ರತಿವರ್ಷ 90%ಕ್ಕೂ ಹೆಚ್ಚು ಅಂಕ ಪಡೆದು ಸಂಸ್ಥೆಯ ಆದರಾಭಿಮಾನದ ಸನ್ಮಾನಕ್ಕೆ ಪಾತ್ರರಾಗುತ್ತಿರುವ ಸಾವಿರಾರು ವಿದ್ಯಾರ್ಥಿಗಳೇ ಸಾಕ್ಷಿಆಗಿರುವುದು ಸ್ಪಷ್ಟಪಡಿಸುತ್ತದೆ.

ಜೂನ್ 2024ರಲ್ಲಿ ಏರ್ಪಟ್ಟ ಪರಿಸರ ದಿನಾಚರಣಾ ಕಾರ್ಯಕ್ರಮಗಳು, ಯೋಗ ಕಾರ್ಯಕ್ರಮಗಳು, ಇತ್ಯಾದಿಗಳು ಯುವಜನಾಂಗದಲ್ಲಿ ಸಾಮಾಜಿಕ ಜಾಗೃತಿಯನ್ನುಂಟುಮಾಡುತ್ತಿರುವುದಲ್ಲದೆ, ಸಾರ್ವಜನಿಕರಲ್ಲಿ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಚಳವಳಿಯು, ತನ್ನದೇ ಆದ ವಿಶಿಷ್ಟ–ವಿಶೇಷ ಪಾತ್ರ ಹೊಂದಿರುವುದನ್ನು ಮನಗಾಣಬಹುದಾಗಿದೆ.

ಒಟ್ಟಿನಲ್ಲಿ ಭಾರತ್ ಸ್ಕೌಟ್ಸ್–ಗೈಡ್ಸ್ ಚಳವಳಿಯು, ಯುವಜನಾಂಗದ ಸರ್ವಾಂಗೀಣ ಅಭಿವೃದ್ಧಿಗೆ, ಗುಣಾತ್ಮಕ ಶಿಕ್ಷಣದ ಸಾಧನೆಗೆ ಅತ್ಯಗತ್ಯವಾಗಿದ್ದು, ಇದರ ಶ್ರೇಯೋಭಿವೃದ್ಧಿ ಕಾರ್ಯಕ್ರಮಗಳಿಗೆ, ಚಟುವಟಿಕೆಗಳಿಗೆ ಸರ್ವರೂ ಪ್ರೋತ್ಸಾಹಿಸಿ, ತನ್ಮೂಲಕ ದೇಶದ ಭವ್ಯ ಭವಿಷ್ಯದ ನಿರ್ಮಾಣಕ್ಕೆ ಪೂರಕರಾಗೋಣ ಎಂದು ಈ ಮೂಲಕ ವಿನಂತಿಸುತ್ತೇನೆ.

ನಮ್ಮ 2024–25ನೇ ಸಾಲಿನ ಯೋಜನಾ ಕಾರ್ಯಕ್ರಮಗಳಲ್ಲಿ ಜೂನ್ 2024ರ ಮಾಹೆಯ ಬಹಳಷ್ಟು ಕಾರ್ಯಕ್ರಮಗಳನ್ನು, ಚಟುವಟಿಕೆಗಳನ್ನು ಮತ್ತು ತರಬೇತಿಗಳನ್ನು ಸಮರ್ಪಕವಾಗಿ, ಸಮರ್ಥವಾಗಿ ನಿರ್ವಹಿಸುತ್ತಿರುವ ಸರ್ವರಿಗೂ ಸಂಸ್ಥೆಯ ಅಭಿನಂದನೆಗಳನ್ನು ಈ ಮೂಲಕ ತಿಳಿಸಬಯಸುತ್ತೇನೆ.

ಸ್ಕೌಟ್ಸ್–ಗೈಡ್ಸ್ ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ

(ಕೆ. ಗಂಗಪ್ಪಗೌಡ)
ಸಂಪಾದಕರು ಹಾಗೂ ರಾಜ್ಯ ಕಾರ್ಯದರ್ಶಿ
ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್, ಕರ್ನಾಟಕ



18ನೇ ಲೋಕಸಭೆಗೆ ಕರ್ನಾಟಕದಿಂದ ಆಯ್ಕೆಯಾದ 28 ಸಂಸದರುಗಳಲ್ಲಿ
ಭಾರತದ ಪ್ರದಾನಮಂತ್ರಿಗಳಾದ ಸನ್ಮಾನ್ಯ ಶ್ರೀ ನರೇಂದ್ರ ಮೋದಿ ಅವರ
ಸಚಿವ ಸಂಪುಟದಲ್ಲಿ ಸ್ಥಾನ ಪಡೆದಿರುವ
ಶ್ರೀ ಹೆಚ್.ಡಿ. ಕುಮಾರಸ್ವಾಮಿ, ಶ್ರೀ ಪ್ರಹ್ಲಾದ್ ಜೋಷಿ,
ಕು. ಶೋಭಾ ಕರಂದ್ಲಾಜೆ, ಶ್ರೀ ವಿ.ಸೋಮಣ್ಣ ಮತ್ತು
ರಾಜ್ಯಸಭಾ ಸದಸ್ಯರಾದ ಶ್ರೀಮತಿ ನಿರ್ಮಲಾ ಸೀತಾರಾಮನ್ ಇವರುಗಳಿಗೆ
ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಕರ್ನಾಟಕ ರಾಜ್ಯ ಸಂಸ್ಥೆಯಿಂದ

ಹೃತ್ಪೂರ್ವಕವಾದ ಅಭಿನಂದನೆಗಳು



ಶ್ರೀಮತಿ ನಿರ್ಮಲಾ ಸೀತಾರಾಮನ್
ಮಾನ್ಯ ಹಣಕಾಸು ಸಚಿವರು,
ಭಾರತ ಸರ್ಕಾರ



ಶ್ರೀ ಹೆಚ್.ಡಿ. ಕುಮಾರಸ್ವಾಮಿ
ಮಾನ್ಯ ಬೃಹತ್ ಕೈಗಾರಿಕೆ ಹಾಗು ಸಾರ್ವಜನಿಕ
ಉದ್ಯಮ ಸಚಿವರು, ಭಾರತ ಸರ್ಕಾರ



ಶ್ರೀ ಪ್ರಹ್ಲಾದ್ ಜೋಷಿ
ಮಾನ್ಯ ಗ್ರಾಹಕ ವ್ಯವಹಾರಗಳ, ಆಹಾರ ಮತ್ತು
ನಾಗರೀಕ ಸರಬರಾಜು ಇಲಾಖೆಗಳ ಸಚಿವರು
ಭಾರತ ಸರ್ಕಾರ



ಕು. ಶೋಭಾ ಕರಂದ್ಲಾಜೆ
ಮಾನ್ಯ ಸಣ್ಣ ಹಾಗೂ ಮಧ್ಯಮ ಕೈಗಾರಿಕೆ ಮತ್ತು
ಕಾರ್ಮಿಕ ಉದ್ಯೋಗ ಇಲಾಖೆಗಳ ರಾಜ್ಯ ಸಚಿವರು
ಭಾರತ ಸರ್ಕಾರ



ಶ್ರೀ ವಿ. ಸೋಮಣ್ಣ
ಮಾನ್ಯ ರೈಲ್ವೆ ಮತ್ತು ಜಲಶಕ್ತಿ ಇಲಾಖೆಗಳ
ರಾಜ್ಯ ಸಚಿವರು
ಭಾರತ ಸರ್ಕಾರ

2023–24ನೇ ಸಾಲಿನ ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿ ಪರೀಕ್ಷೆಯಲ್ಲಿ ಶೇಕಡ 90ಕ್ಕಿಂತ ಹೆಚ್ಚು ಅಂಕಗಳಿಸಿದ ಸ್ಕೌಟ್ಸ್–ಗೈಡ್ಸ್ ಮತ್ತು ರೋವರ್ಸ್–ರೇಂಜರ್ಸ್‌ಗಳಿಗೆ

ಬೆಂಗಳೂರಿನಲ್ಲಿ ಏರ್ಪಡಿಸಿದ ಅಭಿನಂದನಾ ಸಮಾರಂಭದ ವರದಿ



ಬೆಂಗಳೂರು ಉತ್ತರ ಜಿಲ್ಲೆಯ ಸಹಯೋಗದಲ್ಲಿ ಎಸ್.ಎಸ್. ಎಲ್.ಸಿ. ಮತ್ತು ಪಿ.ಯು.ಸಿ. ಪರೀಕ್ಷೆಯಲ್ಲಿ ಶೇ. 90%ಕ್ಕೂ ಹೆಚ್ಚು ಅಂಕಗಳಿಸಿದ ಸ್ಕೌಟ್ಸ್–ಗೈಡ್ಸ್ ಮತ್ತು ರೋವರ್ಸ್–ರೇಂಜರ್ಸ್‌ಗಳ ಅಭಿನಂದನ ಕಾರ್ಯಕ್ರಮವು ಜೂನ್ 16 ರಂದು ಅರ್.ಟಿ. ನಗರ ಪಬ್ಲಿಕ್ ಶಾಲೆಯ ಸಭಾಂಗಣದಲ್ಲಿ ನೆರವೇರಿಸಲಾಯಿತು.

ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಕರ್ನಾಟಕ ಸರಕಾರದ ಸಾರಿಗೆ ಹಾಗೂ ಮುಜರಾಯಿ ಇಲಾಖೆಗಳ ಸಚಿವರಾದ ಮಾನ್ಯಶ್ರೀ ರಾಮಲಿಂಗರೆಡ್ಡಿ ಅವರು ಭಾಗವಹಿಸಿ "ಸ್ಕೌಟ್ಸ್– ಗೈಡ್ಸ್ ಸಂಸ್ಥೆಯು ಜನಜಾಗೃತಿ ಹಾಗೂ ಸಮಾಜಮುಖಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಬರುತ್ತಿದ್ದು ಇದು ಹೆಮ್ಮೆಯ ವಿಷಯವಾಗಿದೆ" ಎಂದರು. ರಾಜ್ಯ ಮುಖ್ಯ ಆಯುಕ್ತರಾದ ಶ್ರೀ ಪಿ.ಜಿ.ಆರ್. ಸಿಂಧ್ಯಾ ಅವರು ಮಾತನಾಡಿ "ಸ್ಕೌಟ್ಸ್–ಗೈಡ್ಸ್ ಚಟುವಟಿಕೆಯಲ್ಲಿ ಭಾಗವಹಿಸಿದ ಮಕ್ಕಳು ಕೂಡ ಎಸ್.ಎಸ್.ಎಲ್.ಸಿ. ಮತ್ತು ಪಿ.ಯು.ಸಿ. ಪರೀಕ್ಷೆಯಲ್ಲಿ ಶೇ. 90%ಕ್ಕೂ ಹೆಚ್ಚು ಅಂಕಗಳಿಸಿದ್ದು ಇದು ಮಾದರಿಯಾಗಿದ್ದು, ಸ್ಕೌಟ್ಸ್–ಗೈಡ್ಸ್ ಚಟುವಟಿಕೆಯು ಯಾವುದೇ ವಿದ್ಯಾರ್ಥಿಗಳಿಗೆ ಅಂಕಗಳಿಸಲು ತೊಡಕು ಉಂಟು ಮಾಡುವುದಿಲ್ಲ ಎಂದು ನೀವು ತೋರಿಸಿಕೊಟ್ಟಿದ್ದೀರಿ" ಎಂದು ಅಭಿನಂದನೆ ಸಲ್ಲಿಸಿದರು.

ವೇದಿಕೆಯಲ್ಲಿ ರಾಜ್ಯ ಉಪಾಧ್ಯಕ್ಷರಾದ ಶ್ರೀ ಕೊಂಡಜ್ಜಿ ಬ. ಷಣ್ಮುಖಪ್ಪ, ಶ್ರೀ ಕೆ. ಗಂಗಪ್ಪಗೌಡ, ರಾಜ್ಯ ಕಾರ್ಯದರ್ಶಿಗಳು, ಶ್ರೀಮತಿ ಗೀತಾ ನಟರಾಜ್, ರಾಜ್ಯ ಗೈಡ್ಸ್ ಆಯುಕ್ತರು, ಶ್ರೀಮತಿ ಬಿ.ವಿ. ರಾಮಲತಾ, ರಾಜ್ಯ ಆಯುಕ್ತರು (ವಯಸ್ಕ ಸಂಪನ್ಮೂಲ), ಜಿಲ್ಲಾ ಕಾರ್ಯದರ್ಶಿ ಶ್ರೀ ಬಿ.ಕೆ. ಶೇಷಾದ್ರಿ, ಜಿಲ್ಲಾ ಸ್ಕೌಟ್ಸ್ ಆಯುಕ್ತ ಶ್ರೀ ಹೇಮಂತ್‌ಕುಮಾರ್, ಚಾಮುಂಡಿ ಸ್ಕೌಟ್‌ದಳದ ನಾಯಕರಾದ ಶ್ರೀ ಕೆ. ನರಸಿಂಹಮೂರ್ತಿ ಹಾಗೂ ಬೆಂಗಳೂರು ಉತ್ತರ ಜಿಲ್ಲೆಯ ಸ್ಥಳೀಯ ಸಂಸ್ಥೆಗಳ ಕಾರ್ಯದರ್ಶಿಗಳು, ಜಿಲ್ಲಾ ತರಬೇತಿ ಆಯುಕ್ತರಾದ ಶ್ರೀ ಸತ್ಯಜೀತ್ ಚಟರ್ಜಿ ಹಾಗೂ ಜಿಲ್ಲಾ ಜಂಟಿ ಕಾರ್ಯದರ್ಶಿ ಶ್ರೀಮತಿ ಪುಷ್ಪ ಇವರುಗಳು ಉಪಸ್ಥಿತರಿದ್ದರು. ಆರ್.ಟಿ. ನಗರ ಪಬ್ಲಿಕ್ ಶಾಲೆಯ ಸಂಸ್ಥಾಪಕರೂ ಹಾಗೂ ಬೆಂಗಳೂರು ಉತ್ತರ ಜಿಲ್ಲಾ ಸಂಸ್ಥೆಯ ಮುಖ್ಯ ಆಯುಕ್ತರಾದ ಡಾ. ಬಿ.ಆರ್. ಪ್ರಸನ್ನ ಕುಮಾರ್ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ, ರಾಜ್ಯ ಮಟ್ಟದ ಈ ಕಾರ್ಯಕ್ರಮವನ್ನು ಯಶಸ್ವಿಯಾಗಿ ನೆರೆವೇರಿಸಲು ಎಲ್ಲಾ ರೀತಿಯ ಸಹಾಯ, ಸಹಕಾರ ನೀಡಿದರು.

ರಾಜ್ಯ ಗೈಡ್ಸ್ ಸಂಘಟನಾ ಆಯುಕ್ತರಾದ ಶ್ರೀಮತಿ ಸಿ. ಮಂಜುಳಾ ಸಭಾ ಕಾರ್ಯಕ್ರಮವನ್ನು ನಿರೂಪಿಸಿದರು. ರಾಜ್ಯ ಸ್ಕೌಟ್ಸ್ ಮತ್ತು ಗೈಡ್ಸ್ ತರಬೇತಿ ಆಯುಕ್ತರುಗಳಾದ ಶ್ರೀಮತಿ ಕೆ.ವಿ. ಶ್ಯಾಮಲ ಹಾಗೂ ಶ್ರೀ ನಾಗೇಶ ಶಿವಪೂರ್ ಹಾಗೂ ರಾಜ್ಯ ಸಂಸ್ಥೆ ಸಹಾಯಕ ಕಾರ್ಯದರ್ಶಿ ಶ್ರೀ ಎಲ್.ಟಿ. ಲೋಕೇಶ್ ಮತ್ತು ರಾಜ್ಯ ಸಂಘಟನಾ ಆಯುಕ್ತಾರಾದ ಶ್ರೀಮತಿ ಕುಮಾರಿ ಹೊನ್ನಮ್ಮ ಇವರುಗಳು ಕಾರ್ಯಕ್ರಮವನ್ನು ಯಶಸ್ವಿಯಾಗಿ ಆಚರಿಸಲು ಸಹಕರಿಸಿದರು. ಆರ್.ಟಿ.ನಗರ ಸ್ಥಳೀಯ ಸಂಸ್ಥೆ ಕಾರ್ಯದರ್ಶಿ ಶ್ರೀಮತಿ ಸುನೀತ ಅವರು ಭಾಗವಹಿಸಿದ ಎಲ್ಲರಿಗೂ ಧನ್ಯವಾದ ಸಲ್ಲಿಸಿದರು.

2023–24ನೇ ಸಾಲಿನ ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿ ಪರೀಕ್ಷೆಯಲ್ಲಿ ಶೇಕಡ 90ಕ್ಕಿಂತ ಹೆಚ್ಚು ಅಂಕಗಳಿಸಿದ ಸ್ಕೌಟ್ಸ್–ಗೈಡ್ಸ್ ಮತ್ತು ರೋವರ್ಸ್–ರೇಂಜರ್ಸ್‌ಗಳಿಗೆ

ಗೌರವಿಸುವ ಕಾರ್ಯಕ್ರಮ (ಮೂಡುಬಿದರೆ)



ರಾಜ್ಯ ಸಂಸ್ಥೆ ಹಾಗೂ ದಕ್ಷಿಣ ಕನ್ನಡ ಜಿಲ್ಲಾ ಸಂಸ್ಥೆಯ ಸಹಯೋಗದಲ್ಲಿ ಜೂನ್ 17 ರಂದು ಸ್ಕೌಟ್–ಗೈಡ್ ಕನ್ನಡ ಭವನ, ಮೂಡಬಿದಿರೆ, ದಕ್ಷಿಣ ಕನ್ನಡ ಜಿಲ್ಲೆ ಇಲ್ಲಿ 2023–24ನೇ ಸಾಲಿನ ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿ ಪರೀಕ್ಷೆಯಲ್ಲಿ 90% ಕ್ಕಿಂತ ಹೆಚ್ಚು ಅಂಕಗಳಿಸಿದ ಪ್ರತಿಭಾನ್ವಿತ ಸ್ಕೌಟ್ಸ್, ಗೈಡ್ಸ್, ರೋವರ್ಸ್ ಹಾಗೂ ರೇಂಜರ್ಸ್‌ಗಳಿಗೆ ಗೌರವಿಸುವ ಕಾರ್ಯಕ್ರಮವನ್ನು ಶ್ರೀ ಪಿ.ಜಿ.ಆರ್. ಸಿಂಧ್ಯ, ರಾಜ್ಯ ಮುಖ್ಯ ಆಯುಕ್ತರ ಮಾರ್ಗದರ್ಶನ ಹಾಗೂ ಡಾ. ಎಂ. ಮೋಹನ್ ಆಳ್ವ, ಜಿಲ್ಲಾ ಮುಖ್ಯ ಆಯುಕ್ತರು, ದಕ್ಷಿಣ ಕನ್ನಡ ಜಿಲ್ಲೆ ಇವರ ಅಧ್ಯಕ್ಷತೆಯಲ್ಲಿ ಆಯೋಜಿಸಲಾಯಿತು.

ಶ್ರೀ ಪಿ.ಜಿ.ಆರ್. ಸಿಂಧ್ಯ, ರಾಜ್ಯ ಮುಖ್ಯ ಆಯುಕ್ತರು ಕಾರ್ಯಕ್ರಮವನ್ನು ಉದ್ಘಾಟಿಸಿದರು ಮತ್ತು ವಿದ್ಯಾರ್ಥಿಗಳಿಗೆ ಪ್ರಮಾಣಪತ್ರ ಹಾಗೂ ನಗದು ಬಹುಮಾನವನ್ನು ನೀಡಿ ಗೌರವಿಸಿ, ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿ ಪರೀಕ್ಷೆಗಳಲ್ಲಿ ಉತ್ತಮ ಅಂಕಗಳಿಸಿದ ಮಕ್ಕಳು ಬಹಳಷ್ಟು ಇದ್ದಾರೆ, ಆದರೆ ಸ್ಕೌಟ್ಸ್–ಗೈಡ್ಸ್‌ಗಳು ಪಠ್ಯೇತರ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವ ಜೊತೆಗೆ ರ್ಯಾಂಕ್ ಗಳಿಸಿರುವುದು ಅಭಿನಂದನೀಯ ಎಂದರು.

ಈ ಸಂದರ್ಭದಲ್ಲಿ ವಿಜ್ಞಾನ ಮಾದರಿಯಲ್ಲಿ ರಾಷ್ಟ್ರಮಟ್ಟದ ಪ್ರಶಸ್ತಿ ಪಡೆದ ಚಿ॥ ಶಾಸ್ತ ನಾಯ್ಕ್, ಎಂ.ಎಸ್ಸಿ.ಯಲ್ಲಿ ಪ್ರಥಮ ರ್ಯಾಂಕ್ ಪಡೆದ ಚಿ॥ ಚಂದ್ರಾಕ್ಷ, ಪಿ.ಯು.ಸಿ.ನಲ್ಲಿ ಪ್ರಥಮ ರ್ಯಾಂಕ್ ಪಡೆದ ಕು॥ ಸಾನ್ವಿ, ಎಸ್.ಎಸ್.ಎಲ್.ಸಿ.ಯಲ್ಲಿ 4ನೇ ರ್ಯಾಂಕ್ ಪಡೆದ ಕು॥ ಭಾರ್ಗವಿ ಮಯ್ಯ ಹಾಗೂ ಲೋಕಸಭಾ ಚುನಾವಣೆಯ ಸಂದರ್ಭದಲ್ಲಿ ಪ್ರತಿನಿಧಿಯಾಗಿ ಕಾರ್ಯನಿರ್ವಹಿಸಿದ ಕು॥ ಸನ್ನಿಧಿ ಇವರುಗಳನ್ನು ಗೌರವಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಶ್ರೀ ಕೆ. ಶ್ರೀಪತಿ ಭಟ್, ಉಪಾಧ್ಯಕ್ಷರು, ಸ್ಥಳೀಯ ಸಂಸ್ಥೆ, ಮೂಡಬಿದಿರೆ, ಶ್ರೀ ಹೆಚ್.ಎಸ್. ವಿರೂಪಾಕ್ಷಪ್ಪ, ಕ್ಷೇತ್ರ ಶಿಕ್ಷಣಾಧಿಕಾರಿಗಳು, ಮೂಡಬಿದಿರೆ ಇವರು ಮುಖ್ಯ ಅತಿಥಿಗಳಾಗಿ ಆಗಮಿಸಿ ಮಕ್ಕಳಿಗೆ ಅಭಿನಂದನೆಗಳನ್ನು ಸಲ್ಲಿಸುವುದರ ಜೊತೆಗೆ ಶಿಕ್ಷಣದ ಜೊತೆಯಲ್ಲಿ ಪಠ್ಯೇತರ ಚಟುವಟಿಕೆಗಳಲ್ಲಿ ಮಕ್ಕಳು ತೊಡಗಿಸಿಕೊಂಡಾಗ ಸರ್ವತೋಮುಖ ಕಲಿಕೆ ಸಾಧ್ಯ. ಉತ್ತಮ ಶಿಸ್ತು ಬದ್ಧಜೀವನ ರೂಪಿಸುವ ನಿಟ್ಟಿನಲ್ಲಿ ಸ್ಕೌಟ್ಸ್ ಮತ್ತು ಗೈಡ್ಸ್ ಸಹಕರಿಸುತ್ತದೆ ಎಂದು ಹೇಳಿ ಎಲ್ಲರಿಗೂ ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಶ್ರೀಮತಿ ವಿಮಲಾ ರಂಗಯ್ಯ, ದಕ್ಷಿಣ ಕನ್ನಡ ಜಿಲ್ಲಾ ಗೈಡ್ ಆಯುಕ್ತರು, ಶ್ರೀಮತಿ ಜ್ಯೋತಿ ಜೆ. ಪೈ, ಉಡುಪಿ ಜಿಲ್ಲಾ ಗೈಡ್ ಆಯುಕ್ತರು, ಶ್ರೀ ಎಂ. ಪ್ರಭಾಕರ್ ಭಟ್, ರಾಜ್ಯ ಸಂಘಟನಾ ಆಯುಕ್ತರು (ಸ್ಕೌಟ್ಸ್) ಮುಂತಾದವರು ಉಪಸ್ಥಿತರಿದ್ದು ಮಕ್ಕಳಿಗೆ ಶುಭ ಹಾರೈಸಿದರು.

ಈ ಕಾರ್ಯಕ್ರಮದಲ್ಲಿ ದಕ್ಷಿಣ ಕನ್ನಡ, ಉಡುಪಿ, ಕಾರವಾರ, ಕೊಡಗು ಹಾಗೂ ಶಿರಸಿ ಜಿಲ್ಲೆಗಳ ಎಸ್.ಎಸ್.ಎಲ್.ಸಿ. ಮತ್ತು ಪಿ.ಯು.ಸಿ. ಟಾಪರ್ಸ್ ವಿದ್ಯಾರ್ಥಿಗಳು ಭಾಗವಹಿಸಿ ಪ್ರಮಾಣ ಪತ್ರ ಹಾಗೂ ನಗದು ಬಹುಮಾನವನ್ನು ಪಡೆದು ಸಂತಸ ವ್ಯಕ್ತಪಡಿಸಿದರು.

ಮಾದೇನಹಳ್ಳಿ ಮಲ್ಲಿಕಾರ್ಜುನಯ್ಯ ಪ್ರತಿಷ್ಠಾನ ಏರ್ಪಡಿಸಿದ "ಸಜ್ಜನಿಕೆಯ ಸಾಕಾರಮೂರ್ತಿ ಮಾದೇನಹಳ್ಳಿ ಮಲ್ಲಿಕಾರ್ಜುನಯ್ಯ" ಕೃತಿ ಲೋಕಾರ್ಪಣೆ ಸಮಾರಂಭದ ವರದಿ

ಕರ್ನಾಟಕ ಸರ್ಕಾರದ ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಹಿರಿಯ ಸಹಾಯಕ ನಿರ್ದೇಶಕರಾಗಿ, ಹಲವಾರು ಸಾಮಾಜಿಕ ಸಾರ್ವಜನಿಕ ಸೇವಾ ಸಂಸ್ಥೆಗಳಲ್ಲಿ ಸೇವೆಸಲ್ಲಿಸಿದ ಹಾಗೂ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್‌ನಲ್ಲಿ ಉತ್ತಮ ಹೆಸರು ಮಾಡಿದ್ದ ದಿವಂಗತ ಮಾದೇನಹಳ್ಳಿ ಮಲ್ಲಿಕಾರ್ಜುನಯ್ಯ ಅವರ ಕುರಿತ "ಸಜ್ಜನಿಕೆಯ ಸಾಕಾರಮೂರ್ತಿ ಮಾದೇನಹಳ್ಳಿ ಮಲ್ಲಿಕಾರ್ಜುನಯ್ಯ" ಎಂಬ ಕೃತಿ ಲೋಕಾರ್ಪಣೆ ಸಮಾರಂಭವನ್ನು ಬೆಂಗಳೂರಿನ ಸ್ಕೌಟ್ಸ್ ಮತ್ತು ಗೈಡ್ಸ್‌ನ 'ಕೊಂಡಜ್ಜಿ ಬಸಪ್ಪ ಸಭಾಂಗಣ'ದಲ್ಲಿ ಜೂನ್ 14, 2024ರಂದು ಏರ್ಪಡಿಸಲಾಗಿತ್ತು.



ಕೃತಿ ಲೋಕಾರ್ಪಣೆಗೊಳಿಸಿ ಮಾತನಾಡಿದ ಸುತ್ತೂರು ಕ್ಷೇತ್ರದ ಪೂಜ್ಯ ಜಗದ್ಗುರುಗಳಾದ ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು, ಗ್ರಾಮೀಣ ಹಿನ್ನೆಲೆಯಿಂದ ಬಂದ ಶ್ರೀ ಎಂ. ಮಲ್ಲಿಕಾರ್ಜುನಯ್ಯ ಬಡತನದ ನಿಷ್ಠುರಗಳನ್ನು ಅನುಭವಿಸಿದ ಅವರು ಅನೇಕ ಪ್ರಭಾವಿ ಸಾಹಿತಿಗಳ ಸಂಪರ್ಕ ಹೊಂದಿದ್ದರು. ಅವರಲ್ಲಿದ್ದ ಶಿಸ್ತು, ದಕ್ಷತೆ, ಸಂಘಟನಾ ಕೌಶಲ್ಯ, ಕ್ರಿಯಾಶೀಲತೆ ಸಮಾಜಕ್ಕೆ ಮಾದರಿಯಾಗಿದೆ ಎಂದು ಹೇಳಿದರು.

ತುಮಕೂರು ಸಿದ್ದಗಂಗಾ ಮಠದ ಶ್ರೀ ಸಿದ್ದಲಿಂಗ ಮಹಾಸ್ವಾಮೀಜಿ ಮಾತನಾಡಿ ಮಲ್ಲಿಕಾರ್ಜುನಯ್ಯ ಅವರು ಸಿದ್ಧಗಂಗಾ ಶ್ರೀಗಳ ಪರಮ ಭಕ್ತರು ಹಾಗೂ ಶಿಷ್ಯರಾಗಿದ್ದವರು. ಅವರ ಮಾರ್ಗದರ್ಶನ ಹಾಗೂ ಆಶೀರ್ವಾದದಿಂದ ಬದುಕು ಕಟ್ಟಿಕೊಂಡವರು. ಸುತ್ತೂರು ಜಗದ್ಗುರುಗಳ ಆಸರೆಯ ಮುಂಬೆಳಗಿನಲ್ಲಿ ತಮ್ಮ ಭವಿಷ್ಯ ರೂಪಿಸಿಕೊಂಡಿದ್ದಾರೆ ಎಂದು ತಿಳಿಸಿದರು.

ಹಿರಿಯ ಜಾನಪದ ವಿದ್ವಾಂಸ ನಾಡೋಜ ಡಾ. ಗೊ.ರು. ಚನ್ನಬಸಪ್ಪ ಮಾತನಾಡಿ ಮಲ್ಲಿಕಾರ್ಜುನಯ್ಯ ಸ್ವತಃ ಸಾಹಿತಿಗಳಾಗಿರಲಿಲ್ಲ. ಆದರೆ ಅವರ ಸಂಪರ್ಕ ಇರುವುದೆಲ್ಲ ಸಾಹಿತ್ಯಶ್ರೇಷ್ಠರೊಂದಿಗೆ. ಯಾವುದೇ ವೇದಿಕೆ ಹತ್ತದಿದ್ದರೂ ಅಂತಹ ವೇದಿಕೆಗಳಿಗೆ ಆಧಾರವಾಗಿದ್ದರು ಎಂದರು. ಮಾಜಿ ಸಚಿವರು ಹಾಗೂ ರಾಜ್ಯ ಮುಖ್ಯ ಆಯುಕ್ತರಾದ ಶ್ರೀ ಪಿ.ಜಿ.ಆರ್. ಸಿಂಧ್ಯ ಮಾತನಾಡಿ ಮಲ್ಲಿಕಾರ್ಜುನಯ್ಯ ವರ್ಗಬೇದವಿಲ್ಲದೇ ಎಲ್ಲರೊಂದಿಗೆ ಪ್ರೀತಿ, ವಿಶ್ವಾಸದಿಂದ ನಡೆದುಕೊಂಡಿದ್ದರು ಎಂಬುದಕ್ಕೆ ಈ ಸಮಾರಂಭದಲ್ಲಿ ಪೂಜ್ಯ ಮಹಾಸ್ವಾಮೀಜಿಗಳು ಹಾಗೂ ಗಣ್ಯರುಗಳು ಭಾಗವಹಿಸಿರುವುದೇ ಸಾಕ್ಷಿ ಎಂದರು.

ಈ ಸಂದರ್ಭದಲ್ಲಿ "ಮಾದೇನಹಳ್ಳಿ ಮಲ್ಲಿಕಾರ್ಜುನಯ್ಯ" ಕೃತಿ ಸಂಪಾದಕರಾದ ಶ್ರೀ ಹೆಚ್.ಎಸ್. ಸಿದ್ದಗಂಗಪ್ಪನವರಿಗೆ ಹಾಗೂ ಕೃತಿಯ ಪ್ರಕಟಣೆಗೆ ಸಹಕರಿಸಿದ ಗಿತಾಂಜಲಿ ಗ್ರಾಫಿಕ್ಸ್‌ನ ಮಾಲೀಕರಾದ ಶ್ರೀ ಜಿ. ನಾಗಸುಂದರ್ ಅವರುಗಳನ್ನು ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ನಿಮ್ಹಾನ್ಸ್‌ನ ನಿವೃತ್ತ ಪ್ರೊಫೆಸರ್ ಡಾ॥ ಮಾಳವಿಕಾ ಕಪೂರ್, ನಿವೃತ್ತ ಇಂಜಿನಿಯರ್ ಹಾಗೂ ಸಾಹಿತಿಗಳಾದ ಶ್ರೀ ಹೆಚ್.ಪಿ. ವಾಸುದೇವರಾವ್, ಪ್ರಖ್ಯಾತ ವನ್ಯಜೀವಿ ತಜ್ಞ ಡಾ॥ ಉಲ್ಲಾಸ್ ಕಾರಂತ್, ಕರ್ನಾಟಕ ಬ್ಯಾಂಕ್‌ನ ನಿವೃತ್ತ ಹಿರಿಯ ಅಧಿಕಾರಿಗಳಾದ ಶ್ರೀ ಯು. ಶ್ರೀಧರ್‌ಭಟ್, ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಡಾ. ಸಿ. ಸೋಮಶೇಖರ, ನಿವೃತ್ತ ಮುಖ್ಯ ಇಂಜಿನಿಯರ್ ಶ್ರೀ ಡಿ. ಎಸ್. ಮೃತ್ಯುಂಜಯ ಭಾಗವಹಿಸಿ, ಮಲ್ಲಿಕಾರ್ಜುನಯ್ಯನವರೊಂದಿಗಿನ ಸವಿ ನೆನಪುಗಳನ್ನು ಸ್ಮರಿಸಿದರು.

ಪ್ರತಿಷ್ಠಾನದ ಕಾರ್ಯದರ್ಶಿ ಶ್ರೀ ಕೊಂಡಜ್ಜಿ ಬ. ಷಣ್ಮುಖಪ್ಪನವರು ಸ್ವಾಗತಿಸಿದರು. ಉಪಾಧ್ಯಕ್ಷರುಗಳಾದ ಶ್ರೀ ಎಂ. ರೇಣುಕಾರಾಧ್ಯ ಹಾಗು ಶ್ರೀ ಎಸ್. ವಿಶ್ವನಾಥ್, ಜಂಟಿ ಕಾರ್ಯದರ್ಶಿ ಶ್ರೀ ಬೈರಸಂದ್ರ ಸಿದ್ದಲಿಂಗಪ್ಪ, ಶ್ರೀ ಎಸ್. ಸದಾನಂದ, ಡಾ. ವಿ.ಎಲ್. ಸತೀಶ್, ಡಾ. ಜಿ.ಆರ್. ರಮೇಶ್, ನಿವೃತ್ತ ಲೋಕಸೇವ ಆಯೋಗದ ಶ್ರೀ ದಯಾಶಂಕರ್, ರಾಜ್ಯ ಗೈಡ್ಸ್ ಆಯುಕ್ತರಾದ ಶ್ರೀಮತಿ ಗೀತಾ ನಟರಾಜ್, ರಾಜ್ಯ ಕಾರ್ಯದರ್ಶಿ ಶ್ರೀ ಕೆ. ಗಂಗಪ್ಪಗೌಡ, ಸಹಾಯಕ ರಾಜ್ಯ ಆಯುಕ್ತರುಗಳಾದ ಶ್ರೀ ಎನ್. ಶ್ರೀನಿವಾಸನ್, ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ, ಶ್ರೀಮತಿ ರಾಧ ವೆಂಕಟೇಶ್, ಶ್ರೀಮತಿ ಮುಕ್ತಾ ಬಿ. ಕಾಗಲೆ, ಮೈಸೂರು ಜಿಲ್ಲಾ ಸಂಸ್ಥೆ ಕೋಶಾಧಿಕಾರಿ ಡಾ. ಕೆ.ಬಿ. ಗುರುಮೂರ್ತಿ, ಅಂತರಾಷ್ಟ್ರೀಯ ಸ್ಕೌಟ್ ಉಪಆಯುಕ್ತರಾದ ಶ್ರೀ ಎ.ಎಸ್. ಮಧುಸೂದನ್, ಜಿಲ್ಲಾ ಕಾರ್ಯದರ್ಶಿ ಶ್ರೀ ಬಿ.ಕೆ. ಶೇಷಾದ್ರಿ, ಶ್ರೀ ಎಂ.ಎ. ಚೆಲ್ಲಯ್ಯ, ಸಂಪಾದಕ ಮಂಡಳಿಯ ಶ್ರೀ ಸಿ.ಪಿ. ಪರಮೇಶ್ವರ್ ಹಾಗೂ ಸ್ಕೌಟ್ಸ್–ಗೈಡ್ಸ್, ರೋವರ್ಸ್–ರೇಂಜರ್ಸ್ ಮತ್ತಿತರರು ಭಾಗವಹಿಸಿದ್ದರು. ಕಾರ್ಯಕ್ರಮದ ನಿರ್ವಹಣೆಯನ್ನು ರಾಜ್ಯ ಸಂಘಟನಾ ಆಯುಕ್ತರಾದ ಶ್ರೀಮತಿ ಸಿ. ಮಂಜುಳಾ, ರಾಜ್ಯ ತರಬೇತಿ ಆಯುಕ್ತರಾದ ಶ್ರೀಮತಿ ಕೆ.ವಿ. ಶ್ಯಾಮಲ, ಶ್ರೀ ನಾಗೇಶ್ ಶಿವಪುರ್ ಮತ್ತು ಶ್ರೀ ವಿ. ತಿಪ್ಪೇಸ್ವಾಮಿ ಅವರುಗಳು ನಿರ್ವಹಿಸಿದರು. ಶ್ರೀ ಹೆಚ್.ವಿ. ರೇಣುಕಾಪ್ರಸಾದ್ ಎಲ್ಲರಿಗೂ ವಂದನೆ ಸಲ್ಲಿಸಿದರು.

ಅಭಿನಂದನೆಗಳು

ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ರಾಷ್ಟ್ರೀಯ ಸಂಸ್ಥೆಯ ಪ್ರೆಸಿಡೆಂಟ್–ಇನ್–ಕೌನ್ಸಿಲ್‌ನ
ಪ್ರಧಾನ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸುತ್ತಿರುವ
ನಮ್ಮ ನೆಚ್ಚಿನ ರಾಜ್ಯ ಮುಖ್ಯ ಆಯುಕ್ತರಾದ ಶ್ರೀ ಪಿ.ಜಿ.ಆರ್. ಸಿಂಧ್ಯ ಅವರಿಗೆ
ರಾಷ್ಟ್ರಮಟ್ಟದಲ್ಲಿ ಹೊಸದಾಗಿ ರಚನೆಯಾಗಿರುವ
"ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸದೀಯ ವೇದಿಕೆ"ಯ ಸಂಚಾಲಕರನ್ನಾಗಿ
ನೇಮಕ ಮಾಡಿರುವುದಕ್ಕಾಗಿ ರಾಷ್ಟ್ರೀಯ ಆಯುಕ್ತರಾದ ಡಾ. ಕೆ.ಕೆ. ಖಂಡೇಲವಾಲ್
ಹಾಗೂ ಇತರ ಪದಾಧಿಕಾರಿಗಳಿಗೆ ಕರ್ನಾಟಕ ರಾಜ್ಯ ಸಂಸ್ಥೆಯಿಂದ
ಹೃತ್ಪೂರ್ವಕ ಧನ್ಯವಾದಗಳನ್ನು ತಿಳಿಸುತ್ತೇವೆ.
ಶ್ರೀ ಪಿ.ಜಿ.ಆರ್. ಸಿಂಧ್ಯ ಅವರಿಗೆ ಈ ಮಹತ್ತರವಾದ ಜವಾಬ್ದಾರಿಯನ್ನು ನಿರ್ವಹಿಸುವ
ಎಲ್ಲ ರೀತಿಯ ಶಕ್ತಿ, ಸಾಮರ್ಥ್ಯ ಹಾಗೂ ಯಶಸ್ಸು ಲಭಿಸಲೆಂದು ರಾಜ್ಯ ಸಂಸ್ಥೆಯ
ಸಮಸ್ತ ಸ್ಕೌಟ್ಸ್–ಗೈಡ್ಸ್ ಬಂಧುಗಳ ಮತ್ತು ಮಕ್ಕಳ ಪರವಾಗಿ
ಶುಭಾಶಯಗಳನ್ನು ಕೋರುತ್ತೇವೆ.



ಜುಲೈ 2024ರ ಮಾಹೆಯ ಕಾರ್ಯಕ್ರಮಗಳ ವಿವರಗಳು

ಕ್ರ.ಸಂ	ದಿನಾಂಕ	ಸ್ಥಳ	ಕಾರ್ಯಕ್ರಮಗಳ ವಿವರಗಳು
1.	03.07.2024	ಸ್ಕೌಟ್–ಗೈಡ್ ಕನ್ನಡ ಭವನ ಸ್ವರಾಜ್ ಮೈದಾನ ಮುಂಭಾಗ ಮೂಡಬಿದರೆ, ದಕ್ಷಿಣ ಕನ್ನಡ	ದಕ್ಷಿಣ ಕನ್ನಡ, ಉಡುಪಿ, ಕಾರವಾರ, ಕೊಡಗು ಜಿಲ್ಲೆಗಳ ಜಿಲ್ಲಾ ಉಪನಿರ್ದೇಶಕರು (ಆಡಳಿತ) ಜಿಲ್ಲಾ ಉಪನಿರ್ದೇಶಕರು(ಅಭಿವೃದ್ಧಿ), ಉಪನಿರ್ದೇಶಕರು (ಪದವಿ ಪೂರ್ವ), ತಾಲ್ಲೂಕು ಕ್ಷೇತ್ರಶಿಕ್ಷಣಾಧಿಕಾರಿಗಳು ಇವರೊಂದಿಗೆ ರಾಜ್ಯ ಸಂಸ್ಥೆಯ ಪದಾಧಿಕಾರಿಗಳು ಮತ್ತು ಆಯಾಯ ಜಿಲ್ಲಾ/ಸ್ಥಳೀಯ ಸಂಸ್ಥೆಗಳ ಆಯ್ದ ಪದಾಧಿಕಾರಿಗಳು ಭಾಗವಹಿಸಲಿರುವವರು
2.	04.07.2024	ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಕೇಂದ್ರ ಕಛೇರಿ ಬಿ.ಹೆಚ್.ರಸ್ತೆ, ಶಿವಮೊಗ್ಗ	ಶಿವಮೊಗ್ಗ, ದಾವಣಗೆರೆ, ಚಿತ್ರದುರ್ಗ, ಚಿಕ್ಕಮಗಳೂರು, ಹಾಸನ ಜಿಲ್ಲೆಗಳ ಜಿಲ್ಲಾ ಉಪನಿರ್ದೇಶಕರು (ಆಡಳಿತ) ಜಿಲ್ಲಾ ಉಪನಿರ್ದೇಶಕರು(ಅಭಿವೃದ್ಧಿ), ಉಪನಿರ್ದೇಶಕರು (ಪದವಿ ಪೂರ್ವ), ತಾಲ್ಲೂಕು ಕ್ಷೇತ್ರಶಿಕ್ಷಣಾಧಿಕಾರಿಗಳು ಇವರೊಂದಿಗೆ ರಾಜ್ಯ ಸಂಸ್ಥೆಯ ಪದಾಧಿಕಾರಿಗಳು ಮತ್ತು ಆಯಾಯ ಜಿಲ್ಲಾ/ಸ್ಥಳೀಯ ಸಂಸ್ಥೆಗಳ ಆಯ್ದ ಪದಾಧಿಕಾರಿಗಳು ಭಾಗವಹಿಸಲಿರುವವರು
3.	06.07.2024	ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಜಯಚಾಮರಾಜೇಂದ್ರ ಸ್ಕೌಟ್ ಭವನ, ಮೈಸೂರು.	ಮೈಸೂರು, ಮಂಡ್ಯ, ಚಾಮರಾಜನಗರ ಜಿಲ್ಲೆಗಳ ಜಿಲ್ಲಾ ಉಪನಿರ್ದೇಶಕರು (ಆಡಳಿತ) ಜಿಲ್ಲಾ ಉಪನಿರ್ದೇಶಕರು(ಅಭಿವೃದ್ಧಿ), ಉಪನಿರ್ದೇಶಕರು (ಪದವಿ ಪೂರ್ವ), ತಾಲ್ಲೂಕು ಕ್ಷೇತ್ರಶಿಕ್ಷಣಾಧಿಕಾರಿಗಳು ಇವರೊಂದಿಗೆ ರಾಜ್ಯ ಸಂಸ್ಥೆಯ ಪದಾಧಿಕಾರಿಗಳು ಮತ್ತು ಆಯಾಯ ಜಿಲ್ಲಾ/ಸ್ಥಳೀಯ ಸಂಸ್ಥೆಗಳ ಆಯ್ದ ಪದಾಧಿಕಾರಿಗಳು ಭಾಗವಹಿಸಲಿರುವವರು.
4.	08.07.2024	ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಕೇಂದ್ರ ಕಛೇರಿ, ಸಿವಿಲ್ ಕೋರ್ಟ್ ಎದುರು, ಧಾರವಾಡ	ಧಾರವಾಡ, ಬೆಳಗಾವಿ, ಹಾವೇರಿ, ಗದಗ, ಶಿರಸಿ, ವಿಜಯಪುರ, ಬಾಗಲಕೋಟೆ ಜಿಲ್ಲೆಗಳ ಜಿಲ್ಲಾ ಉಪನಿರ್ದೇಶಕರು (ಆಡಳಿತ) ಜಿಲ್ಲಾ ಉಪನಿರ್ದೇಶಕರು(ಅಭಿವೃದ್ಧಿ), ಉಪನಿರ್ದೇಶಕರು (ಪದವಿ ಪೂರ್ವ), ತಾಲ್ಲೂಕು ಕ್ಷೇತ್ರಶಿಕ್ಷಣಾಧಿಕಾರಿಗಳು ಇವರೊಂದಿಗೆ ರಾಜ್ಯ ಸಂಸ್ಥೆಯ ಪದಾಧಿಕಾರಿಗಳು ಮತ್ತು ಆಯಾಯ ಜಿಲ್ಲಾ/ಸ್ಥಳೀಯ ಸಂಸ್ಥೆಗಳ ಆಯ್ದ ಪದಾಧಿಕಾರಿಗಳು ಭಾಗವಹಿಸಲಿರುವವರು.
5.	23.07.2024	ಪೋಷಕರ ದಿನಾಚರಣೆ	ಎಲ್ಲಾ ಹಂತಗಳಲ್ಲಿ
6.	26.07.2024	ಕಾರ್ಗಿಲ್ ವಿಜಯೋತ್ಸವ	ಎಲ್ಲಾ ಹಂತಗಳಲ್ಲಿ
7.	04.07.2024	ದಿ॥ ವೈ.ವಿ.ಕೆ. ಮೂರ್ತಿ ಮಾಜಿ ಮುಖ್ಯ ಸ್ಕೌಟ್ ಆಯುಕ್ತರು ಅವರ ಹುಟ್ಟುಹಬ್ಬ	ಎಲ್ಲಾ ಹಂತಗಳಲ್ಲಿ
8.	18.07.2024	ಶ್ರೀ ಜಯಚಾಮರಾಜೇಂದ್ರ ಒಡೆಯರ್ ಹುಟ್ಟುಹಬ್ಬ	ಎಲ್ಲಾ ಹಂತಗಳಲ್ಲಿ

SRI VIDYANIKETAN EDUCATION SOCIETY (R) DODBALLAPUR
KNOWLEDGE IS POWER

NALANDA HIGH SCHOOL

DODDABALLAPUR - 561 203.

CELEBRATING 33 YEARS

Congratulations!

Hearty Congratulations to the Nalandians of SSLC- 2024 for achieving the best results

DISTINCTION - 79 FIRST CLASS - 67 2ND CLASS - 44

OUR TOP SCORERS



POORNASHREE M C
619 - 99.04%
Taluk - 2nd Place, District- 3rd Place
State - 7th place
D/o Sri. M.V. Chikkanna & Smt. Kavitha



NAVYA M J
611 - 97.7%
D/o Sri. M.R. Jayaram
& Smt. M.V.Radha



VARANA K
611 - 97.7%
D/o Sri. Kathiravan D
& Smt. Karthiga K



NITHYA G
605 - 96.8%
D/o Sri. Ganga Reddy
& Smt. Sunitha R



ASHWINI T.N.
603 - 96.4%



MANOJ B DAS
592 - 94.7%



RAJKUMAR S
591- 94.5%



VEDRAJ NAIK K
591- 94.5%



HASINI N
590 - 94.4%



SAMRUDDHI S
589 - 94.2%



BINDHU SHREE H
588 - 94.0%



DISHA S
587- 93.9%



SAGAR S
587 - 93.9%



MITHUN S
586 - 93.7%



SAHANA H
586 - 93.7%



ROHINI T
585 - 93.6%



BRUNDA C
583 - 93.2%



JYOTHI GAIN
583 - 93.2%



DHARSH M
582 - 93.1%



DEEKSHITHA R
580 - 92.8%



DHANUSHREE R
580 - 92.8%



SHRIYA R S
577 - 92.3%



SHRUTHI N
576 - 92.1%



MITHUN R
575 - 92.0%



PALLAVI D S
573 - 91.6%



SINCHANA K
573 - 91.6%



UDAYASHREE P
573 - 91.6%



GIRISH N L
572 - 91.5%



THANEESHA V
571 - 91.3%



PREETHAM KUMAR K K
570 - 91.2%



SRIRAM R
570 - 91.2%



SHREYAS K M
566 - 90.5%



BHUMIKA P T
564 - 90.2%



KAVYA G
564 - 90.2%



SAGAR GOWDA M
564 - 90.2%

We are proud of our NALANDIANS



ಬಾಗಲಕೋಟೆ

* ಜೂನ್ 05 ರಂದು ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆ ಕದಾಂಪುರ ಇಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಹಾಗೂ ಸ್ಕೌಟ್ಸ್ ಮತ್ತು ಗೈಡ್ಸ್ ಸಹಯೋಗದಲ್ಲಿ ವಿಶ್ವ ಪರಿಸರ ದಿನಾಚರಣೆಯನ್ನು ಸಸಿಗೆ ನೀರು ಹಾಕುವ ಮೂಲಕ ಶ್ರೀ ಎನ್.ವಿ. ವಿಜಯ, ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬಾಗಲಕೋಟೆ, ಜಿಲ್ಲಾಧಿಕಾರಿಗಳಾದ ಶ್ರೀಮತಿ ಕೆ.ಎಂ. ಜಾನಕಿ, ಪೋಲಿಸ್ ಅಧಿಕ್ಷಕರಾದ ಶ್ರೀ ರಾಮನಾಥ ರೆಡ್ಡಿರವರು ಉದ್ಘಾಟಿಸಿದರು. ಅಧ್ಯಕ್ಷತೆಯನ್ನು ವಹಿಸಿದ ಶ್ರೀ ಬಿ.ಕೆ. ನಾದನೂರ, ಉಪನಿರ್ದೇಶಕರು, ಜಿಲ್ಲಾ ಮುಖ್ಯ ಆಯುಕ್ತರು ಅವರು ವಿಶೇಷವಾದ ಪರಿಸರ ಕಾಳಜಿ ಕುರಿತು ಮಾತನಾಡಿದರು. ನಂತರ ವಿವಿಧ ತರಹದ ಸಸಿಗಳನ್ನು ನೆಟ್ಟು ಪೋಷಿಸಲು ವಿದ್ಯಾರ್ಥಿಗಳಿಗೆ ತಿಳಿಸಲಾಯಿತು. ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.



* ಜೂನ್ 05 ರಂದು ಕೆ.ಎಂ. ಪಟ್ಟಣಶೆಟ್ಟಿ ಪಿ.ಯು. ಕಾಲೇಜು ಬಾದಾಮಿಯಲ್ಲಿ ಸಂಸ್ಥೆಯ ಸಹ ಕಾರ್ಯದರ್ಶಿಗಳಾದ ಶ್ರೀ ಕೆ.ಎಂ. ಪಟ್ಟಣಶೆಟ್ಟಿ ಇವರು ಸಸಿ ನಡೆವುದರೊಂದಿಗೆ ವಿಶ್ವ ಪರಿಸರ ದಿನಾಚರಣೆಯನ್ನು ಆಚರಿಸಿದರು. ಪ್ರಾಚಾರ್ಯರಾದ ಶ್ರೀ ಎಂ.ವಿ. ಪತ್ತಾರ, ರೋವರ್ ಲೀಡರ್ ಶ್ರೀ ಕೆ.ಎಚ್. ಮಾದರ, ರೇಂಜರ್ ಲೀಡರ್ ಶ್ರೀಮತಿ ಸೇವಂತಿ ಹುಲ್ಲೂರು ಸಿಬ್ಬಂದಿಗಳು ಮತ್ತು ರೋವರ್–ರೇಂಜರ್ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಬಿ.ಬಿ.ಎಂ.ಪಿ. ಬೆಂಗಳೂರು

* ಬಿಬಿಎಂಪಿ ವತಿಯಿಂದ ವಿಶ್ವ ಪರಿಸರ ದಿನಾಚರಣೆಯನ್ನು ಜೂನ್ 14 ರಂದು ಬಾಲ ಭವನ ಕಬ್ಬನ್ ಪಾರ್ಕ್‌ನಲ್ಲಿ ಆಚರಿಸಲಾಯಿತು. ಮಾನ್ಯ ಉಪ ಮುಖ್ಯಮಂತ್ರಿಗಳಾದ ಶ್ರೀ ಡಿ.ಕೆ ಶಿವಕುಮಾರ್ ರವರ ಅಧ್ಯಕ್ಷತೆಯಲ್ಲಿ ಹಸಿರು ರಕ್ಷಕ ಎಂಬ ಅಭಿಯಾನಕ್ಕೆ ಗಿಡ ನೆಡುವ ಮೂಲಕ ಚಾಲನೆ ನೀಡಲಾಯಿತು ಹಾಗೂ ಪರಿಸರ ಸಂರಕ್ಷಣೆ ಬಗ್ಗೆ ಪ್ರತಿಜ್ಞಾ ವಿಧಿಯನ್ನು ಬೋಧಿಸಲಾಯಿತು. ಕಾರ್ಯಕ್ರಮಕ್ಕೆ ಬಿಬಿಎಂಪಿ ಶಾಲಾ–



ಕಾಲೇಜುಗಳಿಂದ 300ಕ್ಕೂ ಹೆಚ್ಚು ಸ್ಕೌಟ್–ಗೈಡ್ಸ್‌ಗಳು, ಬಿಬಿಎಂಪಿ ಜಿಲ್ಲಾ ಸಂಸ್ಥೆಯ ವಿಶೇಷ ಆಯುಕ್ತರು (ಶಿಕ್ಷಣ)ರವರು, ಜಿಲ್ಲಾ ಮುಖ್ಯ ಆಯುಕ್ತರು, ಜಿಲ್ಲಾ ಕಾರ್ಯದರ್ಶಿಗಳು ಮತ್ತು ಬಿಬಿಎಂಪಿಯ ವಿವಿಧ ಇಲಾಖೆಗಳಿಂದ ಅಧಿಕಾರಿವರ್ಗದವರು ಭಾಗವಹಿಸಿದ್ದರು.



ಬೆಳಗಾವಿ

* ಜೂನ್ 14 ರಂದು ಜೈನ್ ಹೆರಿಟೇಜ್ ಶಾಲೆ ಹಾಗೂ ಜಿಲ್ಲಾ ಸಂಸ್ಥೆ ಬೆಳಗಾವಿ ಇವರ ಸಹಯೋಗದಲ್ಲಿ ವಿಶ್ವ ರಕ್ತದಾನ ದಿನಾಚರಣೆಯನ್ನು ಬೆಳಗಾವಿ ನಗರದ ಧ.ವೀ.ಸಂ. ವೃತ್ತದಲ್ಲಿ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ



ಭಾಗವಹಿಸಿದ ಮಕ್ಕಳು ರಕ್ತದಾನದ ಕುರಿತು ವಿವಿಧ ಘೋಣೆಗಳನ್ನು ಕೂಗುತ್ತಾ ಜಾಗೃತಿ ಮೂಡಿಸಿದರು. ಸದರಿ ಕಾರ್ಯಕ್ರಮದಲ್ಲಿ ಜೈನ್ ಹೆರಿಟೇಜ್ ಶಾಲೆಯ ಸ್ಕೌಟ್–ಗೈಡ್, ಕಬ್–ಬುಲ್‌ಬುಲ್‌ಗಳು ಹಾಗೂ ಶಾಲೆಯ ಶಿಕ್ಷಕ ಸಿಬ್ಬಂದಿ ವರ್ಗದವರು ಭಾಗವಹಿಸಿದ್ದರು. ಶಾಲೆಯ ಕಬ್ ಮಾಸ್ಟರ್ ಶ್ರೀಮತಿ ಪಲ್ಲವಿ ನಾಡಕರ್ಣಿ ಉಸ್ತುವಾರಿಯನ್ನು ವಹಿಸಿದ್ದರು. 120ಕ್ಕೂ ಹೆಚ್ಚು ಮಕ್ಕಳು ಭಾಗವಹಿಸಿದ್ದರು.

* ಜೂನ್ 11 ರಂದು ಬೆಳಗಾವಿ ಜಿಲ್ಲೆಯ ಆಯುಷ ಇಲಾಖೆಯ ಜಿಲ್ಲಾ ವೈದ್ಯಾಧಿಕಾರಿಗಳಾದ ಡಾ. ಶ್ರೀಕಾಂತ ಬಿ. ಸುಣದೋಳಿರವರ ಮಾರ್ಗದರ್ಶನದಲ್ಲಿ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಪ್ರಯುಕ್ತ ಬೆಳಗಾವಿ ನಗರದ ಜೈನ್ ಹೆರಿಟೇಜ್ ಶಾಲೆಯ ಸ್ಕೌಟ್–ಗೈಡ್ಸ್‌ಗಳು ಶಾಂತಾಯಿ ವೃದ್ಧಾಶ್ರಮಕ್ಕೆ ಭೇಟಿ ನೀಡಿ ವೃದ್ಧಾಶ್ರಮದಲ್ಲಿರುವ ವಯೋವೃದ್ಧರಿಗೆ ವಿವಿಧ ಯೋಗಾಸನಗಳನ್ನು ಹೇಳಿಕೊಟ್ಟರು. ಕಬ್ ಮಾಸ್ಟರ್ ಶ್ರೀಮತಿ ಪಲ್ಲವಿ ನಾಡಕರ್ಣಿ ಹಾಗೂ ಫ್ಲಾಕ್ ಲೀಡರ್ ಶ್ರೀಮತಿ ಕಲ್ಪನಾ ಸದರಿ ಕಾರ್ಯಕ್ರಮವನ್ನು ಆಯೋಜಿಸಿದರು.



* ಜೂನ್ 05 ರಂದು ಜಿಲ್ಲಾ ಸಂಸ್ಥೆ ಬೆಳಗಾವಿ ಇಲ್ಲಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಬೆಳಗಾವಿ ಹಾಗೂ ಜಿಲ್ಲಾ ಸಂಸ್ಥೆ ಬೆಳಗಾವಿ ಇವರ ಸಹಯೋಗದಲ್ಲಿ ವಿಶ್ವ ಪರಿಸರ ದಿನಾಚರಣೆ ಆಚರಿಸಲಾಯಿತು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶ್ರೀ ಗಜಾನನ ಮನ್ನಿಕೇರಿ, ಜಿಲ್ಲಾ ಮುಖ್ಯ ಆಯುಕ್ತರು ಜಿಲ್ಲಾ ಸಂಸ್ಥೆ ಬೆಳಗಾವಿ ಇವರು ಸಸಿ ನೆಡುವ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿದರು. ನಂತರ ಮಾತನಾಡುತ್ತ "ಭೂಮಿಯನ್ನು ರಕ್ಷಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಇದಕ್ಕಾಗಿ ನಾವೆಲ್ಲರೂ ಸಸಿಗಳನ್ನು ನೆಟ್ಟು ಭೂಮಿಯ ತಾಪವನ್ನು ಕಡಿಮೆ ಮಾಡುವಲ್ಲಿ ಹಾಗೂ ಪರಿಸರ ಸಂರಕ್ಷಣೆ ಮಾಡುವಲ್ಲಿ ಕೈಜೋಡಿಸೋಣ" ಎಂದು ಹೇಳಿದರು. ವಿಶ್ವ ಪರಿಸರ ದಿನಾಚರಣೆಯ ಕುರಿತು ಪ್ರಾಸ್ತಾವಿಕವಾಗಿ ಕ.ರಾ.ಮಾ. ನಿಯಂತ್ರಣ ಮಂಡಳಿ ಪ್ರಾದೇಶಿಕ ಕಛೇರಿಯ ಪರಿಸರ ಅಧಿಕಾರಿಗಳಾದ ಶ್ರೀಮತಿ ಶೋಭಾ ಫೋಳ ಮಾತನಾಡಿದರು. ಶ್ರೀ ರಾಜಶೇಖರ ಪಾಟೀಲ, ಯೋಜನಾಧಿಕಾರಿಗಳು, ಶ್ರೀ ಸ.ಜ. ನಾಗಲೋಟಿಮಠ ವಿಜ್ಞಾನ ಕೇಂದ್ರ ಬೆಳಗಾವಿ ಇವರು ಮಾತನಾಡಿದರು. ಸ್ಕೌಟ್–ಗೈಡ್ಸ್‌ಗಳಿಗೆ ಪರಿಸರ ಜಾಗೃತಿ ಜಾಥಾವನ್ನು ಆಯೋಜಿಸಲಾಯಿತು.



ಇದೇ ವೇಳೆ ಪರಿಸರ ಸಂರಕ್ಷಣೆ ಕುರಿತು ವಿವಿಧ ಶಾಲೆಯ ಸ್ಕೌಟ್ಸ್–ಗೈಡ್ಸ್ ಮಕ್ಕಳು ಭಾಷಣವನ್ನು ಮಾಡಿದರು. ಅದರಲ್ಲಿ ವಿಜೇತರಾದ ಮಕ್ಕಳಿಗೆ ಪರಿಸರ ಇಲಾಖೆ ಮತ್ತು ಸ್ಕೌಟ್–ಗೈಡ್ಸ್ ಸಂಸ್ಥೆ ವತಿಯಿಂದ ಬಹುಮಾನಗಳನ್ನು ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಶ್ರೀ ಎನ್.ಬಿ. ಗುಡಸಿ, ಶ್ರೀ ಶ್ರವಣ ಕುಮಾರ್ ಮನ್ನಿಕೇರಿ, ಶ್ರೀ ರಾಜಶೇಖರ ಪಾಟೀಲ ಹಾಗೂ ಪರಿಸರ ಇಲಾಖೆಯ ಸಿಬ್ಬಂದಿ ವರ್ಗದವರು ಸ್ಕೌಟ್ಸ್–ಗೈಡ್ಸ್ ಪದಾಧಿಕಾರಿಗಳು ಉಪಸ್ಥಿತರಿದ್ದರು. ಸದರಿ ಕಾರ್ಯಕ್ರಮದಲ್ಲಿ 300 ಸ್ಕೌಟ್–ಗೈಡ್ ಮಕ್ಕಳು ಭಾಗವಹಿಸಿದ್ದರು. ಶ್ರೀ ಡಿ.ಬಿ. ಅತ್ತಾರ ಕಾರ್ಯಕ್ರಮ ನಿರೂಪಿಸಿ ಸ್ವಾಗತಿಸಿದರು. ಶ್ರೀ ವಿಠ್ಠಲ ಎಸ್.ಬಿ. ವಂದಿಸಿದರು.

* ಜೂನ್ 05 ರಂದು ಸ್ಥಳೀಯ ಸಂಸ್ಥೆ ಚನ್ನಮ್ಮನ ಕಿತ್ತೂರು ಹಾಗೂ ಕರ್ನಾಟಕ ರಾಜ್ಯ ಪರಿಸರ ಮಾಲಿನ್ಯ ಇಲಾಖೆ ಬೆಳಗಾವಿ ಘಟಕ ಇವರುಗಳ ಸಹಯೋಗದಲ್ಲಿ "ವಿಶ್ವ ಪರಿಸರ ದಿನಾಚರಣೆ" ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು. ಕಾರ್ಯಕ್ರಮದ ಘನ ಅಧ್ಯಕ್ಷತೆಯನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಶ್ರೀಮತಿ ಗಾಯತ್ರಿ ಅಜ್ಜನ್ನವರ ಅವರು ವಹಿಸಿಕೊಂಡಿದ್ದರು. ಶಿಕ್ಷಣ ಸಂಯೋಜಕರಾದ ಶ್ರೀ ಮಹೇಶ್ ಹೆಗಡೆ ಅತಿಥಿಗಳಾಗಿ ಆಗಮಿಸಿದ್ದರು ಹಾಗೂ ಸ್ಕೌಟ್ಸ್–ಗೈಡ್ಸ್‌ಗಳು ಪಾಲ್ಗೊಂಡಿದ್ದರು. ಆರಂಭದಲ್ಲಿ ಎಲ್ಲ ಗೌರವಾನ್ವಿತ ಅತಿಥಿ ಮಹೋದಯರಿಂದ ಸಸಿಗಳನ್ನು ನೆಡಿಸಲಾಯಿತು. ತದನಂತರದಲ್ಲಿ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಶ್ರೀಮತಿ ಗಾಯತ್ರಿ ಅಜ್ಜನ್ನವರ್ ಮಾತನಾಡಿ "ಪರಿಸರ ರಕ್ಷಣೆ ನಮ್ಮೆಲ್ಲರ ಹೊಣೆ ಆಗಿದೆ. ಹಾಗಾಗಿ ಪ್ರತಿಯೊಬ್ಬರೂ ಗಿಡವನ್ನು ನೆಟ್ಟು ಅದನ್ನು ಪಾಲನೆ ಮಾಡಿ ಪೋಷಣೆ ಮಾಡುವ ಶಪಥ ಮಾಡಬೇಕು. ಈ ನಿಟ್ಟಿನಲ್ಲಿ ಸ್ಕೌಟ್–ಗೈಡ್ ಸ್ಥಳೀಯ ಸಂಸ್ಥೆಯು ಉತ್ತಮ ಕಾರ್ಯ ಮಾಡುತ್ತಿದೆ" ಎಂದು ಶ್ಲಾಘಿಸಿದರು. 150 ಸ್ಕೌಟ್ಸ್–ಗೈಡ್ಸ್ ವಿದ್ಯಾರ್ಥಿಗಳಿಗೆ ಪರಿಸರ ದಿನದ ಮಹತ್ವದ ಕುರಿತು ಹಾಗೂ ಜಾಗೃತಿಯನ್ನು ಮೂಡಿಸುವ ನಿಟ್ಟಿನಲ್ಲಿ ಚಿತ್ರಕಲೆ ಮತ್ತು ಪ್ರಬಂಧ ಸ್ಪರ್ಧೆಗಳನ್ನು ಏರ್ಪಡಿಸಲಾಯಿತು. ಭಾಗವಹಿಸಿದ ಎಲ್ಲ ವಿದ್ಯಾರ್ಥಿಗಳಿಗೂ ಪ್ರಮಾಣ ಪತ್ರಗಳನ್ನು ನೀಡಲಾಯಿತು. ಸ್ಥಳೀಯ ಸಂಸ್ಥೆಯ ಕಾರ್ಯದರ್ಶಿಯಾದ ಶ್ರೀ ಡಿ.ಎಚ್. ಪಾಟೀಲ್ ಸರ್ವರನ್ನು ಸ್ವಾಗತಿಸಿ ಕಾರ್ಯಕ್ರಮವನ್ನು ನಿರೂಪಿಸಿ ವಂದನಾರ್ಪಣೆ ಮಾಡಿದರು.



* ಜೂನ್ 14ರಂದು ಜಿಲ್ಲಾಡಳಿತ ಬೆಳಗಾವಿ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಬೆಳಗಾವಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಬೆಳಗಾವಿ, ಸ.ಜ.ನಾ. ವಿಜ್ಞಾನಕೇಂದ್ರ ಬೆಳಗಾವಿ ಹಾಗೂ ಜಿಲ್ಲಾ ಸಂಸ್ಥೆ ಬೆಳಗಾವಿ ಇವರುಗಳ ಸಹಯೋಗದಲ್ಲಿ ಬೆಳಗಾವಿ ನಗರದ ಶ್ರೀ ಸಿದ್ದರಾಮೇಶ್ವರ ಸಂಯುಕ್ತ ಪದವಿ ಪೂರ್ವಕಾಲೇಜು ಬೆಳಗಾವಿ ಇಲ್ಲಿ ವಿಶ್ವ ಪರಿಸರ ದಿನಾಚರಣೆ ಪ್ರಯುಕ್ತ ಆಯೋಜಿಸಿದ ಚಿತ್ರ ಕಲೆ, ಪ್ರಬಂಧ ಹಾಗೂ ರಸ ಪ್ರಶ್ನೆ ಸ್ಪರ್ಧೆಗಳಲ್ಲಿ ಭಾಗವಹಿಸಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಣಾ ಸಮಾರಂಭ ನಡೆಯಿತು. ಜಿಲ್ಲಾ ಪರಿಸರ ಅಧಿಕಾರಿಗಳು ಶ್ರೀಮತಿ ಶೋಭಾ ಫೋಳ ಪರಿಸರ ದಿನಾಚರಣೆ



ಪ್ರಯುಕ್ತ ಪ್ರಾಸ್ತಾವಿಕವಾಗಿ ಮಾತನಾಡುತ್ತಾ ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆ, "ನಮ್ಮ ಭೂಮಿ ನಮ್ಮ ಭವಿಷ್ಯ" ಎಂಬ ಘೋಷ ವಾಕ್ಯದಕುರಿತು ಮಾಹಿತಿ ನೀಡಿದರು. ಕಾರ್ಯಕ್ರಮದ ಸಾನಿಧ್ಯ ವಹಿಸಿದ್ದ ಪರಮ ಪೂಜ್ಯ ಡಾ. ಅಲ್ಲಮಪ್ರಭು ಸ್ವಾಮಿಗಳು, ಹಾಗೂ ವೇದಿಕೆ ಮೇಲಿನ ಗಣ್ಯ ಮಾನ್ಯರು ಸಸಿಗೆ ನೀರು ಎರೆಯುವ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಮುಖ್ಯ ಅತಿಥಿಗಳಾದ ಶ್ರೀ. ಮುರಳಿ ಮನೋಹರ ರೆಡ್ಡಿ, ಸದಸ್ಯ ಕಾರ್ಯದರ್ಶಿಗಳು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಬೆಳಗಾವಿ ಇವರು ಮಾತನಾಡುತ್ತಾ "ಪರಿಸರ ಸಂರಕ್ಷಣೆ ಮಾಡಬೇಕಾದರೆ ಸಸಿಗಳನ್ನು ನೆಡುವುದು ನಮ್ಮ ಜವಾಬ್ದಾರಿ. ಅಂತರ್ಜಲ ಹೆಚ್ಚಿಸಲುಎಲ್ಲರೂ ಕೈ ಜೋಡಿಸೋಣ" ಎಂದು ಹೇಳಿದರು. ಶ್ರೀ ಗಜಾನನ ಮನ್ನಿಕೇರಿ ಜಿಲ್ಲಾ ಮುಖ್ಯ ಆಯುಕ್ತರು ಭಾ.ಸ್ಕೌ.&ಗೈ. ಜಿಲ್ಲಾ ಸಂಸ್ಥೆ ಬೆಳಗಾವಿರವರು ಮಾತನಾಡುತ್ತಾ "ಚಳುವಳಿಯಲ್ಲಿ ಇಡೀ ವಿಶ್ವದಾದ್ಯಂತ 6 ಮಿಲಿಯನ್ ಮಕ್ಕಳು ಭಾಗವಹಿಸುತ್ತಾರೆ. ಹಲವಾರು ಚಟುವಟಿಕೆಗಳ ಮೂಲಕ ಮಕ್ಕಳ ಜೀವನದಲ್ಲಿ ಬದಲಾವಣೆತರುವಲ್ಲಿ ಮತ್ತು ಶಿಕ್ಷಣಕ್ಕೆ ಸಹಕಾರಿಯಾದ ಸಂಸ್ಥೆ ಎಂದರೆ ಸ್ಕೌಟ್ ಮತ್ತು ಗೈಡ್ ಸಂಸ್ಥೆ" ಎಂದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಶ್ರೀ. ಕೆ.ಬಿ. ಹಿರೇಮಠ ಇವರು ಮಾತನಾಡುತ್ತಾ "ಮಕ್ಕಳು ಸ್ಪರ್ಧೆಯಲ್ಲಿ ಭಾಗವಹಿಸಿ ಪ್ರಶಸ್ತಿ ಪಡೆದರೆ ಸಾಲದು ಪರಿಸರ ಇಲಾಖೆ ನೀಡಿದ ಘೋಷ ವಾಕ್ಯದಂತೆ ನಮ್ಮ ಭೂಮಿ ನಮ್ಮ ಭವಿಷ್ಯ ಎಂಬಂತೆ ಪರಿಸರದ ಬಗ್ಗೆ ಕಾಳಜಿ ಇರಬೇಕು ಪ್ಲಾಸ್ಟಿಕ್ ಬಳಕೆ ನಿಷೇಧ ಮಾಡಬೇಕು ನಮ್ಮ ಸುತ್ತಲಿನ ಪರಿಸರ ಸಂರಕ್ಷಣೆ ಮಾಡುವಲ್ಲಿ ಕೈಜೋಡಿಸೋಣ" ಎಂದು ಹೇಳಿದರು. ಕಾರ್ಯಕ್ರಮದ ಸಾನಿಧ್ಯ ವಹಿಸಿದ್ದ ಪರಮ ಪೂಜ್ಯ ಡಾ. ಅಲ್ಲಮಪ್ರಭು ಸ್ವಾಮಿಗಳು ಆಶಿರ್ವಚನ ನೀಡಿದರು. ಶ್ರೀ ರಾಜಶೇಖರ ಪಾಟೀಲ ಕಾರ್ಯಕ್ರಮ ನಿರೂಪಿಸಿದರು. ಪ್ರೊ. ಎ.ಕೆ. ಪಾಟೀಲ ಸ್ವಾಗತಿಸಿದರು.

*ಜೂನ್ 15 ರಂದು ಜಿಲ್ಲಾ ಆಯುಷ್ ಇಲಾಖೆ ಬೆಳಗಾವಿ ಜಿಲ್ಲಾ ಸಂಸ್ಥೆ ಬೆಳಗಾವಿ ಹಾಗೂ ಸೆಂಟ್ ಅಂಥೋಣಿ ಶಾಲೆ ಬೆಳಗಾವಿ ಇವರ ಸಹಯೋಗದಲ್ಲಿ ವಿಶ್ವ ಯೋಗ ದಿನಾಚರಣೆ ಪ್ರಯುಕ್ತ ಯೋಗ ಪ್ರಾರಂಭೋತ್ಸವ ಕಾರ್ಯಕ್ರಮ ಜರುಗಿತು. ಜಿಲ್ಲಾ ಆಯುಷ್ ಇಲಾಖೆಯ ವೈದ್ಯಾಧಿಕಾರಿಗಳಾದ ಡಾ. ಶ್ರೀಕಾಂತ್ ಬಿ. ಸುಣದೋಳಿ ಇವರು ಸಸಿಗೆ ನೀರು ಎರೆಯುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿದರು. ನಂತರ ಮಾತನಾಡುತ್ತ "ಯೋಗ ಮಾಡುವುದರಿಂದ ಶರೀರ ಸದೃಢವಾಗುತ್ತದೆ ಮತ್ತು ಆರೋಗ್ಯವಾಗಿರುತ್ತೇವೆ. ವಿವಿಧ ಆಸನಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಿರಿ" ಎಂದು ಹೇಳಿದರು. ಶಾಲೆಯ ಮುಖ್ಯೋಪಾಧ್ಯಾಯರಾದ ಸಿಸ್ಟರ್ ಮಾರಿಫೀಲ್ಡಾ ಮಾತನಾಡುತ್ತಾ ಎಲ್ಲ ವಿದ್ಯಾರ್ಥಿಗಳು ಯೋಗಾಸನದ ಆಸನಗಳನ್ನು ಕಡ್ಡಾಯವಾಗಿ ಅಳವಡಿಸಿಕೊಳ್ಳಲು ಕರೆ ನೀಡಿದರು. ಶ್ರೀ ಮಹೇಶ ಪೂಜಾರ, ಶ್ರೀಮತಿ ಸುನಿತಾ ಡಿಸೋಜಾ ಮತ್ತು ಮಾರ್ಗರೇಟ್ ಡಿಸೋಜಾ ಯೋಗ ತರಬೇತಿ ನೀಡಿದರು. ಕಾರ್ಯಕ್ರಮದಲ್ಲಿ 400 ಕಬ್-ಬುಲ್‌ಬುಲ್ ಸ್ಕೌಟ್-ಗೈಡ್ ಮಕ್ಕಳು ಹಾಗೂ ಶಾಲೆಯ ಮಕ್ಕಳು ಭಾಗವಹಿಸಿದ್ದರು.



ಬಳ್ಳಾರಿ

* ಜೂನ್ 05 ರಂದು ವಿಶ್ವ ಪರಿಸರ ದಿನಾಚರಣೆಯನ್ನು ಸಿರುಗುಪ್ಪ ತಾಲ್ಲೂಕು ಬಳ್ಳಾರಿ ಜಿಲ್ಲೆಯ ಎಲ್ಲಾ ಶಾಲಾ ಕಾಲೇಜುಗಳಲ್ಲಿ ಸಸಿ ನೆಡುವುದರ ಮೂಲಕ ಆಚರಿಸಲಾಯಿತು. ಸರ್ಕಾರಿ ಪ್ರೌಢ ಶಾಲೆ, ಕೆ.ಬೆಳಗಲ್ ತಾಲ್ಲೂಕು, ಸಿರುಗುಪ್ಪ ಜಿಲ್ಲೆ, ಬಳ್ಳಾರಿಯಲ್ಲಿ ಶ್ರೀ ರಸುಲ್ ಸಾಬ್ ಸಾಂಗ್ಲಿ, ಮುಖ್ಯ ಗುರುಗಳು, ಶ್ರೀ ತಿಮ್ಮಪ್ಪ ಎಸ್.ಡಿ.ಎಂ.ಸಿ. ಅಧ್ಯಕ್ಷರು, ಶ್ರೀ ನಟರಾಜ ಸ್ವಾಮಿ ಎ.ಎಲ್.ಟಿ.(ಎಸ್) ಕಾರ್ಯದರ್ಶಿಗಳು ಭಾರತ್ ಸ್ಕೌಟ್ಸ್-ಗೈಡ್ಸ್ ಸ್ಥಳೀಯ ಸಂಸ್ಥೆ ಸಿರುಗುಪ್ಪ ಜಿಲ್ಲೆ, ಬಳ್ಳಾರಿ ಸಹ ಶಿಕ್ಷಕರು ಹಾಗೂ ಸ್ಕೌಟ್ಸ್ ಮಕ್ಕಳು ಭಾಗವಹಿಸಿದ್ದರು. ಮುಖ್ಯ ಗುರುಗಳು ವಿಶ್ವ ಪರಿಸರ ದಿನದ ಶುಭಾಷಯಗಳನ್ನು ತಿಳಿಸುತ್ತಾ ಪ್ರಕೃತಿಯನ್ನು ತಾಯಿ ಎಂದು ಪೂಜಿಸಿ, ದೇವರೆಂದು ಗೌರವಿಸಿ, ಮಗುವೆಂದು ರಕ್ಷಿಸಿ, ಸ್ನೇಹಿತರಂತೆ ಬೆಂಬಲಿಸಿ ಪರಿಸರ ಸಂರಕ್ಷಣೆ ಹಾಗೂ ಪರಿಸರ ಮಾಲಿನ್ಯತೆಯನ್ನು ಹೋಗಲಾಡಿಸುವುದು ನಮ್ಮೆಲ್ಲರ ಕರ್ತವ್ಯ ಎಂದು ಹೇಳಿದರು.



ಶಾಂತಿನಿಕೇತನ ವಿದ್ಯಾ ಮಂದಿರ ಸಿರುಗುಪ್ಪದಲ್ಲಿ, ಶಾಲಾ ಆಡಳಿತ ಮಂಡಳಿಯ ಮುಖ್ಯಸ್ಥರಾದ ಶ್ರೀ ಕೆ. ಕೃಷ್ಣ, ಮುಖ್ಯ ಗುರುಗಳಾದ ಶ್ರೀಮತಿ ಲಲಿತಶಾಸ್ತ್ರಿ, ಸ್ಕೌಟ್ಸ್ ಶಿಕ್ಷಕರಾದ ಶ್ರೀ ಸುಧೀಂದ್ರ ಕೆ., ಗೈಡ್ ಕ್ಯಾಪ್ಟನ್ ಶ್ರೀಮತಿ ಯೋಗೇಶ್ವರಿ ಹಾಗೂ ಸ್ಕೌಟ್ಸ್-ಗೈಡ್ಸ್ ಮಕ್ಕಳು ಹಾಗೂ ಶಿಕ್ಷಕರು ಭಾಗವಹಿಸಿದ್ದರು. ಶ್ರೀ ಕೃಷ್ಣದೇವರಾಯ ಶಾಲೆಯ ಮುಖ್ಯಸ್ಥರಾದ ಶ್ರೀ



ಯಲಿಗಾರ ವೆಂಕಟೇಶ್, ಮುಖ್ಯ ಗುರುಗಳು ಹಾಗೂ ಸ್ಕೌಟ್ಸ್ ಶಿಕ್ಷಕರಾದ ಶ್ರೀ ಅಮರೇಶ್, ಕಬ್ಸ್ ಶಿಕ್ಷಕರಾದ ಶ್ರೀ ಮಂಜುನಾಥ್, ಬುಲ್ಬುಲ್ ಶಿಕ್ಷಕಿಯಾದ ಶ್ರೀಮತಿ ರೇಣುಕ ಭವಾನಿ ಹಾಗೂ ಮಕ್ಕಳು ಸಸಿ ನೆಡುವುದರೊಂದಿಗೆ ವಿಶ್ವ ಪರಿಸರ ದಿನಾಚರಣೆಯನ್ನು ಆಚರಿಸಿದರು. ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ (ರಾಜೀವ್ ಗಾಂಧಿ ನಗರ) ಸಿರುಗುಪ್ಪದಲ್ಲಿ ಶ್ರೀಮತಿ ಗೀತಾ ಜೆ., ಗೈಡ್ಸ್ ಶಿಕ್ಷಕಿ ಶ್ರೀಮತಿ ಆಶ್ವಿನಿ, ಸಹ ಶಿಕ್ಷಕಿ ಹಾಗೂ ಮಕ್ಕಳೊಂದಿಗೆ ಸಸಿ ನೆಡುವುದರ ಮೂಲಕ ವಿಶ್ವ ಪರಿಸರ ದಿನಾಚರಣೆಯನ್ನು ಆಚರಿಸಿದರು.

ಬೆಂಗಳೂರು ದಕ್ಷಿಣ

* ಬೆಂಗಳೂರು ದಕ್ಷಿಣ ಜಿಲ್ಲೆಯ ವೈಟ್‌ಫೀಲ್ಡ್ ಸ್ಥಳಿಯ ಸಂಸ್ಥೆಯ ಹೆಚ್.ಎ.ಎಲ್ ರೋವರ್ಸ್ ಮುಕ್ತದಳದಿಂದ ಜೂನ್ 06 ರಿಂದ 11ರ ವರಗೆ ಹೆಚ್.ಎ.ಎಲ್ ಸ್ಕೌಟ್ಸ್ ಡೆನ್‌ನ ಆವರಣದಲ್ಲಿ ಮಕ್ಕಳಿಗೆ ದಳಗಳ ಮಟ್ಟದಲ್ಲಿ ಬೇಸಿಗೆ ಶಿಬಿರವನ್ನು ಆಯೋಜನೆ ಮಾಡಲಾಗಿತ್ತು. ಅಗ್ನಿಶಾಮಕ ದಳದವರಿಂದ ಪ್ರಾಯೋಗಿಕ ತರಬೇತಿ ಮಾಡಿಸಲಾಯಿತು.



* ಮೇ 08 ರಿಂದ 17ರ ವರಗೆ ನೆಡೆದ ರಾಷ್ಟ್ರ ಮಟ್ಟದ ವಿಪತ್ತು ನಿರ್ವಹಣಾ ಮತ್ತು ಪೂರ್ವ ಸಿದ್ದತಾ ಶಿಬಿರವನ್ನು ರಾಜ್ಯ ತರಬೇತಿ ಕೇಂದ್ರ, ಡೆಹ್ರಾಡೂನ್, ಉತ್ತರಾಖಂಡ ರಾಜ್ಯದಲ್ಲಿ ಆಯೋಜನೆ ಮಾಡಲಾಯಿತು. ಕರ್ನಾಟಕ ರಾಜ್ಯದ 5 ಜಿಲ್ಲೆಗಳಿಂದ 9 ರೋವರ್ಸ್, 04 ರೇಂಜರ್ಸ್ ಹಾಗೂ 01 ದಳ ನಾಯಕರುಗಳನ್ನು ಸೇರಿ ಒಟ್ಟು 14 ಮಂದಿ ಸಕ್ರಿಯವಾಗಿ ಭಾಗವಹಿಸಿದರು.

* ಜೂನ್ 05 ರಂದು :ವಿಶ್ವ ಪರಿಸರ ದಿನಾಚರಣೆ"ಯನ್ನು ಬೆಂಗಳೂರು ದಕ್ಷಿಣ ಜಿಲ್ಲೆಯ ಸ್ಥಳಿಯ ಮತ್ತು ದಳ ಮಟ್ಟದಲ್ಲಿ ಆಯೋಜಿಸಲಾಯಿತ್ತು. ಜಿಲ್ಲಾದ್ಯಂತ ಕಬ್-ಬುಲ್‌ಬುಲ್, ಸ್ಕೌಟ್ಸ್-ಗೈಡ್ಸ್, ರೋವರ್ಸ್-ರೇಂಜರ್ಸ್ ಪರಿಸರ ದಿನಾಚರಣೆಯ ಅಂಗವಾಗಿ ಗಿಡಗಳನ್ನು ನೆಡುವುದು, ಹಾಕಿದ ಸಸಿಗಳನ್ನು ಯಾವ ರೀತಿಯಾಗಿ ಪಾಲನೆ ಮಾಡವ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಲು ಜಾಥವನ್ನು ಆಯೋಜನೆ ಮಾಡಲಾಯಿತ್ತು.

* ಜೂನ್ 21 ರಂದು ಬೆಂಗಳೂರು ದಕ್ಷಿಣ ಜಿಲ್ಲಾ ಸಂಸ್ಥೆ ವತಿಯಿಂದ ಡಾ॥ ಅನಿಬೆಸೆಂಟ್ ಪಾರ್ಕ್ ರಾಜ್ಯ ತರಬೇತಿ ಮತ್ತು ಶಿಬಿರ ಕೇಂದ್ರ ದೂಡ್ಡಬಳ್ಳಾಪುರ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ 10ನೇ ವಿಶ್ವ ಯೋಗ ದಿನಾಚರಣೆ "ಯೋಗೋತ್ಸವ"ವನ್ನು ಆಯೋಜಿಸಲಾಯಿತು.



"ಯೋಗೋತ್ಸವ"ವು ಶ್ರೀ ಟಿ.ಕೆ. ನಾರಾಯಣಸ್ವಾಮಿ ಜಿಲ್ಲಾ ತರಬೇತಿ ಆಯುಕ್ತರು (ಸ್ಕೌ), ಶ್ರೀ ಟಿ. ಸಿದ್ದಗಂಗಯ್ಯ ಜಿಲ್ಲಾ ಪದಕ ಕಾರ್ಯದರ್ಶಿ ನೇತೃತ್ವದಲ್ಲಿ ನಡೆಯಿತು. ಶ್ರೀ ಅಣ್ಣಪ್ಪ ಜಿ. ಗುರುವ ಅವರು ಆಸನಗಳನ್ನು ಪ್ರದರ್ಶಿಸಿದರು.ಯೋಗೋತ್ಸವದಲ್ಲಿ 500 ಸ್ಕೌಟ್ಸ್-ಗೈಡ್ಸ್, ದಳ ನಾಯಕರುಗಳು ಭಾಗವಹಿಸಿದರು.

* Gayatri Guide Company and Udaya Scout troop Open Units of Bangalore South District Celebrated its 39th Welcome day on Sunday 23.6.2024. Smt Tejasvini, Session leader welcomed the Chief guest and other memner on the stage. Guruji Satyanarayana S.M. briefed about the annual activities of the unit for the year 2024-25 Smt Girija S. Sarayana gave the details of time table of th course. Shantha Bai Mehta Welcomed New Children to the unite. Dignitaries on the Dias bless the children and expressed their support and encouraged to attend progressove training camps. Sri Dr. Devraj, vice principal, MDRS, Smt. Geethamaayi A., Sri Ashok Nagori, press Reporter, Smt. Savitha and Smt Hemalata GC were present. Children gave cultural program. Smt. Kavua session leader propsed vote of thanks.



ಬೆಂಗಳೂರು ಉತ್ತರ

* ವಿಶ್ವ ಪರಿಸರ ದಿನಾಚರಣೆಯನ್ನು ಜೂನ್ 05ರಂದು ಯಲಹಂಕ ಬಳಿ ಇರುವ ಗಂಟಿಗಾನಹಳ್ಳಿ ಇಲ್ಲಿ ನಡೆಸಲಾಯಿತು ಸಮುದಾಯ ಸೇವೆಯನ್ನು ಮಾಡಲಾಯಿತು. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಜಿಲ್ಲಾ ಮುಖ್ಯ ಆಯುಕ್ತರಾದ ಡಾ॥ ಪ್ರಸನ್ನಕುಮಾರ್ ಹಾಗೂ ಜಿಲ್ಲಾ ಕಾರ್ಯದರ್ಶಿ ಶ್ರೀ ಬಿ.ಕೆ. ಶೇಷಾದ್ರಿ ಭಾಗವಹಿಸಿದ್ದರು. ಸೇವಾ ಶಿಬಿರದಲ್ಲಿ ಭಾಗವಹಿಸಿದ ರೋವರ್-ರೇಂಜರ್‌ಗಳನ್ನು ಗೌರವಿಸಲಾಯಿತು. ಎಲ್‌ಇನ್‌ಟಿ ಕಂಪೆನಿಯ ಸಹಕಾರದಿಂದ 2000 ಗಿಡವನ್ನು ನೆಡಲಾಗಿದ್ದು. ಅದರ ಮುಂದಿನ ಆರೈಕೆ ಮಾಡಲು ಸ್ಕೌಟ್ಸ್-ಗೈಡ್ಸ್ ಬೆಂಗಳೂರು ಉತ್ತರ ಜಿಲ್ಲೆಗೆ ವಹಿಸಿಕೊಟ್ಟರು. ಗ್ರಾಮ ಪಂಚಾಯತ್ ಅಧ್ಯಕ್ಷರಾದ ಶ್ರೀ ಲಕ್ಷ್ಮಿಪತಿಯವರು ಸ್ಕೌಟ್ಸ್-ಗೈಡ್ಸ್ ಸಂಸ್ಥೆಯವರು 24 ತಿಂಗಳು ನಮ್ಮ ಗ್ರಾಮದಲ್ಲಿ ಸ್ವಚ್ಚತೆ ಗಿಡ ಬೆಳೆಸುವಲ್ಲಿ ಮುಖ್ಯಪಾತ್ರ ವಹಿಸಿದ್ದು ನಮ್ಮ ಗ್ರಾಮ ಪಂಚಾಯತ್ ತಮ್ಮ ಸಂಸ್ಥೆಗೆ ಆಭಾರಿಯಾಗಿರುತ್ತೇವೆ ಎಂದರು.



* ಅಯುಷ್ ಇಲಾಖೆ ವತಿಯಿಂದ ಅಯೋಜಿಸಿದ ಯೋಗೊತ್ಸವ ಕಾರ್ಯಕ್ರಮಲ್ಲಿ ಬೆಂಗಳೂರು ಉತ್ತರ ಜಿಲ್ಲೆ ವತಿಯಿಂದ ಅನೇಕ ಶಾಲೆಗಳಲ್ಲಿ ಯೋಗೊತ್ಸವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಚಾಮರಾಜನಗರ

* "ಜೂನ್ 5 ರಂದು "ವಿಶ್ವಪರಿಸರ ದಿನಾಚರಣೆ"ಯನ್ನು ಆಚರಿಸಲಾಯಿತು. ಪ್ರತಿ ವರ್ಷ ಒಂದೊಂದು ಧ್ಯೇಯ ವಾಕ್ಯಗಳೊಂದಿಗೆ ಈ ದಿನ ಆಚರಣೆಗೊಳ್ಳುತ್ತದೆ. 2024ರ ವರ್ಷವನ್ನು "ನಮ್ಮ ಭೂಮಿ ನಮ್ಮ ಭವಿಷ್ಯ" ಎಂಬ ಧ್ಯೇಯ ವಾಕ್ಯದೊಂದಿಗೆ ಆಚರಿಸಲಾಯಿತು." ಎಂದು ಸಹಾಯಕ ವಲಯ ಅರಣ್ಯಾಧಿಕಾರಿ ಶ್ರೀ ಸುರೇಶ್ ಕೆ., ಹೇಳಿದರು. ಚಾಮರಾಜನಗರ ಪಟ್ಟಣದ ಕರಿವರದರಾಯ ಬೆಟ್ಟದಲ್ಲಿ ಹಮ್ಮಿಕೊಂಡಿದ್ದ ವಿಶ್ವ ಪರಿಸರ ದಿನಾಚರಣೆಯ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ವಲಯ ಅರಣ್ಯಾಧಿಕಾರಿ ಶ್ರೀ ಉಮೇಶ್ ಮಾತನಾಡಿ "ಸಾಧ್ಯವಾದಾಗಲೆಲ್ಲಾ ರಾಸಾಯನಿಕ ಮುಕ್ತ, ಸಾವಯವ ಹಾಗೂ ಸಸ್ಯ ಮೂಲದ ಆಹಾರ ಪದಾರ್ಥಗಳನ್ನೇ ಖರೀದಿಸುವುದು. ಇದರಿಂದ ಪರಿಸರಕ್ಕೂ ನಿರಾಳ, ನಮ್ಮ ಆರೋಗ್ಯಕ್ಕೂ ವರದಾನ" ಎಂದರು. ಬಾಲ ನ್ಯಾಯ ಮಂಡಳಿ ಸದಸ್ಯ ಶ್ರೀ ಟಿ.ಜೆ. ಸುರೇಶ್ ಮಾತನಾಡಿ "ಜನರು, ಸಂಘ ಸಂಸ್ಥೆಗಳಿಂದ ಪರಿಸರ ಸಂರಕ್ಷಣೆ ಯೋಜನೆಯಲ್ಲಿ ಕೈಜೋಡಿಸುವುದು: ನಮ್ಮ ಜನಪ್ರತಿನಿಧಿಗಳನ್ನು ಪರಿಸರ ಪ್ರೇಮಿಗಳಾಗಲು ಒತ್ತಾಯಿಸಿ ಸ್ಥಳೀಯ ಯೋಜನೆಗಳ ಬಗ್ಗೆ ಜಾಗೃತರಾಗಿಸುವುದು, ಅಗತ್ಯಬಿದ್ದಲ್ಲಿ ಕೈಜೋಡಿಸಿ ಪರಿಸರ ಸಂರಕ್ಷಣೆಗಾಗಿ ಹೋರಾಡುವುದು ಮುಖ್ಯ" ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಅರಣ್ಯ ಸಿಬ್ಬಂದಿಗಳು ಹಾಗೂ 120 ರೋವರ್ಸ್ ಮತ್ತು ರೇಂಜರ್ಸ್ ಹಾಜರಿದ್ದರು, ಕಾರ್ಯಕ್ರಮವನ್ನು ಶ್ರೀ ಅಶೋಕ್ ಕುಮಾರ್ ಕೆ.ಪಿ., ಜಿಲ್ಲಾ ಸಂಘಟಕರು ಸಂಘಟಿಸಿದರು.



* ಜೂನ್ 15 ರಂದು ಸರ್ಕಾರಿ ಪ್ರೌಢಶಾಲೆ ಕೆಸ್ತೂರು, ಎಸ್.ಡಿ.ವಿ.ಎಸ್. ವಿದ್ಯಾಸಂಸ್ಥೆ ಯಳಂದೂರು, ನಿರ್ಮಲ ಆಂಗ್ಲ ಮಾಧ್ಯಮ ಶಾಲೆ ಗುಂಡ್ಲುಪೇಟೆ, ಸೇಂಟ್ ಜಾನ್ ಶಾಲೆ ಗುಂಡ್ಲುಪೇಟೆ ಹಾಗೂ ಜೆ.ಎಸ್.ಎಸ್. ಪ್ರೌಢಶಾಲೆ ಹೊರಯಾಲದಲ್ಲಿ 10ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯ ಪ್ರಯುಕ್ತ ಯೋಗ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು ಈ ಕಾರ್ಯಕ್ರಮದಲ್ಲಿ "ಮಹಿಳಾ ಸಬಲೀಕರಣಕ್ಕಾಗಿ ಯೋಗ" ಎಂಬ ಘೋಷವಾಕ್ಯದೊಂದಿಗೆ ಯೋಗ ಕಾರ್ಯಕ್ರಮ ನಡೆಯಿತು, ಈ ಕಾರ್ಯಕ್ರಮದಲ್ಲಿ ಜಿಲ್ಲಾ ಆಯುಷ ಅಧಿಕಾರಿ ಡಾ. ಸುಜಾತರವರು ಅಧ್ಯಕ್ಷತೆ ವಹಿಸಿದ್ದರು ಈ ಸಂದರ್ಭದಲ್ಲಿ ಮಾತನಾಡಿದ ಅವರು "ಯೋಗದಿಂದ ಉತ್ತಮ ಆರೋಗ್ಯ ಕಾಪಾಡಿಕೊಳ್ಳಬಹುದು ಪ್ರತಿದಿನ ಯೋಗ ಮಾಡುವುದರಿಂದ ನಮ್ಮ ಆರೋಗ್ಯ ಚೆನ್ನಾಗಿರುತ್ತದೆ ಮತ್ತು ಲವಲವಿಕೆಯಿಂದ ಜೀವನ ನಡೆಸಬಹುದು" ಎಂದರು ಮತ್ತು ಶಾಲೆಯ ಮುಖ್ಯ ಶಿಕ್ಷಕರಾದ ಶ್ರೀಮತಿ ರೇಣುಕಮ್ಮ ರವರು "ಎಲ್ಲರೂ ದಿನನಿತ್ಯ ಯೋಗ ಮಾಡುವುದರಿಂದ ಉತ್ತಮ ಆರೋಗ್ಯ ದೈಹಿಕ



ಸದೃಢತೆಯಿಂದ ಬದುಕಬಹುದು" ಎಂದು ತಿಳಿಸಿದರು ಈ ಕಾರ್ಯಕ್ರಮದಲ್ಲಿ ಜಿಲ್ಲಾ ತರಬೇತಿ ಆಯುಕ್ತರಾದ ಶ್ರೀಮತಿ ಅನ್ನಪೂರ್ಣಮ್ಮ ಹಾಗೂ ಸಂಘಟಕರಾದ ಶ್ರೀ ಅಶೋಕ್ ಕುಮಾರ್ ಕೆ.ಪಿ.ರವರು ಉಪಸ್ಥಿತರಿದ್ದರು.

ಚಿಕ್ಕಬಳ್ಳಾಪುರ

* ಮೇ 23 ರಿಂದ 25ರ ವರಿಗೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಚಿಕ್ಕನಾಗವಲ್ಲಿ ಚಿಕ್ಕಬಳ್ಳಾಪುರ ಇಲ್ಲಿ 3 ದಿನಗಳ ಬೇಸಿಗೆ ಶಿಬಿರವನ್ನು ಸಂಘಟಿಸಲಾಗಿತ್ತು.



* ಜೂನ್ 01 ರಿಂದ 03ರ ವರಿಗೆ ಸರಸ್ವತಿ ಕಾನ್ವೆಂಟ್ ಶಿಡ್ಲಘಟ್ಟ ಇಲ್ಲಿ 3 ದಿನಗಳ ಬೇಸಿಗೆ ಶಿಬಿರವನ್ನು ಸಂಘಟಿಸಲಾಗಿತ್ತು.

* ಜೂನ್ 05 ರಂದು ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಚಿಂತಾಮಣಿ ಚಿಕ್ಕಬಳ್ಳಾಪುರ ಜಿಲ್ಲೆ ಇಲ್ಲಿ ಜಿಲ್ಲಾ ಮಟ್ಟದ ಪರಿಸರ ದಿನಾಚರಣೆ ಕಾರ್ಯಕ್ರಮ ಆಯೋಜಿಸಲಾಗಿತ್ತು.



* ಜೂನ್ 05 ರಿಂದ 06ರ ವರಿಗೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಚಿಂತಾಮಣಿ ಚಿಕ್ಕಬಳ್ಳಾಪುರ ಜಿಲ್ಲೆ ಇಲ್ಲಿ ರೋವರ್ಸ್‌ಗಳಿಗೆ ಬೇಸಿಗೆ ಶಿಬಿರ ಆಯೋಜಿಸಲಾಗಿತ್ತು.

* ಜೂನ್ 05 ರಂದು ಜಿಲ್ಲೆಯ ಎಲ್ಲಾ ಸ್ಥಳೀಯ ಸಂಸ್ಥೆ ಮತ್ತು ದಳ ಹಂತದಲ್ಲಿ ವಿಶ್ವ ಪರಿಸರ ದಿನಾಚರಣೆಯನ್ನು ಉತ್ತಮವಾಗಿ ಸಂಘಟಿಸಲಾಯಿತ್ತು.



* ಜೂನ್ 15 ರಂದು ಸ.ಹಿ.ಪ್ರಾ. ಶಾಲೆ, ನಂದಿ, ಬಿ.ಜಿ.ಎಸ್ ಶಾಲೆ ಆಗಲಗುರ್ಕಿ ಇಲ್ಲಿ ಜಿಲ್ಲಾ ಮಟ್ಟದ ಯೋಗೋತ್ಸವ ಕಾರ್ಯಕ್ರಮ ಆಯೋಜಿಸಲಾಗಿತ್ತು ಮತ್ತು ಇದೇ ಸಂದರ್ಭದಲ್ಲಿ ಚಿಂತಾಮಣಿ ಸರ್ಕಾರಿ ಪ್ರೌಡಶಾಲೆ ಹಾಗೂ ಪ್ರೀತಿ ಪಬ್ಲಿಕ್ ಶಾಲೆ ಚಿಂತಾಮಣಿ, ಬಿ.ಜಿ.ಎಸ್ ಪಬ್ಲಿಕ್ ಶಾಲೆ ಶಿಡ್ಲಘಟ್ಟ, ನ್ಯಾಷನಲ್ ಕಾಲೇಜು ಗೌರಿಬಿದನೂರು, ಆದರ್ಶ ವಿದ್ಯಾಲಯಾ ಬಾಗೇಪಲ್ಲಿ, ಪಿ.ಎಂ. ಸ.ಮಾ.ಹಿ.ಪ್ರಾ.ಶಾಲೆ. ಸೋಮೇನಹಳ್ಳಿ ಗುಡಿಬಂಡೆ ಇಲ್ಲಿ ತಾಲ್ಲೂಕು ಮಟ್ಟದ "ಯೋಗೋತ್ಸವ 2024" ಕಾರ್ಯಕ್ರಮವನ್ನು ಜಿಲ್ಲಾ ಆಯುಷ್ ಇಲಾಖೆ, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆಯ ವತಿಯಿಂದ ಉತ್ತಮವಾಗಿ ಸಂಘಟಿಸಲಾಯಿತ್ತು. ಜಿಲ್ಲೆಯ ಎಲ್ಲಾ ಕಬ್ಸ್– ಬುಲ್‌ಬುಲ್, ಸ್ಕೌಟ್ಸ್–ಗೈಡ್ಸ್, ರೋವರ್ಸ್–ರೇಂಜರ್ಸ್ ವಿದ್ಯಾರ್ಥಿಗಳು ಹಾಗೂ ದಳ ನಾಯಕರು ಪದಾಧಿಕಾರಿಗಳು ಉತ್ತಮವಾಗಿ ಭಾಗವಹಿಸಿ ಯಶಸ್ವಿಗೊಳಿಸಿದರು.

* ಜೂನ್ 14 ರಂದು ಸರ್ಕಾರಿ ಮಹಿಳಾ ಕಾಲೇಜು ಚಿಂತಾಮಣಿ, ಉತ್ತನೂರು ಇಲ್ಲಿನ ರಾಜಮ್ಮ ರೇಂಜರ್ಸ್ ಘಟಕ ವತಿಯಿಂದ ಕೂಡುಮಲೇಶ್ವರ ಬೆಟ್ಟ ಇಲ್ಲಿ ಬೀಜಬಿತ್ತನೆ ಮತ್ತು ಚಾರಣ ಶಿಬಿರ ಆಯೋಜಿಸಲಾಗಿತ್ತು.

ದಕ್ಷಿಣ ಕನ್ನಡ

* ರಾಜ್ಯ ಸಂಸ್ಥೆ ಹಾಗೂ ದಕ್ಷಿಣ ಕನ್ನಡ ಜಿಲ್ಲಾ ಸಂಸ್ಥೆಯ ವತಿಯಿಂದ ಮೇ 20 ರಿಂದ 26ರ ವರೆಗೆ ಜಿಲ್ಲಾ ತರಬೇತಿ ಕೇಂದ್ರ, ಪಿಲಿಕುಳದಲ್ಲಿ ಕಬ್ ಮಾಸ್ಟರ್, ಗೈಡ್ ಕ್ಯಾಪ್ಟನ್, ಫ್ಲಾಕ್ ಲೀಡರ್ ಮತ್ತು ಸ್ಕೌಟ್ ಮಾಸ್ಟರ್‌ಗಳ ಮುಂದುವರಿದ ತರಬೇತಿ ಹಾಗೂ ಮೇ 24 ರಿಂದ 26ರ ವರೆಗೆ ಬನ್ನಿ ಶಿಕ್ಷಕಿಯರ ಪ್ರಾಥಮಿಕ ತರಬೇತಿ ಶಿಬಿರವು ಜರುಗಿತು. ಕಬ್ ವಿಭಾಗದಲ್ಲಿ 18, ಫ್ಲಾಕ್ ವಿಭಾಗದಲ್ಲಿ 25, ಸ್ಕೌಟ್ ವಿಭಾಗದಲ್ಲಿ 37, ಗೈಡ್ ವಿಭಾಗದಲ್ಲಿ 24, ಬನ್ನಿ ವಿಭಾಗದಲ್ಲಿ 44 ಒಟ್ಟು 148 ಶಿಬಿರಾರ್ಥಿಗಳು ಭಾಗವಹಿಸಿದ್ದರು. ಇದರ ಸಮಾರೋಪ ಸಮಾರಂಭ ಕಾರ್ಯಕ್ರಮ ದಿನಾಂಕ 26.05.2024 ರಂದು ನಡೆಯಿತು. ಸಭಾ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ಗೈಡ್ ಆಯುಕ್ತರಾದ ಶ್ರೀಮತಿ ವಿಮಲಾ ರಂಗಯ್ಯರವರು ವಹಿಸಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಮೂಡು ಶೆಡ್ಡೆಗ್ರಾಮ ಪಂಚಾಯತ್‌ನ ಉಪಾಧ್ಯಕ್ಷರಾದ ಶ್ರೀಮತಿ ಬಬಿತ ಶೆಟ್ಟಿ, ನಾಯಕಿ ಶ್ರೀಮತಿ ಜಯಶ್ರೀ (ಎಲ್.ಟಿ), ಕಬ್ ವಿಭಾಗದ ನಾಯಕರಾಗಿ ಶ್ರೀ ನಾರಾಯಣ ಸ್ವಾಮಿ (ಎಲ್.ಟಿ), ಕೋಲಾರ, ಫ್ಲಾಕ್ ವಿಭಾಗದ ನಾಯಕಿಯಾಗಿ ಶ್ರೀಮತಿ ಮೀನಾಕ್ಷಿಯಮ್ಮ (ಎ.ಎಲ್.ಟಿ), ಶಿವಮೊಗ್ಗ, ಸ್ಕೌಟ್ ವಿಭಾಗದ ನಾಯಕರಾಗಿ ಶ್ರೀ ಬಿ.ಡಿ ಫರ್ನಾಂಡಿಸ್ (ಎಲ್.ಟಿ), ಕಾರವಾರ, ಗೈಡ್ ವಿಬಾಗದ ನಾಯಕಿಯಾಗಿ ಶ್ರೀಮತಿ ಕಾತ್ಯಾಯಿನಿ (ಎಲ್.ಟಿ), ಶಿವಮೊಗ್ಗ, ಮತ್ತು ಜಿಲ್ಲಾ ಪದಾಧಿಕಾರಿಗಳು ಉಪಸ್ಥಿತರಿದ್ದರು. ಈ ಸಂದರ್ಭದಲ್ಲಿ ಶಿಬಿರ ಸ್ಥಳಕ್ಕೆ ಮಾನ್ಯ ಜಿಲ್ಲಾ ಮುಖ್ಯ ಆಯುಕ್ತರಾದ ಡಾ. ಎಮ್. ಮೋಹನ್ ಆಳ್ವರವರು ಭೇಟಿ ನೀಡಿ ಶಿಬಿರಾರ್ಥಿಗಳಿಗೆ ಶುಭ ಹಾರೈಸಿದರು.









* ದಕ್ಷಿಣ ಕನ್ನಡ ಜಿಲ್ಲಾ ಸಂಸ್ಥೆಯ ವತಿಯಿಂದ ಮೇ 28 ರಿಂದ 30ರ ವರೆಗೆ ರೋವರ್–ರೇಂಜರ್ಸ್‌ಗಳಿಗೆ ಪಟಾಲಂ ನಾಯಕರ ತರಬೇತಿ ಶಿಬಿರ ಹಾಗೂ ಮೇ 29 ರಿಂದ 30ರ ವರೆಗೆ ರೋವರ್ ಸ್ಕೌಟರ್ ಲೀಡರ್ ಹಾಗೂ ರೇಂಜರ್ ಲೀಡರ್‌ಗಳಿಗೆ ಪುನಶ್ಚೇತನಾ ಶಿಬಿರವನ್ನು ನಡೆಸಲಾಯಿತು. ಈ ಶಿಬಿರದ ನಾಯಕರಾಗಿ ಜಿಲ್ಲಾ ಕಾರ್ಯದರ್ಶಿ ಶ್ರೀ ಪ್ರತಿಮ್ ಕುಮಾರ್ ಕೆ.ಎಸ್. ಹಾಗೂ ವಿಷ್ಣು ಪ್ರಸಾದ್ ಹೆಚ್.ಡಬ್ಲ್ಯೂ.ಬಿ (ರೋ), ಮೈಸೂರು, ಶ್ರೀ ವೆಂಕಟ್‌ರಾವ್ ಹೆಚ್.ಡಬ್ಲ್ಯೂ.ಬಿ.(ಸ್ಕೌ), ಶ್ರೀಮತಿ ಅಮೃತ ರಶ್ಮಿ (ಆರ್.ಎಲ್), ಶ್ರೀಮತಿ ಪ್ರೀತಿ (ಆರ್.ಎಲ್) ಸಹಕರಿಸಿದರು. ಜಿಲ್ಲಾ ಆಯುಕ್ತರಾದ ಶ್ರೀ ಬಿ.ಎಮ್. ತುಂಬೆ ಉದ್ಘಾಟನಾ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದರು. ಇವರೊಂದಿಗೆ ಜಿಲ್ಲಾ ಸಹಾಯಕ ಆಯುಕ್ತರಾದ ಶ್ರೀ ಶ್ರೀನಿವಾಸ ಪೂಜಾರಿ ಭಾಗವಹಿಸಿದರು. ಇದರಲ್ಲಿ ಒಟ್ಟು 16 ರೋವರ್ಸ್ 24 ರೇಂಜರ್ಸ್ ಭಾಗವಹಿಸಿದ್ದರು.



* ದಕ್ಷಿಣ ಕನ್ನಡ ಜಿಲ್ಲಾ ಸಂಸ್ಥೆ ಹಾಗೂ ಮೂಡುಬಿದಿರೆ ಸ್ಥಳೀಯ ಸಂಸ್ಥೆಯ ಸಹಭಾಗಿತ್ವದಲ್ಲಿ ಮೇ 28 ರಿಂದ 30ರ ವರೆಗೆ 2023–24ನೇ ಸಾಲಿನ ಜಿಲ್ಲಾ ಮಟ್ಟದ ರಾಜ್ಯ ಪುರಸ್ಕಾರ ಸ್ಕೌಟ್ಸ್–ಗೈಡ್ಸ್ ಪೂರ್ವಸಿದ್ಧತಾ ಪರೀಕ್ಷೆನಡೆಯಿತು. ಸಭಾ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ಕಾರ್ಯದರ್ಶಿ ಶ್ರೀ ಪ್ರತೀಮ್ ಕುಮಾರ್‌ರವರು ವಹಿಸಿಕೊಂಡು ಅಧ್ಯಕ್ಷೀಯ ನುಡಿ ನುಡಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಪದಾಧಿಕಾರಿಗಳು ಹಾಗೂ ಸ್ಥಳೀಯ ಸಂಸ್ಥೆ ಪದಾಧಿಕಾರಿಗಳು ಉಪಸ್ಥಿತರಿದ್ದರು. ಶಿಬಿರದಲ್ಲಿ ಸ್ಕೌಟ್ ವಿಭಾಗದಲ್ಲಿ 116 ವಿದ್ಯಾರ್ಥಿಗಳು ಹಾಗೂ ಗೈಡ್ ವಿಭಾಗದಲ್ಲಿ 171 ವಿದ್ಯಾರ್ಥಿಗಳು ಒಟ್ಟು 287 ಸ್ಕೌಟ್ಸ್–ಗೈಡ್ಸ್‌ಗಳು ಮತ್ತು 35 ಶಿಕ್ಷಕರು ಭಾಗವಹಿಸಿದರು. ಶ್ರೀ ರಾಮಕೃಷ್ಣ ಪ್ರೌಢಶಾಲೆ ಪುತ್ತೂರಿನ ರಾಜ್ಯ ಪುರಸ್ಕಾರ ಸ್ಕೌಟ್ಸ್ ವಿದ್ಯಾರ್ಥಿಗಳು ಹಾಗೂ ಜೇಸಿಸ್ ಆಂಗ್ಲ ಮಾಧ್ಯಮ ಶಾಲೆ ವಿಟ್ಲದ ರಾಜ್ಯ ಪುರಸ್ಕಾರ ಸ್ಕೌಟ್‌ಗಳು ಸೇವಕರಾಗಿ ಸಹಕರಿಸಿದರು.

* ಮೇ 31 ರಂದು ಸ್ಥಳೀಯ ಸಂಸ್ಥೆಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಬಗ್ಗೆ ಸಮಾಲೋಚನೆ ಸಭೆಯನ್ನು ರಾಜ್ಯ ಮುಖ್ಯ ಆಯುಕ್ತರಾದ ಶ್ರೀ ಪಿ.ಜಿ.ಆರ್. ಸಿಂಧ್ಯಾ ರವರ ಸಮ್ಮುಖದಲ್ಲಿ ನಡೆಸಲಾಯಿತು. ಇದೇ ಸಂದರ್ಭದಲ್ಲಿ ಜಿಲ್ಲಾ ಮುಖ್ಯ ಆಯುಕ್ತರಾದ ಡಾ. ಎಮ್. ಮೋಹನ್ ಆಳ್ವರವರಿಗೆ ಹುಟ್ಟು ಹಬ್ಬದ ಶುಭಾಶಯ ಕೋರಲಾಯಿತು.



* ಜೂನ್ 05 ರಂದು ದಕ್ಷಿಣ ಕನ್ನಡ ಜಿಲ್ಲಾ ಸಂಸ್ಥೆಯ ವತಿಯಿಂದ ಜಿಲ್ಲಾ ಸ್ಕೌಟ್ಸ್ ಗೈಡ್ಸ್ ಭವನ ಲಾಲ್ ಬಾಗ್ ಮಂಗಳೂರಿನಲ್ಲಿ ಗಿಡ ನೆಡುವುದುದರ ಮೂಲಕ ವಿಶ್ವ ಪರಿಸರ ದಿನಾಚರಣೆ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಜಿಲ್ಲಾ ಸಂಸ್ಥೆಯ ಉಪಾಧ್ಯಕ್ಷರಾದ ಜಿಲ್ಲಾ ಕಾರ್ಯದರ್ಶಿ ಶ್ರೀ ಪ್ರತೀಮ್ ಕುಮಾರ್, ಮಂಗಳೂರು ಉತ್ತರ ನಗರ ಸ್ಥಳೀಯ ಸಂಸ್ಥೆಯ ಕಾರ್ಯದರ್ಶಿ ಶ್ರೀಮತಿ ಮೋಹಿನಿ ರಾಮಚಂದ್ರ ಮುಂತಾದವರು ಉಪಸ್ಥಿತರಿದ್ದರು.

* ಜೂನ್ 05 ರಂದು ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಸುಳ್ಯ ತಾಲೂಕಿನ ಕಲ್ಮಡ್ಕ ಅಂಗನವಾಡಿ ಕೇಂದ್ರದಲ್ಲಿ ಬನ್ನಿ ಘಟಕದ ವತಿಯಿಂದ ವಿಶ್ವ ಪರಿಸರ ದಿನಾಚರಣೆ ಆಚರಿಸಲಾಯಿತು.



* ಮಂಗಳೂರಿನ ಸ್ವಸ್ತಿಕ ನ್ಯಾಷನಲ್ ಬ್ಯುಸಿನಸ್ ಸ್ಕೂಲ್‌ನ ರೋವರ್ಸ್ ಮತ್ತು ರೇಂಜರ್ಸ್ ತಂಡವು ಹಸಿರು ಸ್ನೇಹವನ್ನು ಬೆಳೆಸುವ ಉದ್ದೇಶದಿಂದ 'ಪರಿಸರ ಮೈತ್ರಿ'ಯ ಉದ್ಘಾಟನೆಯನ್ನು ಜೂನ್ 5 ರಂದು ಬೆಳಿಗ್ಗೆ 9:30ಕ್ಕೆ ಸುಲ್ತಾನ್ ಬತ್ತೇರಿಯಲ್ಲಿರುವ ಸ್ವಸ್ತಿಕವಾಟರ್ ಫ್ರಂಟ್‌ನಲ್ಲಿ ನಡೆಸಲಾಯಿತು. ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಯಾಗಿ ಮತ್ತು ಉದ್ಘಾಟಕರಾಗಿ ದಕ್ಷಿಣ ಕನ್ನಡದ ಮಾನ್ಯ ಸಂಸದರಾದ ಕ್ಯಾಪ್ಟನ್ ಬ್ರಿಜೇಶ್ ಚೌಟಾರವರು ಆಗಮಿಸಿದರು. ಕಾರ್ಯಕ್ರಮದಲ್ಲಿ ಶ್ರೀ ನಂದನ್ ಮಲ್ಯ, ಕಾರ್ಪೊರೇಟರ್ ಶ್ರೀ ಗಣೇಶ್, ಶ್ರೀ ಅಲಂಕಾರ್ ಬಾಬು, ಅಧ್ಯಕ್ಷ ಡಾ. ರಾಘವೇಂದ್ರ ಹೊಳ್ಳ, ಪ್ರಾಂಶುಪಾಲೆ ಡಾ. ಮಾಲಿನಿ ಎನ್. ಹೆಬ್ಬಾರ್ ಉಪಸ್ಥಿತರಿದ್ದರು.

* ಜೂನ್ 05 ರಂದು ಸಿ.ಎಸ್.ಐ ಆಂಗ್ಲ ಮಾಧ್ಯಮ ಶಾಲೆ, ಕಾರ್ನಾಡು ಮುಲ್ಕಿಯಲ್ಲಿ ವಿಶ್ವ ಪರಿಸರ ದಿನಾಚರಣೆಯನ್ನು ಆಚರಿಸಲಾಯಿತು.

* ಜೂನ್ 05 ರಂದು ಎಸ್.ಡಿ.ಎಮ್ ಪದವಿಪೂರ್ವ ಕಾಲೇಜು ಉಜಿರೆ ಇಲ್ಲಿ ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ "ಗಿಡಯಾನಾ" ಎಂಬ ಕಾರ್ಯಕ್ರಮ ಆಚರಿಸಲಾಯಿತು.

* ಆಳ್ವಾಸ್ ಶಾಲೆಯ ಸ್ಕೌಟ್ಸ್–ಗೈಡ್ಸ್‌ಗಳು ವಿಶ್ವ ಪರಿಸರ ದಿನವನ್ನು ವಿಶೇಷವಾಗಿ ಶುಭಾಶಯ ಪತ್ರಗಳನ್ನು ಮತ್ತು ಗಿಡಗಳನ್ನು ಜನರಿಗೆ ಹಂಚುವ ಮೂಲಕ ಜನರಿಗೆ ಪರಿಸರದ ಕುರಿತು ಜಾಗೃತಿ ಮೂಡಿಸುವ ಪ್ರಯತ್ನ ಮಾಡಿದರು.



* ಜೂನ್ 05 ರಂದು ಪಡೀಲು ವಲಯ ವೀರನಗರ ಅಂಗನವಾಡಿ ಕೇಂದ್ರದಲ್ಲಿ ಪರಿಸರ ದಿನಾಚರಣೆಯನ್ನು ಆಚರಿಸಲಾಯಿತು.



* ಜೂನ್ 05 ರಂದು ಸರಕಾರಿ ಪದವಿಪೂರ್ವ ಕಾಲೇಜು, ಬೆಳ್ತಂಗಡಿ ಯ ರೇಂಜರ್ಸ್‌ಗಳು "ಮಳೆ ಸುರಿಯಲಿ" ಎಂಬ ಪರಿಸರ ಗೀತೆಯನ್ನು ಹಾಡುವ ಮೂಲಕ ಹಲವಾರು ಗಿಡಗಳನ್ನು ನೆಟ್ಟು ಪರಿಸರ ದಿನಾಚರಣೆಯನ್ನು ಆಚರಿಸಿದರು.

ದಾವಣಗೆರೆ

* ಮೇ 24 ರಂದು ಎ.ವಿ.ಕೆ. ಪ್ರಥಮ ದರ್ಜೆ ಕಾಲೇಜು ಮತ್ತು ಪದವಿ ಪೂರ್ವಕಾಲೇಜಿನಲ್ಲಿ ದೀಕ್ಷಾ ಸಮಾರಂಭವನ್ನು ಆಯೋಜಿಸಲಾಗಿತ್ತು. ಶ್ರೀಮತಿ ಶಾರದ ಮಾಗನಹಳ್ಳಿ ಜಿಲ್ಲಾ ಗೈಡ್ ಆಯುಕ್ತರು, ಶ್ರೀಮತಿ ಕಮಲ ಸೊಪ್ಪಿನ್ ಪ್ರಾಂಶುಪಾಲರು, ಡಾ॥ ಸಿದ್ದಲಿಂಗಮ್ಮ, ಶ್ರೀಮತಿ ಉಷಾ ರೇಂಜರ್–ಲೀಡರ್ಸ್‌ಗಳು, ಶ್ರೀಮತಿ ಅಶ್ವಿನಿ ಜೆ., ಎಸ್.ಜಿ.ವಿ. ಉಪಸ್ಥಿತರಿದ್ದರು. ಈ ಸಂದರ್ಭದಲ್ಲಿ ಹೆಣ್ಣು ಮಕ್ಕಳು ಋತುಚಕ್ರದ ಜಾಗೃತಿ ವಾರದ ಅಂಗವಾಗಿ ರೇಂಜರ್ಸ್‌ಗಳಿಗೆ ಮಾಹಿತಿಯನ್ನು ನೀಡಲಾಯಿತು.

* ಜೂನ್ 04 ರಂದು ಧ.ರಾ.ಮ ಸ್ಕೌಟ್ ಭವನದಲ್ಲಿ ಮಹಾರಾಜ ನಾಲ್ವಡಿ ಕೃಷ್ಣರಾಜ ಒಡೆಯರ್‌ರವರ 140ನೇ ಜನ್ಮ ದಿನಾಚರಣೆಯನ್ನು ಜಿಲ್ಲಾ ಮುಖ್ಯ ಆಯುಕ್ತರಾದ ಶ್ರೀ ಮುರುಘರಾಜೇಂದ್ರ ಜೆ. ಚಿಗಟೇರಿಯವರ ಅಧ್ಯಕ್ಷತೆಯಲ್ಲಿ ಆಚರಿಸಲಾಯಿತು. ಈ ಸಂದರ್ಭದಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ಮಾಡಿರುವ ಸ್ಕೌಟ್–ಗೈಡ್ ಸೇವೆಗಳ ಬಗ್ಗೆ ಮಾಹಿತಿಯನ್ನು ನೀಡಲಾಯಿತು.



* ಜೂನ್ 05 ರಂದು ಸಿದ್ದಗಂಗಾ ಸ್ಥಳೀಯ ಸಂಸ್ಥೆ ವತಿಯಿಂದ ವಿಶ್ವ ಪರಿಸರ ದಿನಾಚರಣೆಯನ್ನು ಆಚರಿಸಲಾಯಿತು. ಶ್ರೀಮತಿ ರೇಖಾರಾಣಿ, ಜಿಲ್ಲಾ ಸಹಾಯಕ ಆಯುಕ್ತರು ಗೈಡ್‌ರವರು ಗಿಡಗಳಿಗೆ ನೀರು ಹಾಕುವುದರ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿದರು.

* ಜೂನ್ 05 ರಂದು ದಾವಣಗೆರೆ ಉತ್ತರ ಸ್ಥಳೀಯ ಸಂಸ್ಥೆ ವತಿಯಿಂದ ವಿಶ್ವಪರಿಸರ ದಿನಾಚರಣೆ ಅಂಗವಾಗಿ ಶ್ರೀ ಸಿದ್ದೇಶ್ವರ ಆಂಗ್ಲ ಮಾಧ್ಯಮ ಪ್ರೌಢ ಶಾಲೆಯಲ್ಲಿ ಪ್ರತಿ ವಿದ್ಯಾರ್ಥಿಗಳಿಗೆ ಸಸಿ ನೀಡುವುದರ ಮೂಲಕ ಹಸಿರು ಹಂಚುವ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಶ್ರೀ ಸುರೇಶ್ ಸ್ಥಳೀಯ ಸಂಸ್ಥೆ ಕಾರ್ಯದರ್ಶಿಗಳು ಕಾರ್ಯಕ್ರಮದ ನೇತೃತ್ವ ವಹಿಸಿದ್ದರು. ಶ್ರೀಮತಿ ಕವಿತಾ ಸ್ಥಳೀಯ ಸಂಸ್ಥೆ ಖಜಾಂಚಿಗಳು ಉಪಸ್ಥಿತರಿದ್ದರು.

* ಜೂನ್ 05 ರಂದು ದಾವಣಗೆರೆ ಜಿಲ್ಲಾ ಸಂಸ್ಥೆ ಮತ್ತು ಹಿಮಾಲಯನ್ ಅಡ್ವೆಂಚರ್ ಮತ್ತು ನೇಚರ್ ಅಕಾಡಮಿ ದಾವಣಗೆರೆ ಇವರ ಸಹಯೋಗದೊಂದಿಗೆ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ರೋವರ್ಸ್ ಮತ್ತು ರೇಂಜರ್ಸ್‌ಗಳಿಂದ ಸ್ವಚ್ಛತಾ ಕಾರ್ಯಕ್ರಮವನ್ನು ಜಿಲ್ಲಾ ಮುಖ್ಯ ಆಯುಕ್ತರ ಮಾರ್ಗದರ್ಶನದಲ್ಲಿ ಶ್ರೀ ಗಿರಿರಂಗನಾಥ ಸ್ವಾಮಿ ಬೆಟ್ಟ, ಚನ್ನಗಿರಿಯಲ್ಲಿ ಆಯೋಜಿಸಲಾಯಿತು. ವಿಶೇಷ ಅತಿಥಿಗಳಾಗಿ ಶ್ರೀ ಜಯಪ್ಪ, ಕ್ಷೇತ್ರ ಶಿಕ್ಷಣಾಧಿಕಾರಿಗಳು ಚನ್ನಗಿರಿ ಇವರು ರೋವರ್ಸ್–ರೇಂಜರ್ಸ್‌ಗಳು ಉತ್ತಮ ಸೇವೆಯನ್ನು ಮಾಡುತ್ತಿದ್ದಾರೆ ಎಂದು ಹೊಗಳಿದರು.



* ಜೂನ್ 05 ರಂದು ದಾವಣಗೆರೆ ಉತ್ತರ ವಲಯ ಸ್ಥಳೀಯ ಸಂಸ್ಥೆಯ ಸಿ.ವಿ.ವಿ. ಹಿರಿಯ ಪ್ರಾಥಮಿಕ ಶಾಲೆಯಲ್ಲಿ ವಿಶ್ವಪರಿಸರ ದಿನಾಚರಣೆಯನ್ನು ಆಚರಿಸಲಾಯಿತು. ಈ ಸಂದರ್ಭದಲ್ಲಿ ಶಾಲಾ ಮುಖ್ಯೋಪಾಧ್ಯಯರು. ಶ್ರೀ ಡಿ. ಹಾಲಪ್ಪ ಸ್ಕೌಟ್ ಮಾಸ್ಟರ್ ಹಾಗೂ ಜಿಲ್ಲಾ ತರಬೇತಿ ಆಯುಕ್ತರು (ಸ್ಕೌ) ಉಪಸ್ಥಿತರಿದ್ದರು.

* ಜೂನ್ 05 ರಂದು ದಾವಣಗೆರೆ ಉತ್ತರ ವಲಯ ಸ್ಥಳೀಯ ಸಂಸ್ಥೆಯ ಗ್ಲೋಬಲ್ ಪಬ್ಲಿಕ್ ಶಾಲೆಯ ಸ್ಕೌಟ್ಸ್ ಮತ್ತು ಗೈಡ್ಸ್ ಮಕ್ಕಳಿಂದ ವಿಶ್ವಪರಿಸರ ದಿನಾಚರಣೆ ಅಂಗವಾಗಿ ಶಂಕರ್ ವಿಹಾರ ಬಡಾವಣೆಯಲ್ಲಿ ಸಸಿ ನೆಡುವ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಸುಮಾರು 150 ಗಿಡಗಳನ್ನು ನೆಟ್ಟು 1300 ಬೀಜದುಂಡೆಗಳನ್ನು ತಯಾರಿಸಿದರು.

* ಜೂನ್ 08 ರಂದು ಕೊಂಡಜ್ಜಿ ಬಸಪ್ಪ ಸ್ಥಳೀಯ ಸಂಸ್ಥೆ ವತಿಯಿಂದ ಶ್ರೀ ತರಳಬಾಳು ಜಗದ್ಗುರು ವಸತಿಯುತ ಶಾಲೆಯಲ್ಲಿ ವಿಶ್ವಪರಿಸರ ದಿನಾಚರಣೆ ಆಚರಿಸಲಾಯಿತು. ಈ ಸಂದರ್ಭದಲ್ಲಿ ಸ್ಕೌಟ್ಸ್ ಮತ್ತು ಗೈಡ್ಸ್ ಮಕ್ಕಳಿಂದ ಚಿತ್ರಕಲಾ ಸ್ಪರ್ಧೆಯನ್ನು ಆಯೋಜಿಸಲಾಗಿತ್ತು. ಶಾಲಾ ಮುಖ್ಯಸ್ಥರಾದ ಶ್ರೀ ಸೋಮಶೇಖರ್, ಸ್ಥಳೀಯ ಸಂಸ್ಥೆ ಕಾರ್ಯದರ್ಶಿಗಳಾದ ಶ್ರೀ ರವೀಂದ್ರಸ್ವಾಮಿ ಟಿ.ಎಂ. ಉಪಸ್ಥಿತರಿದ್ದರು.

* ಜೂನ್ 13 ರಂದು ಹರಿಹರ ಸ್ಥಳೀಯ ಸಂಸ್ಥೆ ಮತ್ತು ಆಯುಷ್ ಇಲಾಖೆಯ ಸಹಯೋಗದೊಂದಿಗೆ ಯೋಗ ತರಬೇತಿ ಮತ್ತು ಆಯುಷ್ ಪರಿಚಯ ಕಾರ್ಯಕ್ರಮವನ್ನು ಸೆಂಟ್ ಮೇರಿಸ್ ಶಾಲೆಯ ಆವರಣದಲ್ಲಿ ಆಯೋಜಿಸಲಾಗಿತ್ತು. ಈ ಕಾರ್ಯಕ್ರಮದಲ್ಲಿ ಡಾ. ಯೋಗೇಂದ್ರಕುಮಾರ್ ಬಿ.ಯು. ಜಿಲ್ಲಾ ಆಯುಷ್ ಅಧಿಕಾರಿಗಳು ಪ್ರಾಸ್ತಾವಿಕವಾಗಿ ಮಾತನಾಡಿದರು. ಶ್ರೀ ಆನಂದ್ ಯೋಗ ತರಬೇತಿದಾರರು ವಿದ್ಯಾರ್ಥಿಗಳಿಗೆ ಪ್ರಾತ್ಯಕ್ಷಿಕವಾಗಿ ಯೋಗವನ್ನು ಮಾಡಿಸಿ ಅದರ ಲಾಭಗಳನ್ನು ತಿಳಿಸಿದರು. ಈ ಸಂದರ್ಭದಲ್ಲಿ ಶಾಲಾ ಮುಖ್ಯಸ್ಥರು, ಶ್ರೀ ಎನ್.ಕೆ. ಕೊಟ್ರೇಶ್, ಜಿಲ್ಲಾ ಸಹಾಯಕ ಆಯುಕ್ತರು, ಉಪಸ್ಥಿತರಿದ್ದರು.

* ಜೂನ್ 13 ರಂದು ರಾಜ್ಯ ಸಂಸ್ಥೆಯ ಉಪಾಧ್ಯಕ್ಷರಾದ ಶ್ರೀ ಎಂ.ಎನ್. ಮಹೇಶ್‌ರವರು ದಾವಣಗೆರೆ ಜಿಲ್ಲಾ ಸಂಸ್ಥೆಗೆ ಭೇಟಿ ನೀಡಿದ್ದರು. ಕರ್ನಾಟಕರಾಜ್ಯ ಪರಿಸರ ಮಾಲಿನ್ಯ ಮೌಲ್ಯಮಾಪನ ಸಮಿತಿ ಸದಸ್ಯರಾಗಿ ನೇಮಕಗೊಂಡಿರುವುದಕ್ಕಾಗಿ ಶ್ರೀ ಮುರುಘರಾಜೇಂದ್ರ ಜೆ. ಚಿಗಟೇರಿ, ಜಿಲ್ಲಾ ಮುಖ್ಯ ಆಯುಕ್ತರು ಅಭಿನಂದಿಸಿದರು. ಈ ಸಂದರ್ಭದಲ್ಲಿ ಶ್ರೀ ಎ.ಪಿ. ಷಡಾಕ್ಷರಪ್ಪ, ಜಿಲ್ಲಾ ಸ್ಕೌಟ್ ಆಯುಕ್ತರು, ಶ್ರೀ ಶಂಕರ್ ನಾಯ್ಕ್, ಶ್ರೀ ಎನ್.ಕೆ. ಕೊಟ್ರೇಶ್, ಜಿಲ್ಲಾ ಸಹಾಯಕ ಆಯುಕ್ತರುಗಳು, ಶ್ರೀಮತಿ ರತ್ನ ಎಂ., ಜಿಲ್ಲಾ ಕಾರ್ಯದರ್ಶಿಗಳು, ಶ್ರೀಮತಿ ಸುಖವಾಣಿ, ಜಿಲ್ಲಾ ಸಹ ಕಾರ್ಯದರ್ಶಿಗಳು, ಶ್ರೀಮತಿ ಅಶ್ವಿನಿ ಜೆ., ಎಸ್.ಜಿ.ವಿ. ಉಪಸ್ಥಿತರಿದ್ದರು.



* ಜೂನ್ 15 ರಂದು ವಿಶ್ವಯೋಗ ದಿನಾಚರಣೆ ಅಂಗವಾಗಿ ಜಿಲ್ಲಾ ಸಂಸ್ಥೆ ವತಿಯಿಂದ ಜಿಲ್ಲಾ ಮಟ್ಟದ ಯೋಗತರಬೇತಿ ಮತ್ತು ಆಯುಷ್ ಪರಿಚಯ ಕಾರ್ಯಕ್ರಮವನ್ನು ಶಿವಯೋಗಿ ಮಂದಿರದಲ್ಲಿ ಆಯೋಜಿಸಲಾಗಿತ್ತು. ದಿವ್ಯ ಸಾನ್ನಿಧ್ಯವನ್ನು ವಹಿಸಿದ್ದು. ಶ್ರೀ ಬಸವ ಪ್ರಭು ಸ್ವಾಮೀಜಿ ಉಸ್ತುವಾರಿ ಶ್ರೀಗಳು ಮುರುಘಾಮಠ ಚಿತ್ರದುರ್ಗ ಇವರ ವಿದ್ಯಾರ್ಥಿಗಳಿಗೆ ಯೋಗದ ಮಹತ್ವವನ್ನು ತಿಳಿಸಿದರು. ಮುಖ್ಯ ಅತಿಥಿಗಳಾಗಿ ಶ್ರೀ ಮುರುಘ ರಾಜೇಂದ್ರ ಜೆ. ಚಿಗಟೇರಿ, ಜಿಲ್ಲಾ ಮುಖ್ಯ ಆಯುಕ್ತರು ಇವರು ದಿನನಿತ್ಯಯೋಗ ಮಾಡುವುದು ಆರೋಗ್ಯಕ್ಕೆ ಯಾವ ರೀತಿ ಉತ್ತಮ ಎಂಬುದರ ಬಗ್ಗೆ ಮಾಹಿತಿ ನೀಡಿದರು. ಆಯುಷ್ ಇಲಾಖೆಯ ಅಧಿಕಾರಿಗಳು, ಡಾಕ್ಟರ್‌ಗಳು, ಶ್ರೀ ಎ.ಪಿ. ಷಡಾಕ್ಷರಪ್ಪ, ಜಿಲ್ಲಾ ಸ್ಕೌಟ್ ಆಯುಕ್ತರು ಶ್ರೀಮತಿ ಶಾರದಾ ಮಾಗನಹಳ್ಳಿ ಜಿಲ್ಲಾ ಗೈಡ್ ಆಯುಕ್ತರು, ಅವರು ಉಪಸ್ಥಿತರಿದ್ದರು. ಈ ಕಾರ್ಯಕ್ರಮದಲ್ಲಿ ಜಿಲ್ಲೆಯ 520 ಸ್ಕೌಟ್ಸ್ ಮತ್ತು ಗೈಡ್ಸ್ ಮಕ್ಕಳು ಸ್ಕೌಟರ್ಸ್–ಗೈಡರ್ಸ್‌ಗಳೊಂದಿಗೆ ಭಾಗವಹಿಸಿದ್ದರು.



ಧಾರವಾಡ

* ಜೂನ್ 01 ರಂದು ಜಿಲ್ಲಾ ಸಂಸ್ಥೆಯ ಆವರಣದಲ್ಲಿ ಶಾಲಾ ಶಿಕ್ಷಣ ಇಲಾಖೆಯ ಎಲ್ಲ ಅಧಿಕಾರಿಗಳಿಗೆ ಸ್ಕೌಟಿಂಗ್ ಗೈಡಿಂಗ್ ಕುರಿತು ಮಾಹಿತಿ ಕಾರ್ಯಾಗಾರ ಹಮ್ಮಿಕೊಳ್ಳಲಾಯಿತು. ಸದರಿ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ಆಯುಕ್ತರು (ಸ್ಕೌ) ಆದ ಶ್ರೀ ವ್ಹಿ.ವ್ಹಿ. ಕಟ್ಟಿ ಇವರು ವಹಿಸಿಕೊಂಡಿದ್ದರು. ಸದರಿ ಕಾರ್ಯಕ್ರಮದಲ್ಲಿ ಶ್ರೀ ಎಸ್.ಎಸ್ ಕೆಳದಿಮಠ ಡಿ.ಡಿ.ಪಿ.ಐ. (ಆಡಳಿತ) ಮತ್ತು ಶ್ರೀಮತಿ ಜಯಶ್ರೀ ಕಾರೆಕರ ಡಿ.ಡಿ.ಪಿ.ಐ. (ಅಭಿವೃದ್ಧಿ) ಇವರ ನೇತೃತ್ವದಲ್ಲಿ ವಿಷಯ ಪರಿವೀಕ್ಷಕರು, ಡಯಟ್‌ನ ಉಪನ್ಯಾಸಕರು, ಎಲ್ಲ ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಕ್ಷೇತ್ರ ಸಮನ್ವಯಾಧಿಕಾರಿಗಳು, ಜಿಲ್ಲಾ ಮತ್ತು ತಾಲೂಕ ದೈಹಿಕ ಶಿಕ್ಷಣ ಪರಿವೀಕ್ಷಕರು, ಬಿ.ಆರ್.ಪಿ., ಸಿ.ಆರ್.ಪಿ. ಹಾಗೂ ಜಿಲ್ಲಾ ಮತ್ತು ತಾಲೂಕ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷರು ಮತ್ತು ಪದಾಧಿಕಾರಿಗಳು ಬಾಗವಹಿಸಿದರು. ಸದರಿ ಕಾರ್ಯಕ್ರಮದಲ್ಲಿ ಜಿಲ್ಲಾ ಸಂಸ್ಥೆಯ ಪದಾಧಿಕಾರಿಗಳು ಸಹ ಭಾಗವಹಿಸಿದ್ದರು. ಜಿಲ್ಲಾ ಮುಖ್ಯ ಆಯುಕ್ತರು ಎಲ್ಲರನ್ನು ಸ್ವಾಗತ ಕೋರಿ ಸ್ಕೌಟಿಂಗ್ ಗೈಡಿಂಗ್ ಮಾಹಿತಿ ನೀಡಿ ಇಲಾಖೆಯ ಎಲ್ಲ ಅಧಿಕಾರಿಗಳು ಸಹಕಾರ ನೀಡಲು ಕೋರಿದರು. ಶ್ರೀ ಎಸ್.ಎಸ್. ಕೆಳದಿಮಠ ಡಿ.ಡಿ.ಪಿ.ಐ. (ಆಡಳಿತ) ಇಲಾಖೆಯಿಂದ ಎಲ್ಲ ಸಹಕಾರ ನೀಡುವುದಾಗಿ ತಿಳಿಸಿದರು. ಜಿಲ್ಲಾ ಸ್ಥಾನಿಕ ಆಯುಕ್ತರು ವಂದನಾರ್ಪಣೆ ಸಲ್ಲಿಸಿದರು.



* ಜೂನ್ 05 ರಂದು ಜಿಲ್ಲಾ ಸಂಸ್ಥೆಯ ಆವರಣದಲ್ಲಿ ವಿಶ್ವ ಪರಿಸರ ದಿನಾಚರಣೆಯನ್ನು ಹಮ್ಮಿಕೊಳ್ಳಲಾಯಿತು. ಸದರಿ ಕಾರ್ಯಕ್ರದಲ್ಲಿ ಶಾಲಾ ಶಿಕ್ಷಣ ಇಲಾಖೆಯ ಅಧಿಕಾರಿಗಳು, ಶ್ರೀ ವಿವೇಕ ಕವರಿ ಉಪ ಅರಣ್ಯ ಸಂರಕ್ಷಣಾಧಿಕಾರಿಗಳು, ಶ್ರೀ ಪರಶುರಾಮ ಎಫ್. ದೊಡ್ಡಮನಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿಗಳು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಧಾರವಾಡ, ಜಗದೀಶ ಐ.ಎಚ್. ಜಿಲ್ಲಾ ಪರಿಸರ ಅಧಿಕಾರಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಧಾರವಾಡ ಮತ್ತು ಜಿಲ್ಲಾ ಸಂಸ್ಥೆಯ ಪದಾಧಿಕಾರಿಗಳು ಹಾಗೂ ವಿವಿಧ ಶಾಲೆ ಮತ್ತು ಕಾಲೇಜುಗಳ ಕಬ್ಸ್ ಬುಲ್‌ಬುಲ್ಸ್, ಸ್ಕೌಟ್ಸ್ ಗೈಡ್ಸ್, ರೋವರ್ಸ್ ರೇಂಜರ್ಸ್‌ಗಳು ಮತ್ತು ಸ್ಕೌಟರ್ಸ್ ಗೈಡರ್ಸ್‌ಗಳು ಭಾಗವಹಿಸಿ ಸಸಿ ನೆಡುವುದರ ಮೂಲಕ ವಿಶ್ವ ಪರಿಸರ ದಿನಾಚರಣೆಯನ್ನು ಆಚರಿಸಲಾಯಿತು. ಸದರಿ ಕಾರ್ಯಕ್ರಮ ಮುಗಿದ ನಂತರ ಜಾಥಾ, ವಾಕಾಥಾನ್, ಪ್ರಬಂಧ ಸ್ಪರ್ಧೆವನ್ನು ಮಾಡಿ ನಂತರ ವಿಜೇತ ಮಕ್ಕಳಿಗೆ ಬಹುಮಾನ ನೀಡಲಾಯಿತು.



* ಜೂನ್ 15 ರಂದು ಜಿಲ್ಲಾ ಸಂಸ್ಥೆಯ ಆವರಣದಲ್ಲಿ 10ನೇ ವಿಶ್ವ ಯೋಗೋತ್ಸವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು. ಸದರಿ ಕಾರ್ಯಕ್ರಮದಲ್ಲಿ ಆಯುಷ್ ಇಲಾಖೆಯ ಅಧಿಕಾರಿಗಳು, ಶಾಲಾ ಶಿಕ್ಷಣ ಇಲಾಖೆಯ ಅಧಿಕಾರಿಗಳು, ಜಿಲ್ಲಾ ಸಂಸ್ಥೆಯ ಪದಾಧಿಕಾರಿಗಳು ವಿವಿಧ ಶಾಲೆ ಮತ್ತು ಕಾಲೇಜುಗಳ ಕಬ್ಸ್ ಬುಲ್‌ಬುಲ್ಸ್, ಸ್ಕೌಟ್ಸ್ ಗೈಡ್ಸ್, ರೋವರ್ಸ್ ರೇಂಜರ್ಸ್‌ಗಳು ಮತ್ತು ಸ್ಕೌಟರ್ಸ್ ಗೈಡರ್ಸ್‌ಗಳು ಭಾಗವಹಿಸಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಕಾರ್ಯದರ್ಶಿಗಳು ಸ್ವಾಗತ ಕೋರಿದರು. ತರಬೇತಿದಾರರಿಂದ ಯೋಗದ ಮಾಹಿತಿ ಮತ್ತು ಆಸನಗಳನ್ನು ಮಾಡಿಸಲಾಯಿತು. ಸುಮಾರು 875ಕ್ಕೂ ಹೆಚ್ಚು ಮಕ್ಕಳು ಭಾಗವಹಿಸಿದ್ದರು.



ಹಾಸನ

* ಹಾಸನ ಜಿಲ್ಲಾ ಸಂಸ್ಥೆ ಹಾಗೂ ಸಕಲೇಶಪುರ ತಾಲೂಕು ಸ್ಥಳೀಯ ಸಂಸ್ಥೆಯ ವತಿಯಿಂದ ಜಿಲ್ಲಾ ಮಟ್ಟದ ತಾಲ್ಲೂಕು ಕಾರ್ಯದರ್ಶಿಗಳ ಸಭೆ ಹಾಗೂ ಹಿಮಾಲಯ ವೃಕ್ಷಮಣಿಧಾರಕರ ಸಮಾವೇಶವನ್ನು ಸಕಲೇಶಪುರ ತಾಲೂಕು ಸಂಸ್ಥೆಯಲ್ಲಿ ಮಾಡಲಾಯಿತು. ಸಭೆ ಮತ್ತು ಸಮಾವೇಶದಲ್ಲಿ ಜಿಲ್ಲಾ ಸಂಸ್ಥೆ ಚಟುವಟಿಕೆಯ ಬಗ್ಗೆ, ತಾಲೂಕು ಸಂಸ್ಥೆಯ ಕಾರ್ಯ ಚಟುವಟಿಕೆಯ ಬಗ್ಗೆ. ಉನ್ನತ ತರಬೇತಿಯ ಬಗ್ಗೆ ಮೂಲ ತರಬೇತಿ ಶಿಬಿರವನ್ನು ಆಯೋಜನೆ ಮಾಡುವ ಬಗ್ಗೆ ರಾಜ್ಯ ಪುರಸ್ಕಾರ್ ಪೂರ್ವ ಸಿದ್ಧತೆಯ ಬಗ್ಗೆ ಇನ್ನೂ ಅನೇಕ ವಿಷಯಗಳ ಬಗ್ಗೆ ಚರ್ಚೆ ನಡೆಸಲಾಯಿತು. ನಂತರ ಅಗಸಿ ಬೆಟ್ಟ ಮತ್ತು ಮೂರ್ಕಿಣ್ಣಿ ಬೆಟ್ಟದ ಮೇಲೆ ಚಾರಣವನ್ನು ಮಾಡಲಾಯಿತು. ಸಭೆ ಮತ್ತು ಸಮಾವೇಶದ ಅಧ್ಯಕ್ಷತೆಯನ್ನು ಜಿಲ್ಲಾ ಮುಖ್ಯ ಆಯುಕ್ತರಾದ ಡಾ. ವೈ.ಎಸ್. ವೀರಭದ್ರಪ್ಪ ಅವರು ವಹಿಸಿಕೊಂಡಿದ್ದರು, ಜಿಲ್ಲಾ ಕಾರ್ಯದರ್ಶಿ ಶ್ರೀ ಸುರೇಶ್ ಗುರೂಜಿ ಕಾರ್ಯಚಟುವಟಿಕೆಯ ಮಾಹಿತಿಯನ್ನು ನೀಡಿದರು. ಜಿಲ್ಲಾ ತರಬೇತಿ ಆಯುಕ್ತರಾದ ಶ್ರೀ ಎಂ.ಎಸ್. ಪ್ರಕಾಶ್, ಉನ್ನತ ತರಬೇತಿಯ ಬಗ್ಗೆ ಮಾಹಿತಿಯನ್ನು ನೀಡಿದರು ಜಿಲ್ಲಾ ತರಬೇತಿ ಆಯುಕ್ತರು (ಗೈಡ್) ಶ್ರೀಮತಿ ಕಾತ್ಯಾಯಿನಿರವರು ಕಾರ್ಯಕ್ರಮವನ್ನು ನಡೆಸಿಕೊಟ್ಟರು.



* ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಎಸ್.ವಿ.ಎಂ. ಶಾಲೆಯಲ್ಲಿ ಭೂಮಿ ವಿಷಯವಾಗಿ ಶಿಬಿರಾಗ್ನಿ ಕಾರ್ಯಕ್ರಮ ಪರಿಸರ ಸಂರಕ್ಷಣೆಯ ಬಗ್ಗೆ ಪ್ರಬಂಧ ಸ್ಪರ್ಧೆ, ಜಾಥ ಕಾರ್ಯಕ್ರಮವನ್ನು ಮಾಡಲಾಯಿತು. ಕಾರ್ಯಕ್ರಮದಲ್ಲಿ ಶಾಲಾ ಮುಖ್ಯಸ್ಥರು ಶ್ರೀ ಸೂರ್ಯಕಾಂತ, ಗೈಡ್ ಶಿಕ್ಷಕಿ ಆಶಿಯ ತರನಂ, ತಿಮ್ಮರಾಜು ಸ್ಕೌಟ್ ಮಾಸ್ಟರ್ ಉಪಸ್ಥಿತರಿದ್ದರು.

* ಎಸ್.ಜಿ.ಆರ್. ಪಬ್ಲಿಕ್ ಶಾಲೆಯ ಸ್ಕೌಟ್ಸ್ ಗೈಡ್ಸ್ ಕಬ್ಸ್ ಬುಲ್ ಬುಲ್ಸ್ ವಿದ್ಯಾರ್ಥಿಗಳು ಪರಿಸರ ದಿನಾಚರಣೆಯ ಪ್ರಯುಕ್ತ ನಗರದ ಪ್ರಮುಖ ಬೀದಿಗಳಲ್ಲಿ ಜಾಥ ಕಾರ್ಯಕ್ರಮವನ್ನು ಮಾಡುವುದರ ಮೂಲಕ ಪರಿಸರ ಸಂರಕ್ಷಣೆಯ ಜಾಗೃತಿಯನ್ನು ಮೂಡಿಸಿದರು.



* ಹಾಸನ ಜಿಲ್ಲಾ ಸಂಸ್ಥೆ ಹಾಗೂ ಕಲಾ ಮತ್ತು ವಾಣಿಜ್ಯ ಕಾಲೇಜು ಇವರ ಸಂಯೋಗದಲ್ಲಿ ಜಿಲ್ಲಾ ಮಟ್ಟದ ಪರಿಸರ ದಿನಾಚರಣೆಯ ಪ್ರಯುಕ್ತ ನಗರದ ಪ್ರಮುಖ ಬೀದಿಗಳಲ್ಲಿ ಜಾಥಾ ಕಾರ್ಯಕ್ರಮವನ್ನು ಮಾಡಲಾಯಿತು. ಈ ಸಂದರ್ಭದಲ್ಲಿ, ಜಿಲ್ಲಾ ಕಾರ್ಯದರ್ಶಿ ಶ್ರೀ ಸುರೇಶ್ ಗುರೂಜಿ, ರೋವರ್ ಸ್ಕೌಟ್ ಲೀಡರ್ ಡಾಕ್ಟರ್ ಸಿ. ಸುರೇಶ, ಹಿರಿಯ ಗೈಡ್ ಶಿಕ್ಷಕಿ ಶ್ರೀಮತಿ ಕಾಂಚನಮಾಲ ಉಪಸ್ಥಿತರಿದ್ದು.

* ಹಾಸನ ಜಿಲ್ಲಾ ಸಂಸ್ಥೆ ಹಾಗೂ ಜಿಲ್ಲಾಡಳಿತದ ವತಿಯಿಂದ ಆಯೋಜನೆ ಮಾಡಿದ ಪರಿಸರ ಜಾಥಾ ಕಾರ್ಯಕ್ರಮದಲ್ಲಿ ಸೆಂಟ್ ಫಿಲೋಮಿನ ಪದವಿ ಕಾಲೇಜು, ಬಸವರಾಜೇಂದ್ರ ಶಾಲೆ ಸ್ಕೌಟ್ ವಿದ್ಯಾರ್ಥಿಗಳು, ಆದಿಚುಂಚನಗಿರಿ ಶಾಲೆಯ ಸ್ಕೌಟ್ ವಿದ್ಯಾರ್ಥಿಗಳು ಹಾಗೂ ಜಿಲ್ಲಾ ಸಂಸ್ಥೆಯ ವತಿಯಿಂದ ಜಿಲ್ಲಾ ಕಾರ್ಯದರ್ಶಿ ಶ್ರೀ ಸುರೇಶ್ ಗುರೂಜಿ, ರೋವರ್ ಸ್ಕೌಟ್ ಲೀಡರ್ ಶ್ರೀ ಆರ್.ಜಿ. ಗಿರೀಶ್, ಹಿರಿಯ ಗೈಡ್ ಶಿಕ್ಷಕಿ ಶ್ರೀಮತಿ ಕಾಂಚನಮಾಲ ಭಾಗವಹಿಸಿದ್ದರು.

* ಹಾಸನ ತಾಲ್ಲೂಕು ಸ್ಥಳೀಯ ಸಂಸ್ಥೆ ಹಾಗೂ ಶ್ರೀ ಆದಿಚುಂಚನಗಿರಿ ಆಂಗ್ಲ ಮಾಧ್ಯಮ ಶಾಲೆ ಹಾಸನದಲ್ಲಿ ಪರಿಸರ ದಿನಚರಣೆಯ ಕಾರ್ಯಕ್ರಮವನ್ನು ಸ್ಕೌಟ್ ಗೈಡ್‌ಗಳು ಗಿಡಗಳನ್ನು ನೆಡುವುದರ ಮೂಲಕ ಆಚರಣೆ ಮಾಡಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಕಾರ್ಯದರ್ಶಿ ಶ್ರೀ ಸುರೇಶ್ ಗುರೂಜಿ, ತಾಲೂಕು ಕಾರ್ಯದರ್ಶಿ ಶ್ರೀಮತಿ ಬಿ.ಎಸ್. ವನಜಾಕ್ಷಿ, ಶಾಲಾ ಮುಖ್ಯೋಪಾಧ್ಯಾಯರು ಶ್ರೀ ದರ್ಶನ್, ಬಿಜಿಎಸ್, ಪಿಯುಸಿ ಕಾಲೇಜಿನ ಮುಖ್ಯಸ್ಥರಾದ ಶ್ರೀ ಮಂಜುನಾಥ್ ಉಪಸ್ಥಿತರಿದ್ದರು.

* ರೋಟರಿ ಶಾಲೆ ಸಕಲೇಶಪುರ, ಪ್ರಾದೇಶಿಕ ಅರಣ್ಯ ವಲಯ ಸಕಲೇಶಪುರ, ತಾಲೂಕು ಕಾನೂನು ಸೇವಾ ಸಮಿತಿ ಸಕಲೇಶಪುರ ಇವರ ಸಂಯುಕ್ತ ಆಶ್ರಯದಲ್ಲಿ ನ್ಯಾಯಾಲಯದ ಆವರಣದಲ್ಲಿ ಸಸಿಗಳನ್ನು ನೆಡುವುದರ ಮೂಲಕ ಪರಿಸರ ದಿನಾಚರಣೆಯನ್ನು ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಅರಣ್ಯ ವಲಯ ಅಧಿಕಾರಿಗಳು, ಮುಖ್ಯ ನ್ಯಾಯಾಧೀಶರು, ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ರೋಟರಿ ಶಾಲೆಯ ಪ್ರಾಂಶುಪಾಲರು ಸ್ಕೌಟ್ಸ್ ಗೈಡ್ಸ್‌ಗಳೊಂದಿಗೆ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು. ನಂತರ ರೋಟರಿ ಶಾಲೆ ಆವರಣದಲ್ಲಿ ಮಕ್ಕಳು ಸಸಿ ನಡುವುದರ ಮೂಲಕ ಪರಿಸರ ದಿನಾಚರಣೆಯನ್ನು ಆಚರಿಸಿದರು.

* ಆಲೂರು ತಾಲ್ಲೂಕಿನ ಬೇತಸ್ಥಾ ಶಾಲೆಯ ಸ್ಕೌಟ್ಸ್ ಮತ್ತು ಗೈಡ್ಸ್‌ಗಳು ಪರಿಸರ ದಿನಾಚರಣೆಯನ್ನು ಶೆಟ್ಟಿಹಳ್ಳಿ ಚರ್ಚ್‌ನಲ್ಲಿ ಸ್ವಚ್ಛತಾ ಕಾರ್ಯ ಹಾಗೂ ಗಿಡಗಳನ್ನು ನೆಡುವುದರ ಮೂಲಕ ಆಚರಣೆ ಮಾಡಿದರು. ಕಾರ್ಯಕ್ರಮದಲ್ಲಿ ತಾಲ್ಲೂಕು ಕಾರ್ಯದರ್ಶಿ ಶ್ರೀ ಕೊಟ್ರೇಶ್ ಎಸ್. ಉಪ್ಪಾರ್ ತಾಲ್ಲೂಕು ಕೇಂದ್ರ ಸ್ಥಾನಿಕ ಆಯುಕ್ತರು ಸ್ಕೌಟ್ ಮಾಸ್ಟರ್ ಗೈಡ್ ಕ್ಯಾಪ್ಟನ್ ಉಪಸ್ಥಿತರಿದ್ದರು.



* ಸರ್ಕಾರಿ ಕಲಾ, ವಾಣಿಜ್ಯ ಮತ್ತು ಸ್ನಾತಕೋತ್ತರ ಕಾಲೇಜು–ಸ್ವಾಯತ್ತ ಹಾಸನ ಮತ್ತು ಹಾಸನ ಜಿಲ್ಲಾ ಸಂಸ್ಥೆ ಇವರ ಸಂಯುಕ್ತಶ್ರಯದಲ್ಲಿ ಜಿಲ್ಲಾ ಮಟ್ಟದ ರೋವರ್ಸ್ ರೇಂಜರ್ಸ್ ಮೂಟ್–2024 ಅನ್ನು ಜೂನ್ 01 ಮತ್ತು 02ರಂದು ಸರ್ಕಾರಿ ಕಲಾ, ವಾಣಿಜ್ಯ ಮತ್ತು ಸ್ನಾತಕೋತ್ತರ ಕಾಲೇಜು–ಸ್ವಾಯತ್ತ ಹಾಸನ



ಇಲ್ಲಿ ಆಯೋಜನೆ ಮಾಡಲಾಯಿತು ಮಹಿಳಾ ಪ್ರಥಮ ದರ್ಜೆ ಕಾಲೇಜು ಪ್ರಾಂಶುಪಾಲರಾದ ಶ್ರೀಮತಿ ಡಾ. ಕೆ.ಜಿ. ಕವಿತ ರವರು ಗಿಡಕ್ಕೆ ನೀರು ಹಾಕುವುದರ ಮೂಲಕ ಕಾರ್ಯಕ್ರಮದ ಉದ್ಘಾಟನೆಯನ್ನು ನೆರವೇರಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಲಾ ವಾಣಿಜ್ಯ ಕಾಲೇಜು ಪ್ರಾಂಶುಪಾಲರಾದ ಶ್ರೀ ಡಾ. ಇರ್ಫಾದ್‌ರವರು ವಹಿಸಿಕೊಂಡಿದ್ದರು. ಡಾ॥ ವೈ.ಎಸ್. ವೀರಭದ್ರಪ್ಪ, ಜಿಲ್ಲಾ ಮುಖ್ಯ ಆಯುಕ್ತರು, ಶ್ರೀ ರಾಜು ಡಿ.ಎಸ್., ಶೈಕ್ಷಣಿಕ ಡೀನ್, ಡಾ. ಮುರುಳಿದರ ಕೆ.ಡಿ. ಜಿಲ್ಲಾ ಕಾರ್ಯದರ್ಶಿ ಶ್ರೀ ಸುರೇಶ್ ಗುರೂಜಿ, ಪರೀಕ್ಷಾ ನಿಯಂತ್ರಕರು, ಸ.ಕ.ವಾ ಮತ್ತು ಸ್ನಾ ಕಾ,–ಸ್ವಾ, ಹಾಸನ ಶ್ರೀ ಸತ್ಯಮೂರ್ತಿ ಕೆ.ಟಿ ಪತ್ರಾಂಕಿತ ವ್ಯವಸ್ಥಾಪಕರು, ಸ.ಕ.ವಾ ಮತ್ತು ಸ್ನಾ ಕಾ,–ಸ್ವಾ, ಹಾಸನ ಹಾಗೂ ಇತರರು ಉಪಸ್ಥಿತರಿದ್ದರು.

ಹಾವೇರಿ

* ವಿದ್ಯಾರ್ಥಿಗಳು ನಾಯಕತ್ವ ಗುಣಗಳನ್ನು ಬೆಳೆಸಿಕೊಳ್ಳುವ ಮೂಲಕ ಉತ್ತಮ ಪ್ರಜೆಯಾಗಿ ಬೆಳೆಯಲು ಇಂತಹ ಶಿಬಿರಗಳು ಸಹಕಾರಿ ಆಗಲಿವೆ ಎಂದು ಪ್ರಾಚಾರ್ಯ ಡಾ. ಎಸ್.ಪಿ. ಗೌಡರ ಹೇಳಿದರು. ಇಲ್ಲಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಜಿಲ್ಲಾ ಸಂಸ್ಥೆಯು ಆಯೋಜಿಸಿದ್ದ ಜಿಲ್ಲಾ ಮಟ್ಟದ ರೋವರ್ಸ್ ಮತ್ತು ರೇಂಜರ್ಸ್‌ಗಳ ರಾಜ್ಯ ಪುರಸ್ಕಾರ ಪೂರ್ವ ಸಿದ್ಧತಾ ಪರೀಕ್ಷಾ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು, ಕಾರ್ಯಕ್ರಮ ಕುರಿತು ಜಿಲ್ಲಾ ತರಬೇತಿ ಆಯುಕ್ತರಾದ ಶ್ರೀ ಎಂ.ಆರ್ ಪಾಟೀಲ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಮುಖ್ಯ ಅತಿಥಿಗಳಾಗಿ ಶಿಬಿರದ ಸಂಪನ್ಮೂಲ ವ್ಯಕ್ತಿ ಶ್ರೀ ರಾಜೇಶ್ ಅವಲಕ್ಕಿ, ಜಿಲ್ಲಾ ಸಂಘಟಿಕರಾದ ಶ್ರೀ ಮಲ್ಲೇಶಪ್ಪ ಕೆ.ಟಿ., ತಾಲ್ಲೂಕು ಕಾರ್ಯದರ್ಶಿ ಶ್ರೀ ಎಂ.ಎಚ್. ಕಡೇಮನಿ, ಮೊದಲಾದವರು ಉಪಸ್ಥಿತರಿದ್ದರು. ಶ್ರೀ ರಾಮಚಂದ್ರಪ್ಪ ಬಿ.ಎಂ ಸ್ವಾಗತಿಸಿ, ಶ್ರೀಮತಿ ಸುಮಲತಾ ಬಿ.ಎನ್. ವಂದಿಸಿದರು. ಇದೇ ಸಂದರ್ಭದಲ್ಲಿ ಕಾಲೇಜು ಆವರಣದಲ್ಲಿ ಗಿಡಗಳನ್ನು ನೆಡಲಾಯಿತು.



* ಜೂನ್ 13 ರಂದು ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹಿರೇಕೆರೂರ ಆವರಣದಲ್ಲಿ ಭಾರತ್ ಸ್ಕೌಟ್ಸ್–ಗೈಡ್ಸ್ ಜಿಲ್ಲಾ ಸಂಸ್ಥೆ, ಹಾವೇರಿ ಹಾಗೂ ಆಂತರಿಕ ಗುಣಮಟ್ಟ ಭರವಸಾಕೋಶ, ಹಿರೇಕೆರೂರ ಇವರ ಸಹಯೋಗದಲ್ಲಿ ರೋವರ್ಸ್ ಮತ್ತು ರೇಂಜರ್ಸ್ ವಿದ್ಯಾರ್ಥಿಗಳ ಜಿಲ್ಲಾ ಮಟ್ಟದ ರಾಜ್ಯ ಪುರಸ್ಕಾರ ಪೂರ್ವಸಿದ್ಧತಾ ಪರೀಕ್ಷಾ ಶಿಬಿರವನ್ನು ಆಯೋಜಿಸಲಾಯಿತು. ಹಾವೇರಿ ಜಿಲ್ಲೆಯ ವಿವಿಧ ಮಹಾ ವಿದ್ಯಾಲಯಗಳಿಂದ 103 ಶಿಬಿರಾರ್ಥಿಗಳು ಭಾಗವಹಿಸಿದ್ದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಹಾ ವಿದ್ಯಾಲಯದ ಪ್ರಾಚಾರ್ಯ, ಡಾ. ಎಸ್.ಸಿ. ಗೌಡರ್ ವಹಿಸಿದ್ದರು. ಶಿಬಿರದ ಉದ್ಘಾಟನೆಯನ್ನು ಶ್ರೀ ಎಂ.ಆರ್. ಪಾಟೀಲ್, ತರಬೇತಿ ಆಯುಕ್ತರು, ಭಾರತ್ ಸ್ಕೌಟ್ಸ್–ಗೈಡ್ಸ್ ಜಿಲ್ಲಾ ಸಂಸ್ಥೆ, ಹಾವೇರಿ ಅವರ ನೆರವೇರಿಸಿದ್ದರು. ಶಿಬಿರದ ನಾಯಕರಾಗಿ ಹಾಗೂ ಸಂಪನ್ಮೂಲ ವ್ಯಕ್ತಿಗಳಾಗಿ ಶ್ರೀ ರಾಜೇಶ್ ವಿ. ಅವಲಕ್ಕಿ, ಎಲ್.ಟಿ.(ಆರ್) ಭಾಗವಹಿಸಿದ್ದರು. ಶ್ರೀ ಮಲ್ಲೇಶಪ್ಪ ಕೆ.ಟಿ., ಜಿಲ್ಲಾ ಸಂಘಟನಾಧಿಕಾರಿಗಳು, ಭಾರತ್ ಸ್ಕೌಟ್ಸ್–ಗೈಡ್ಸ್, ಜಿಲ್ಲಾ ಸಂಸ್ಥೆ, ಹಾವೇರಿ ಶ್ರೀ ಎಂ.ಹೆಚ್. ಕಡೆಮನಿ, ಕಾರ್ಯದರ್ಶಿಗಳು, ಭಾರತ್ ಸ್ಕೌಟ್ಸ್–ಗೈಡ್ಸ್, ತಾಲ್ಲೂಕು ಸಂಸ್ಥೆ, ಹಿರೇಕೆರೂರ, ಐಕ್ಯೂಎಸಿ ಸಂಚಾಲಕರಾದ ಶ್ರೀ ನವೀನಾ ಎಂ., ಕಾರ್ಯಕ್ರಮದ ಸಂಚಾಲಕರಾದ ಶ್ರೀ ರಾಮಚಂದ್ರಪ್ಪ ಬಿ.ಎಂ. (ರೋವರ್ಸ್ ನಾಯಕ) ಮತ್ತು ಶ್ರೀಮತಿ ಸುಮಲತಾ ಬಿ.ಎನ್. (ರೇಂಜರ್ಸ್ ನಾಯಕಿ) ಹಾಗೂ ಮಹಾವಿದ್ಯಾಲಯದ ರೋವರ್ಸ್ ಮತ್ತು ರೇಂಜರ್ಸ್ ಉಪಸ್ಥಿತರಿದ್ದರು.



ಕಲಬುರಗಿ

* ಜೂನ್ 16 ರಂದು ಆಯುಷ್ ಇಲಾಖೆ ಸಹಯೋಗದೊಂದಿಗೆ 10ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯ ಪೂರ್ವಭಾವಿ ತರಬೇತಿಯನ್ನು ಸರಕಾರಿ ಸಂಯುಕ್ತ ಕಾಲೇಜು ಕಲಬುರಗಿಯಲ್ಲಿ ನಡೆಸಲಾಯಿತು. ಆಯುಷ್ ಇಲಾಖೆಯ ಅಧಿಕಾರಿಗಳು ಡಾ. ಸುಧಾಕರ್ ಹಾಗೂ ಯೋಗ ತರಬೇತಿದಾರ ನಾಗರಾಜ್, ಜಿಲ್ಲಾ ಕಾರ್ಯದರ್ಶಿ ಶ್ರೀ ಚೆನ್ನವೀರಯ್ಯ ಸ್ವಾಮಿ, ಸ್ಕೌಟ್ಸ್ ಮತ್ತು ಗೈಡ್ಸಗಳು, ರೋವರ್ಸ್–ರೇಂಜರ್ಸ್‌ಗಳು ಹಾಗೂ ದಳ ನಾಯಕ ಹಾಗೂ ನಾಯಕಿಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.



ಕೊಡಗು

* ಜೂನ್ 01 ರಂದು ಮಡಿಕೇರಿ ನಗರದ ಎ.ಎಲ್.ಜಿ. ಕ್ರೆಸೆಂಟ್ ಶಾಲೆಯಲ್ಲಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಕೊಡಗು ಪ್ರಾದೇಶಿಕ ಕಛೇರಿ, ಜಿಲ್ಲಾ ಸಂಸ್ಥೆ ಹಾಗೂ ಶಿಕ್ಷಣ ಇಲಾಖೆಯ ಆಶ್ರಯದಲ್ಲಿ ವಿಶ್ವ ಪರಿಸರ ದಿನಾಚರಣೆ 2024 ಅಂಗವಾಗಿ ಪ್ರಾಥಮಿಕ ಹಾಗೂ ಪ್ರೌಢಶಾಲಾ ಮಕ್ಕಳಿಗೆ ಪರಿಸರ ಸಂರಕ್ಷಣೆ ಕುರಿತಂತೆ ಚಿತ್ರಕಲಾ ಸ್ಪರ್ಧೆ, ಪ್ರಬಂಧ ಸ್ಪರ್ಧೆ ನಡೆಸಲಾಯಿತು. ಜಿಲ್ಲಾ ಮುಖ್ಯ ಆಯುಕ್ತ ಶ್ರೀ ಕೆ.ಟಿ. ಬೇಬಿ ಮ್ಯಾಥ್ಯೂ, ಪರಿಸರ ಅಧಿಕಾರಿ ಶ್ರೀ ರಘುರಾಮ್, ಬೊಳ್ಳಜಿರ, ಶ್ರೀ ಅಯ್ಯಪ್ಪ, ಶ್ರೀಮತಿ ಮೈಥಿಲಿರಾವ್ ಇತರರು ಇದ್ದರು.



* ಜೂನ್ 05 ರಂದು ಕೊಡಗು ಜಿಲ್ಲೆಯ ಹಲವೆಡೆ ವಿಶ್ವ ಪರಿಸರ ದಿನವನ್ನು ಆಚರಿಸಲಾಯಿತು. ನಗರದ ಫೀಲ್ಡ್ ಮಾರ್ಷಲ್ ಕೆ.ಎಂ ಕಾರ್ಯಪ್ಪ ವೃತ್ತದ ಬಳಿ ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಧೀಶ ಶ್ರೀ ಹೊಸಮನಿ ಪುಂಡಲೀಕ ಪರಿಸರ ಜಾಗೃತಿ ಜಾಥಾಕ್ಕೆ ಚಾಲನೆ ನೀಡಿದರು. ನಗರ ಸಭೆಯ ಉದ್ಯಾನದಲ್ಲಿ ಅವರು ಗಿಡ ನೆಟ್ಟರು. ಮಕ್ಕಳು ಜನರಲ್ ತಿಮ್ಮಯ್ಯ ವೃತ್ತದಲ್ಲಿ ಮಾನವ ಸರಪಳಿ ಏರ್ಪಡಿಸಿ ಪರಿಸರದ ಮಹತ್ವ ಕುರಿತು ಸಂದೇಶ ನೀಡಿದರು. ನಗರದ ಗೌರಿ ಕೆರೆಯಲ್ಲಿ ಸ್ವಚ್ಛತಾ ಕಾರ್ಯವನ್ನು ಕೈಗೊಳ್ಳಲಾಯಿತು. ಆಂಜನೇಯ ದೇವಾಲಯ ಆವರಣದಲ್ಲಿ ಗಿಡಗಳನ್ನು ನೆಡಲಾಯಿತು. ವಿದ್ಯಾರ್ಥಿಗಳು ಪರಿಸರದ ಸಂರಕ್ಷಣೆ ಕುರಿತು ಭಿತ್ತಿಫಲಕಗಳನ್ನು ಹಿಡಿದು ಜಾಗೃತಿ ಮೂಡಿಸಿದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಶಾಲಾ ಶಿಕ್ಷಣ ಇಲಾಖೆ, ಪೋಲಿಸ್ ಇಲಾಖೆ, ಅರಣ್ಯ ಇಲಾಖೆ, ತೋಟಗಾರಿಕೆ ಇಲಾಖೆ, ವಕೀಲರ ಸಂಘ, ಮಡಿಕೇರಿ ಜಿಲ್ಲಾ ಸಂಸ್ಥೆ ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತು, ಕೊಡಗು ಜಿಲ್ಲಾ ಸಮಿತಿ, ಮಡಿಕೇರಿ ಜನರಲ್ ತಿಮ್ಮಯ್ಯ ಪಬ್ಲಿಕ್ ಶಾಲೆ ಹಾಗೂ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಆಶ್ರಯದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿತ್ತು. ಜಿಲ್ಲಾ ಕಾನೂನು ಸೇವಾ ಪ್ರಧಿಕಾರದ ಸದಸ್ಯ ಕಾರ್ಯದರ್ಶಿ ಶ್ರೀಮತಿ ಎನ್.ಬಿ ಜಯಲಕ್ಷ್ಮಿ ವಕೀಲರ ಸಂಘದ ಅಧ್ಯಕ್ಷ ಶ್ರೀ ಎಂ.ಎ. ನಿರಂಜನ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಶ್ರೀ ಸುಂದರಾಜ್, ಉಪನಿರ್ದೇಶಕ ಶ್ರೀ ಹೆಚ್.ಆರ್ ಯೋಗೀಶ್, ನಗರಸಭೆ





ಆಯುಕ್ತ ಶ್ರೀ ವಿಜಯ್, ಸ್ಕೌಟ್ಸ್ ಮತ್ತು ಗೈಡ್ಸ್ ಪ್ರಧಾನ ಜಿಲ್ಲಾ ಆಯುಕ್ತರರು ಶ್ರೀಮತಿ ಕೆ.ಟಿ ಬೇಬಿ ಮ್ಯಾಥ್ಯು, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಪರಿಸರ ಅಧಿಕಾರಿ ಶ್ರೀ ಎಂ.ಜಿ ರಘುರಾಮ್, ರಾಷ್ಟ್ರೀಯ ಹಸಿರು ಪಡೆಯ ಜಿಲ್ಲಾ ನೋಡಲ್ ಅಧಿಕಾರಿ ಶ್ರೀ ಟಿ.ಜಿ ಪ್ರೇಮ್‌ಕುಮಾರ್, ನಗರಸಭೆ ಪರಿಸರ ಇಂಜಿನಿಯರ್ ಶ್ರೀಮತಿ ಸೌಮ್ಯ, ಜನರಲ್ ತಿಮ್ಮಯ್ಯ ಪಬ್ಲಿಕ್ ಶಲಾ ಸಂಸ್ಥೆಯ ಕಾರ್ಯಧ್ಯಕ್ಷ ಶ್ರೀ ಕೆ.ಎ ದೇವಯ್ಯ ಸಂಸ್ಥೆಯ ಆಡಳಿತಾಧಿಕಾರಿ ಶ್ರೀ ಎನ್.ಎ. ಪೊನ್ನಮ್ಮ, ಶಾಲೆಯ ಪ್ರಾಂಶುಪಾಲರಾದ ಶ್ರೀಮತಿ ಎಂ.ಜಿ ಸವಿತಾ, ಜಿಲ್ಲಾ ಕಾನೂನು ಸೇವೆಗಳ ಪ್ರಧಿಕಾರದ ಆಡಳಿತ ಸಹಾಯಕ ಶ್ರೀ ಬಿ.ಎಸ್ ಜೋಯಪ್ಪ, ಸ್ಕೌಟ್ಸ್ ಮತ್ತು ಗೈಡ್ಸ್ ಎನ್.ಸಿ.ಸಿ., ಎನ್.ಎಸ್.ಎಸ್ ವಿದ್ಯಾರ್ಥಿಗಳು ಭಾಗವಹಿಸಿದ್ದರು.

* ಜೂನ್ 07 ರಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಶಿಕ್ಷಣ ಇಲಾಖೆ, ಪೋಲಿಸ್ ಇಲಾಖೆ, ಅರಣ್ಯ ಇಲಾಖೆ, ತೋಟಗಾರಿಕಾ ಇಲಾಖೆ, ವಕೀಲರ ಸಂಘ, ಜಿಲ್ಲಾ ಸಂಸ್ಥೆ, ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ ಹಾಗೂ ಸಂತ ಜೋಸೆಫರ ಶಾಲೆಯ ಸಂಯುಕ್ತಾಶ್ರಯದಲ್ಲಿ ವಿಶ್ವ ಪರಿಸರ ದಿನಾಚರಣೆಯನ್ನು ಆಚರಿಸಲಾಯಿತು. "ಪ್ರಕೃತಿಯನ್ನು ಸಂರಕ್ಷಿಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದ್ದು, ಮುಂದಿನ ಪೀಳಿಗೆಗೆ ಪ್ಲಾಸ್ಟಿಕ್ ಮುಕ್ತ ಪರಿಸರವನ್ನು ನೀಡುವುದು ಅಗತ್ಯವಾಗಿದೆ" ಎಂದು ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆಯ ಜಿಲ್ಲಾ ಪ್ರಧಾನ ಆಯುಕ್ತ ಶ್ರೀ ಕೆ.ಟಿ ಬೇಬಿ ಮ್ಯಾಥ್ಯುರವರು ತಿಳಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಅದೇ ವ್ಯಾಪ್ತಿಯ ನಗರ ಸಭಾ ಸದಸ್ಯರಾದ ಶ್ರೀ ಅರುಣ್ ಶೆಟ್ಟಿ ವಹಿಸಿದ್ದರು. ಸಂತ ಜೋಸೆಫರ ಶಾಲೆಯ ಮೇಲ್ವಿಚಾರಕರಾದ ಸಿಸ್ಟರ್ ರೋಜಾ, ಪ್ರಾಥಮಿಕ ವಿಭಾಗದ ಮುಖ್ಯೋಪಧ್ಯಾಯರಾದ ಸಿಸ್ಟರ್ ಫಿಲೋಮಿನಾ, ನಗರಸಭಾ ಸದಸ್ಯ ಶ್ರೀ ಮಹೇಶ್ ಜೈನಿ, ಶಾಲಾ ಶಿಕ್ಷಕರು, ಸಿಬ್ಬಂದಿ ವರ್ಗ ಹಾಗೂ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್‌ನ ಜಿಲ್ಲಾ ಕಾರ್ಯದರ್ಶಿ ಶ್ರೀ ಬೊಳ್ಳಜಿರ ಬಿ. ಅಯ್ಯಪ್ಪ, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್‌ನ ವಿದ್ಯಾರ್ಥಿಗಳು ಮತ್ತು ಗೈಡ್ ಕ್ಯಾಪ್ಟನ್‌ಗಳು ಸೇರಿ ಕ್ರೀಡಾಂಗಣದ ಸುತ್ತಲೂ 100ಕ್ಕೂ ಹೆಚ್ಚು ಗಿಡಗಳನ್ನು ನೆಟ್ಟು ಪರಿಸರ ಜಾಗೃತಿ ಮೂಡಿಸಿದರು.



ಕೋಲಾರ

* ಮೇ 22 ರಂದು ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಬಂಗಾರು ತಿರುಪತಿಯಲ್ಲಿ ಸ್ವಯಂ ಪ್ರೇರಿತ ರಕ್ತದಾನ ಶಿಬಿರವನ್ನು ಆಯೋಜಿಸಿ 50 ಯುನಿಟ್ ರಕ್ತವನ್ನು ಸಂಗ್ರಹಿಸಲಾಯಿತು.



* ಮೇ 27 ಮತ್ತು 28 ರಂದು ಜೈನ್ ಇಂಟರ್ ನ್ಯಾಷನಲ್ ಶಾಲೆ ಬಂಗಾರಪೇಟೆಯಲ್ಲಿ ಬೇಸಿಗೆ ಶಿಬಿರವನ್ನು ಆಯೋಜಿಸಲಾಗಿತ್ತು.

* ಮೇ 30 ರಂದು ಕೋಲಾರ ನಗರದ ನಾಗರಬಾವಿ ಕಲ್ಯಾಣಿಯನ್ನು ಜಿಲ್ಲಾ ಪರಿಸರ ಇಲಾಖೆ, ಪರ್ಯಾವರಣ, ಪರಿಸರ ಪ್ರೇಮಿಗಳ ತಂಡದೊಂದಿಗೆ ಸ್ವಚ್ಚತೆ ಮಾಡಲಾಯಿತು. ಈ ಸೇವಾ ಶಿಬಿರಕ್ಕೆ ಜಿಲ್ಲಾ ಹಿರಿಯ ನ್ಯಾಯಾಧೀಶರಾದ ಶ್ರೀಯುತ ಸುನಿಲ ಹೊಸಮುನಿ ರವರು ಚಾಲನೆ ನೀಡಿದರು.

* ಮೇ 28 ರಿಂದ 30ರ ವರೆಗೆ ಕೆ.ಪಿ.ಎಸ್. ಶಾಲೆ ಸೋಮಯಾಜಹಳ್ಳಿ ಶಾಲೆಯಲ್ಲಿ ಬೇಸಿಗೆ ಶಿಬಿರವನ್ನು ಆಯೋಜಿಸಲಾಗಿತ್ತು.

* ಜೂನ್ 01 ರಂದು ಯಲ್ದೂರು ಗ್ರಾಮದಲ್ಲಿನ ವಿದ್ಯಾ ದೀಪ್ತಿ ಶಾಲೆಯಲ್ಲಿ ಪದಕ ತರಬೇತಿ ಶಿಬಿರವನ್ನು ಆಯೋಜನೆ ಮಾಡಲಾಗಿತ್ತು.

* ಜೂನ್ 03 ರಂದು ಕೋಲಾರ ನಗರದಲ್ಲಿನ ಉಪನಿರ್ದೇಶಕರ ಕಛೇರಿಯ ಆವರಣವನ್ನು ಸ್ವಚ್ಚಗೊಳಿಸುವ ಸೇವಾ ಶಿಬಿರವನ್ನು ಆಯೋಜಿಸಲಾಗಿತ್ತು.



* ಜೂನ್ 5 ರಂದು ಕೋಲಾರ ನಗರದಲ್ಲಿನ ಉಪನಿರ್ದೇಶಕರ ಕಛೇರಿಯ ಆವರಣದಲ್ಲಿ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಘ, ರೋಟರಿ ಕೋಲಾರ ನಂದಿನಿ ವತಿಯಿಂದ ವಿಶ್ವ ಪರಿಸರ ದಿನಾಚರಣೆಗೆ ಮಾನ್ಯ ಉಪನಿರ್ದೇಶಕರಾದ ಶ್ರೀಯುತ ಕೃಷ್ಣಮೂರ್ತಿರವರು ಗಿಡಗಳನ್ನು ನೆಡುವ ಮೂಲಕ ಚಾಲನೆ ನೀಡಿದರು, ಈ ಸಂದರ್ಭದಲ್ಲಿ ಜಿಲ್ಲಾ ಮುಖ್ಯ ಆಯುಕ್ತರಾದ ಶ್ರೀ ಕೆ.ವಿ. ಶಂಕರಪ್ಪ ಮತ್ತು ಪದಾಧಿಕಾರಿಗಳು, ಇಲಾಖೆ ಅಧಿಕಾರಿಗಳು, ರೋವರ್ಸ್ ಮತ್ತು ರೇಂಜರ್ಸ್‌ಗಳು ಉಪಸ್ಥಿತರಿದ್ದರು. ಇದೇ ದಿನ ಜಿಲ್ಲೆಯ ನಗವಾರ, ನಂಗಲಿ, ಒಳಗೇರನಹಳ್ಳಿ, ಮಾಸ್ತೇನಹಳ್ಳಿ, ಎಸ್.ಎಸ್. ಮಂಕಾನ್, ಸೋಮಯಾಜಲಹಳ್ಳಿ, ತೋರ್ನಹಳ್ಳಿ, ಸರ್ಕಾರಿ ಬಾಲಕರ ಪದವಿ ಪೂರ್ವ ಕಾಲೇಜು ಬಂಗಾರಪೇಟೆ, ಸೋಣ್ಣೇನಹಳ್ಳಿ, ಪೀಲ್ಡ್ ಮಾರ್ಷಲ್ ಕಾರಿಯಪ್ಪ, ಸರ್ಕಾರಿ ಪದವಿ ಪೂರ್ವ ಕಾಲೇಜು ಶ್ರೀ ಡಿ.ಎನ್. ದೊಡ್ಡಿ, ಜಿ.ಜಿ. ವೇಣು ಶಾಲೆ, ಗುಂಡ್ಲಹಳ್ಳಿ, ಗೊಲ್ಲಹಳ್ಳಿ, ರೆಹಮತ್ ನಗರ ಶಾಲಾ ಕಾಲೇಜುಗಳಲ್ಲಿ ಪರಿಸರ ದಿನಾಚರಣೆಯನ್ನು ಆಚರಿಸಲಾಯಿತು.

* ಜೂನ್ 8 ರಂದು ಶ್ರೀನಿವಾಸಪುರ ತಾಲ್ಲೂಕಿನ ಮ್ಯಾಂಗೋವ್ಯಾಲಿ ಪಬ್ಲಿಕ್ ಶಾಲೆಯಲ್ಲಿ ಪ್ರಾರಂಭಿಕ ತರಬೇತಿ ಶಿಬಿರವನ್ನು ಶಾಲೆಯ ಸಂಸ್ಥಾಪಕರಾದ ಶ್ರೀಯುತ ಅಮರನಾಥ್ ರವರು ಉದ್ಘಾಟಿಸಿದರು, ಈ ಸಂದರ್ಭದಲ್ಲಿ ಶಾಲೆಯ ಪ್ರಾಂಶುಪಾಲರಾದ ಶ್ರೀಯುತ ಅಶೋಕ್, ಸಂಪನ್ಮೂಲ ವ್ಯಕ್ತಿಗಳಾಗಿ ಶ್ರೀ ಸುರೇಶ್, ಶ್ರೀಮತಿ ಕೆ.ಆರ್. ಉಮಾದೇವಿ, ಸ್ಕೌಟ್ ಶ್ರೀ ಬಾಬು, ಶ್ರೀ ಮುನಿನಾರಾಯಣಪ್ಪ, ಶ್ರೀಮತಿ ಗೌರಾಬಾಯಿ, ಶ್ರೀ ರಾಮಕೃಷ್ಣೇಗೌಡರವರು ಉಪಸ್ಥಿತರಿದ್ದರು.

* ಜೂನ್ 9 ರಂದು ಆರ್.ಎಲ್. ಜಾಲಪ್ಪ ವೈದ್ಯಕೀಯ ಕಾಲೇಜು ಮತ್ತು ಸ್ಕೌಟ್ಸ್-ಗೈಡ್ಸ್ ಸಂಸ್ಥೆ ಬಂಗಾರಪೇಟೆ ತಾಲ್ಲೂಕಿನ ಡಿ.ಪಿ.ಹಳ್ಳಿಯಲ್ಲಿನ ಮುರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ 100 ಹಣ್ಣಿನ ಗಿಡಗಳನ್ನು ನೆಡಲಾಯಿತು.

* ಜೂನ್ 11 ರಂದು ಜಿಲ್ಲಾ ಮಟ್ಟದ ಚಿತ್ರಕಲಾ ಸ್ಪರ್ಧೆಯನ್ನು ಕನ್ನಡ ದಿನಪತ್ರಿಕೆಯಾದ ವಿಜಯವಾಣಿಯ ಸಹಯೋಗದಲ್ಲಿ ಸ್ಕೌಟ್ ಭವನದಲ್ಲಿ ಆಯೋಜಿಸಲಾಗಿತ್ತು.350 ವಿದ್ಯಾರ್ಥಿಗಳು ಭಾಗವಹಿಸಿದ್ದರು.

* ಜೂನ್ 13 ರಂದು ಕೋಲಾರ ನಗರದ ಕುವೆಂಪು ನಗರದಲ್ಲಿನ ಉದ್ಯಾನವನವನ್ನು ಸ್ವಚ್ಚಗೊಳಿಸಲಾಯಿತು.



* ಜೂನ್ 15 ರಂದು ಜಿಲ್ಲಾ ಮಟ್ಟದ ಯೋಗೋತ್ಸವನ್ನು ಕೋಲಾರ ನಗರದ ಮಹಿಳಾ ಸಮಾಜ ಶಾಲೆಯ ಆವರಣದಲ್ಲಿ ಆಯುಷ್ ಇಲಾಖೆಯ ಸಹಕಾರ ಮತ್ತು ಮಾರ್ಗದರ್ಶನದೊಂದಿಗೆ ನಡೆಸಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾ ಮುಖ್ಯ ಆಯುಕ್ತರಾದ ಶ್ರೀಯುತ ಕೆ.ವಿ. ಶಂಕರಪ್ಪ, ಸ್ಥಳೀಯ ಸಂಸ್ಥೆಯ ಅಧ್ಯಕ್ಷರಾದ ಶ್ರೀಮತಿ ನವೀನಾ, ಆಯುಷ್ ಇಲಾಖೆಯ ಡಾ॥ ಬಸವರಾಜ್, ಡಾ॥ ಉಮಾ, ಡಾ॥ ಗೀತಾ, ಯೋಗಪಟುಗಳು ಸ್ಕೌಟ್ಸ್ ಗೈಡ್ಸ್ ಸಂಸ್ಥೆಯ ಪದಾಧಿಕಾರಿಗಳು ಮುಂತಾದವರು ಉಪಸ್ಥಿತರಿದ್ದರು. ಇದೇ ದಿನ ಜಿಲ್ಲೆಯ ನಗವಾರ, ನಂಗಲಿ, ಒಳಗೇರನಹಳ್ಳಿ, ಎಸ್.ಎಸ್. ಮಂಕಾನ್, ಸೋಮಯಾಜಲಹಳ್ಳಿ, ಮಾಸ್ತೇನಹಳ್ಳಿ, ತೋರ್ನಹಳ್ಳಿ, ಸರ್ಕಾರಿ ಬಾಲಕರ



ಪದವಿ ಪೂರ್ವ ಕಾಲೇಜು ಬಂಗಾರಪೇಟೆ, ಸೋಣ್ಣೇನಹಳ್ಳಿ, ಪೀಲ್ಡ್ ಮಾರ್ಷಲ್ ಕಾರಿಯಪ್ಪ, ಸರ್ಕಾರಿ ಪದವಿಪೂರ್ವ ಕಾಲೇಜು ಡಿ.ಎನ್. ದೊಡ್ಡಿ, ಜಿ.ಜಿ. ವೇಣು ಶಾಲೆ, ಗುಂಡ್ಲಹಳ್ಳಿ, ಗೊಲ್ಲಹಳ್ಳಿ, ರೆಹಮತ್ ನಗರ, ಗೋಬಾಲ್ ಶಾಲೆ, ಆಶ್ಲೇ ಇಂಟರ್ ನ್ಯಾಷನಲ್ ಶಾಲೆ, ಜೈನ್ ಇಂಟರ್ ನ್ಯಾಷನಲ್, ಸುಭಾಷ್, ಎ.ಇ.ಎಸ್,ಶಾಲೆ, ಮಹಿಳಾ ಕಾಲೇಜು, ಚಿನ್ಮಯ ಶಾಲೆ, ಆರ್.ಎಲ್.ಜಾಲಪ್ಪ ಶಾಲೆ, ಕೆ.ಪಿ.ಎಸ್. ಬೂದಿಕೋಟೆ, ವಿದ್ಯಾ ಬೋದಿನಿ, ವ್ಯಾಲಿ ಪಬ್ಲಿಕ್, ಪ್ರೇಮ್ ಸೇವಾ, ವಿರೂಪಾಕ್ಷಿಪುರ ಶಾಲಾ ಕಾಲೇಜುಗಳಲ್ಲಿ ಯೋಗ ದಿನಾಚರಣೆಯನ್ನು ಆಚರಿಸಲಾಯಿತು.

ಚಿಕ್ಕಮಗಳೂರು

* ಮೇ 30 ರಂದು ಕಡೂರು ತಾಲೂಕಿನ ಸರ್ಕಾರಿ ಪ್ರಥಮದರ್ಜೆ ಕಾಲೇಜು ಕಡೂರು ಇದರಲ್ಲಿ ಮೂಲ ತರಬೇತಿ ಹಾಗೂ ನಾಯಕತ್ವ ಶಿಬಿರ ನಡೆಯಿತು. ಈ ಕಾರ್ಯಕ್ರಮವನ್ನು ಜಿಲ್ಲಾ ಮುಖ್ಯ ಆಯುಕ್ತರಾದ ಶ್ರೀ ಎಂ.ಎ. ಷಡಕ್ಷರಿರವರು ಉದ್ಘಾಟಿಸಿದರು ಮತ್ತು ಕಾಲೇಜಿನ ಪ್ರಾಂಶುಪಾಲರು ಹಾಗೂ ಎಲ್ಲಾ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.



* ಜೂನ್ 05 ರಂದು ವಿಶ್ವ ಪರಿಸರ ದಿನಾಚರಣೆ ಮತ್ತು ಮಾಹಿತಿ ಕಾರ್ಯಾಗಾರ ಐ.ಡಿ.ಎಸ್.ಜಿ. ಕಾಲೇಜಿನಲ್ಲಿ ನಡೆಯಿತು.



* ಜೂನ್ 11 ರಂದು ತುಮಕೂರು ಜಿಲ್ಲೆಯ ರೋವರ್‌ಗಳು ರ‍್ಯಾಂಬ್ಲರ್ ಬ್ಯಾಡ್ಜ್ ಪ್ರಾಜೆಕ್ಟ್‌ಗಾಗಿ ಚಿಕ್ಕಮಗಳೂರು ಜಿಲ್ಲೆಗೆ ಸೈಕಲ್ ಮೂಲಕ ಪ್ರಯಾಣಿಸಿ ಶಾಲೆ ಕಾಲೇಜುಗಳು ಹಾಗೂ ಎಸ್.ಪಿ.ಗಳನ್ನು ಭೇಟಿ ಮಾಡಿ ಎಲೆಕ್ಷನ್, ಪರಿಸರ, ನೀರು



ಹಾಗೂ ಟ್ಯಾಕ್ಸ್‌ಗಳ ಬಗ್ಗೆ ಅರಿವು ಮೂಡಿಸುತ್ತಾ ಬಂದು ಚಿಕ್ಕಮಗಳೂರು ಜಿಲ್ಲಾ ಸಂಸ್ಥೆಯಲ್ಲಿ ಸ್ವಚ್ಛತಾ ಕಾರ್ಯಕ್ರಮ ಹಾಗೂ ಶಿಬಿರಾಗ್ನಿ ಹಮ್ಮಿಕೊಂಡಿದ್ದರು.

* ಜೂನ್ 12 ರಿಂದ 14ರ ವರೆಗೆ ಸರಕಾರಿ ಪ್ರಥಮದರ್ಜೆ ಕಾಲೇಜು, ಕಡೂರು ಕಾಲೇಜಿನ ವತಿಯಿಂದ ಪ್ರಕೃತಿ ಅಧ್ಯಯನ ಶಿಬಿರವನ್ನು ಹಮ್ಮಿಕೊಂಡಿದ್ದರು. ಇದರ ಉದ್ಘಾಟನೆಯನ್ನು ಶ್ರೀ ಎ.ಎನ್. ಮಹೇಶ್ ಸ್ಕೌಟ್–ಗೈಡ್ಸ್ ರಾಜ್ಯ ಸಂಸ್ಥೆಯ ಉಪಾಧ್ಯಕ್ಷರು ಹಾಗೂ ಅಧ್ಯಕ್ಷರು ಪರಿಸರ ಮಾಲಿನ್ಯ ಮೌಲ್ಯಮಾಪನ ಸಮಿತಿ ಮತ್ತು ಕಾಲೇಜಿನ ಪ್ರಾಂಶುಪಾಲರುಹಾಗೂ ಎಲ್ಲಾ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.



* ಜೂನ್ 14 ರಂದು ಜಿಲ್ಲಾ ಸಂಸ್ಥೆ ಚಿಕ್ಕಮಗಳೂರು ಇಲ್ಲಿ ವೃಕ್ಷಮಣಿದಾರರ ಸಮಾಗಮ ಕಾರ್ಯಕ್ರಮ ನಡೆಯಿತು. ಇದರ ಉದ್ಘಾಟನೆಯು ಶ್ರೀ ಎ.ಎನ್. ಮಹೇಶ್, ರಾಜ್ಯ ಸಂಸ್ಥೆಯ ಉಪಾಧ್ಯಕ್ಷರು ಹಾಗೂ ಅಧ್ಯಕ್ಷರು ಪರಿಸರ ಮಾಲಿನ್ಯ ಮೌಲ್ಯಮಾಪನ ಸಮಿತಿ ಹಾಗೂ ಜಿಲ್ಲಾ ಮುಖ್ಯ ಆಯುಕ್ತರಾದ ಶ್ರೀ ಎಮ್.ಎ. ಷಡಕ್ಷರಿರವರ ಅಧ್ಯಕ್ಷತೆಯಲ್ಲಿ ನಡೆಯಿತು.



* ಜೂನ್ 15 ರಂದು ಹೊರ ಸಂಚಾರದ ಅಂಗವಾಗಿ ಮೂಡಿಗೆರೆ ತಾಲೂಕಿನ ಶ್ರೀ ಕೆ.ಪಿ. ಪೂರ್ಣಚಂದ್ರ ತೇಜಸ್ವಿ ಪ್ರತಿಷ್ಠಾನ ಸಂಸ್ಥೆ, ಮಲಯ ಮಾರುತ ಪ್ರವಾಸಿ ಮಂದಿರ ಹಾಗೂ ಸಾಲುಮರದ ತಿಮ್ಮಕ್ಕನ ಔಷಧಿ ಸಸ್ಯ ವನಕ್ಕೆ ಭೇಟಿ ನೀಡಲಾಯಿತು.

* ಜೂನ್ 16 ರಂದು ನಡೆದ ಯೋಗ ತರಬೇತಿ ಶಿಬಿರವನ್ನು ಮಾಡೆಲ್ ಆಂಗ್ಲ ಮಾಧ್ಯಮ ಶಾಲೆಯಲ್ಲಿ, ಆಯುಷ್ ಇಲಾಖೆಯ ಸಹಯೋಗದೊಂದಿಗೆ ಹಮ್ಮಿಕೊಳ್ಳಲಾಯಿತು.

ಮೈಸೂರು

* ಜೂನ್ 13 ರಂದು ಜಿಲ್ಲಾ ಸಂಸ್ಥೆ, ಮೈಸೂರು ಇಲ್ಲಿ ಮೈಸೂರು ಉತ್ತರ, ದಕ್ಷಿಣ, ಮೈಸೂರು ತಾ. ಮತ್ತು ಶ್ರೀರಾಮಪುರ ಸ್ಥಳೀಯ ಸಂಸ್ಥೆಗಳ ಸ್ಕೌಟರ್ಸ್ ಮತ್ತು ಗೈಡರ್ಸ್ ಸಭೆ. ನಡೆಯಿತು. ಶ್ರೀ ಪಿ. ವಿಶ್ವನಾಥ್ ಜಿಲ್ಲಾ ಮುಖ್ಯ ಆಯುಕ್ತರು, ಮೈಸೂರು ಇವರು ಸಭೆಯ ಅಧ್ಯಕ್ಷತೆಯನ್ನು ವಹಿಸಿದ್ದರು. ಜಿಲ್ಲಾ ಆಯುಕ್ತರುಗಳಾದ ಶ್ರೀಮತಿ ಪುಷ್ಪವಲ್ಲಿ, ಶ್ರೀಮತಿ ಅಮೃತಮ್ಮ, ಶ್ರೀಮತಿ

ಶಶಿಕಲಾ, ಶ್ರೀ ಎಂ.ಎನ್. ಸುರೇಶ್ ಕುಮಾರ್, ಶ್ರೀ ಅಜಯ್ ಕುಮಾರ್ ಜೈನ್, ಜಿಲ್ಲಾ ತರಬೇತಿ ಆಯುಕ್ತರುಗಳಾದ ಶ್ರೀ ಗೋಪಾಲ ಕೃಷ್ಣ, ಶ್ರೀಮತಿ ಮನೋಹರ ಪ್ರಭ, ಜಿಲ್ಲಾ ಸಂಘಟಕರು, 90 ಮಂದಿ ಸ್ಕೌಟರ್ಸ್ ಮತ್ತು ಗೈಡರ್ಸ್ ಸಭೆಯಲ್ಲಿ ಭಾಗವಹಿಸಿದ್ದರು.



* ಜೂನ್ 15 ರಂದು ಮೈಸೂರು ಜಿಲ್ಲಾ ಸಂಸ್ಥೆಯಲ್ಲಿ ನಡೆದ "ಯೋಗೋತ್ಸವ" ಕಾರ್ಯಕ್ರಮವನ್ನು ಶ್ರೀ ವಿಶ್ವನಾಥ್ ಜಿಲ್ಲಾ ಮುಖ್ಯ ಆಯುಕ್ತರು ಉದ್ಘಾಟಿಸಿದರು ಶ್ರೀ ಬಿ.ಕೆ. ಬಸವರಾಜು ಜಂಟಿ ರಾಜ್ಯ ಕಾರ್ಯದರ್ಶಿಗಳು, ಶ್ರೀ ಅಬ್ದುಲ್ ಜಮೀಲ್, ಜಿಲ್ಲಾ ಕಾರ್ಯದರ್ಶಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು ಡಾ.ಪುಷ್ಪ ಉಪ ನಿರ್ದೇಶಕರು ಆಯುಷ್ ಇಲಾಖೆ ಮೈಸೂರು ರವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದರು. ಮೈಸೂರು ನಗರದ 1,700ಕ್ಕೂ ಅಧಿಕ ಸ್ಕೌಟ್ಸ್, ಗೈಡ್ಸ್, ಬುಲ್‌ಬುಲ್, ಕಬ್ ಹಾಗೂ ಇತರೆ ಶಾಲೆಯ ಮಕ್ಕಳುಗಳು, ಮೈಸೂರು ಜಿಲ್ಲಾ ಸಂಸ್ಥೆಯ ಪದಾಧಿಕಾರಿಗಳು ಮತ್ತು ಮೈಸೂರಿನ ವಿವಿಧ ಯೋಗ ಶಾಲೆಯ ಯೋಗ ಪಟುಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.



ರಾಯಚೂರು

* ಮೇ 30 ರಂದು ಜಿಲ್ಲಾ ಸಂಸ್ಥೆ ರಾಯಚೂರು ಹಾಗೂ ಸ್ಥಳೀಯ ಸಂಸ್ಥೆ ಮಾನ್ವಿ ವತಿಯಿಂದ ಶ್ರೀ ಬಿ. ಬಲರಾಮಕೃಷ್ಣ ಅಧ್ಯಕ್ಷರು ಸ್ಥಳೀಯ ಸಂಸ್ಥೆ ಮಾನ್ವಿರವರ ಅಧ್ಯಕ್ಷತೆಯಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಅಧಿಕ ಅಂಕ ಗಳಿಸಿದ



ಸ್ಕೌಟ್ಸ್–ಗೈಡ್ಸ್‌ಗಳಿಗೆ ಅಭಿನಂದನಾ ಸಮಾರಂಭವನ್ನು ಕಲ್ಮಠ ಶಾಲೆ, ಮಾನ್ವಿ ಇಲ್ಲಿ ಆಯೋಜನೆ ಮಾಡಲಾಯಿತು. ಮುಖ್ಯ ಅತಿಥಿಗಳಾಗಿ ಶ್ರೀ ಜೀವನ್ ಸಾಬ್ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮಾನ್ವಿರವರು ಆಗಮಿಸಿದ್ದರು ಶ್ರೀ ಎಮ್. ರಾಮಲಿಂಗಪ್ಪ ಕಾರ್ಯದರ್ಶಿಗಳು ಪ್ರಾಸ್ತಾವಿಕವಾಗಿ ಮಾತನಾಡಿದರು. ಸಸಿಗೆ ನೀರು ಹಾಕುವ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಅತಿಥಿಗಳಾಗಿ ಶ್ರೀ ಇನುಸ್, ಶಿಕ್ಷಣಾಧಿಕಾರಿಗಳು ಮಾನ್ವಿ, ಶ್ರೀ ಜಯಭೀಮ, ತಾಲೂಕ ದೈಹಿಕ ಪರಿವೀಕ್ಷಕರು ಮಾನ್ವಿ, ಶ್ರೀ ಮಂಜುನಾಥ, ಮುಖ್ಯ ಗುರುಗಳು, ಶ್ರೀ ಪ್ರಭಯ್ಯಸ್ವಾಮಿ, ಮುಖ್ಯ ಗುರುಗಳು ವೇದಿಕೆಯ ಮೇಲೆ ಉಪಸ್ಥಿತರಿದ್ದರು.

* ಜೂನ್ 05 ರಂದು ಜಿಲ್ಲಾ ಸಂಸ್ಥೆ ರಾಯಚೂರು ಹಾಗೂ ಎಲ್ಲ ಸ್ಥಳೀಯ ಸಂಸ್ಥೆಗಳ ವತಿಯಿಂದ ವಿವಿಧ ಶಾಲೆಗಳಲ್ಲಿ ಪರಿಸರ ದಿನಾಚರಣೆಯನ್ನು ಆಚರಿಸಲಾಯಿತು. ಇದೇ ಸಂದರ್ಭದಲ್ಲಿ ಕಬ್ಸ್, ಬುಲ್–ಬುಲ್ಸ್, ಸ್ಕೌಟ್ಸ್, ಗೈಡ್ಸ್ ಕ್ಯಾಪ್ಟನ್ ಹಾಗೂ ಕಬ್ ಮಾಸ್ಟರ್, ಫ್ಲಾಕ್ ಲೀಡರ್, ಸ್ಕೌಟ್ಸ್ ಮಾಸ್ಟರ್, ಗೈಡ್ಸ್ ಕ್ಯಾಪ್ಟನ್ ಹಾಗೂ ಪದಾಧಿಕಾರಿಗಳು ಭಾಗವಹಿಸಿದ್ದರು.



* ಜೂನ್ 08 ರಂದು ಜಿಲ್ಲಾ ಸಂಸ್ಥೆ ರಾಯಚೂರು ಹಾಗೂ ಸ್ಥಳೀಯ ಸಂಸ್ಥೆಗಳಾದ ರಾಯಚೂರು, ಮಾನ್ವಿ, ದೇವ ದುರ್ಗವತಿಯಿಂದ ಪರಿಸರ ದಿನಾಚರಣೆ ಅಂಗವಾಗಿ ಭೂಮಿಯ ಕುರಿತು ಮೊದಲನೇ ವಾರದ ಶಿಬಿರಾಗ್ನಿ ಕಾರ್ಯಕ್ರಮವನ್ನು ಆಯೋಜನೆ ಮಾಡಲಾಯಿತು. ಮಕ್ಕಳು ಭೂಮಿಯ ಕುರಿತು ಹಾಡು, ಚಿತ್ರಕಲೆ, ಕವನ, ಭಾಷಣವನ್ನು ಹೇಳಿದರು. ಇದೇ ಸಂದರ್ಭದಲ್ಲಿ ಅಧ್ಯಕ್ಷರು, ಕಾರ್ಯದರ್ಶಿಗಳು, ಪದಾಧಿಕಾರಿಗಳು ಹಾಗೂ ಕಬ್ ಮಾಸ್ಟರ್, ಫ್ಲಾಕ್ ಲೀಡರ್, ಸ್ಕೌಟ್ಸ್ ಮಾಸ್ಟರ್, ಗೈಡ್ಸ್ ಕ್ಯಾಪ್ಟನ್ ಹಾಗೂ ಕಬ್ಸ್, ಬುಲ್–ಬುಲ್ಸ್, ಸ್ಕೌಟ್ಸ್, ಗೈಡ್ಸ್ ಮಕ್ಕಳು ಭಾಗವಹಿಸಿದ್ದರು.

* ಜೂನ್ 09 ರಂದು ಜಿಲ್ಲಾ ಸಂಸ್ಥೆ ರಾಯಚೂರು ಹಾಗೂ ಸ್ಥಳೀಯ ಸಂಸ್ಥೆಗಳಾದ ಲಿಂಗಸುಗೂರು, ಮಸ್ಕಿ ಹಾಗೂ ಸಿಂಧನೂರು ವತಿಯಿಂದ ಪರಿಸರ ದಿನಾಚರಣೆ ಅಂಗವಾಗಿ ಭೂಮಿಯ ಕುರಿತು ಮೊದಲನೇ ವಾರದ ಶಿಬಿರಾಗ್ನಿ ಕಾರ್ಯಕ್ರಮವನ್ನು ಆಯೋಜನೆ ಮಾಡಲಾಯಿತು. ಶ್ರೀಮತಿ ಮಲ್ಲೇಶ್ವರಿ ಜುಜಾರೆ, ಎ.ಎಸ್.ಓ.ಸಿ/ ರೇಂಜರಿಂಗ್ ವಿಭಾಗ/ ಕಲ್ಯಾಣ ಕರ್ನಾಟಕ ಉಸ್ತುವಾರಿ ಇವರು ಮುಖ್ಯ ಅತಿಥಿಗಳಾಗಿ ಆಗಮಿಸಿದ್ದರು.

* ಜೂನ್ 15ರಂದು ಕರ್ನಾಟಕ ಸರ್ಕಾರ, ಆಯುಷ್ ಇಲಾಖೆ, ಬೆಂಗಳೂರು, ಜಿಲ್ಲಾ ಪಂಚಾಯತ್, ರಾಯಚೂರು ಹಾಗೂ ಶಾಲಾ ಶಿಕ್ಷಣ



ಇಲಾಖೆ, ರಾಯಚೂರು, ಕ್ಷೇತ್ರಶಿಕ್ಷಣಾಧಿಕಾರಿಗಳ ಕಾರ್ಯಾಲಯ ರಾಯಚೂರು ಮತ್ತು ಜಿಲ್ಲಾ ಸಂಸ್ಥೆ ಹಾಗೂ ಸ್ಥಳೀಯ ಸಂಸ್ಥೆ ರಾಯಚೂರು ವತಿಯಿಂದ 10ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯ ಅಂಗವಾಗಿ ಯೋಗೊತ್ಸವ ಪೂರ್ವಭಾವಿ ಕಾರ್ಯಕ್ರಮವನ್ನು ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣ, ರಾಯಚೂರು ಇಲ್ಲಿ ಆಯೋಜನೆ ಮಾಡಲಾಯಿತು. ಇದೇ ಸಂದರ್ಭದಲ್ಲಿ ಡಾ. ಬಸವರಾಜ, ಡಾ: ಪೂಜಾ, ಶ್ರೀ ಬಸವರಾಜ ಬೋರೆಡ್ಡಿ ಜಿಲ್ಲಾ ಮುಖ್ಯ ಆಯುಕ್ತರು, ಸ್ಕೌಟ್ಸ್, ಗೈಡ್ಸ್, ರೋವರ್ಸ್, ರೇಂಜರ್ಸ್ ಮಕ್ಕಳು ಭಾಗವಹಿಸಿದ್ದರು.

* ಜೂನ್ 15 ರಂದು ಜಿಲ್ಲಾ ಸಂಸ್ಥೆ ರಾಯಚೂರು ಹಾಗೂ ಸ್ಥಳೀಯ ಸಂಸ್ಥೆಗಳಾದ ರಾಯಚೂರು, ಮಾನ್ವಿ, ದೇವದುರ್ಗ ವತಿಯಿಂದ ಪರಿಸರ ದಿನಾಚರಣೆ ಅಂಗವಾಗಿ ನೀರಿನ ಕುರಿತು ಎರಡನೇ ವಾರದ ಶಿಬಿರಾಗ್ನಿ ಕಾರ್ಯಕ್ರಮವನ್ನು ಆಯೋಜನೆ ಮಾಡಲಾಯಿತು. ಮಕ್ಕಳು ನೀರಿನ ಕುರಿತು ಹಾಡು, ಚಿತ್ರಕಲೆ, ಕವನ, ಭಾಷಣವನ್ನು ಹೇಳಿದರು. ಇದೇ ಸಂದರ್ಭದಲ್ಲಿ ಅಧ್ಯಕ್ಷರು, ಕಾರ್ಯದರ್ಶಿಗಳು, ಪದಾಧಿಕಾರಿಗಳು ಹಾಗೂ ಕಬ್ ಮಾಸ್ಟರ್, ಫ್ಲಾಕ್ ಲೀಡರ್, ಸ್ಕೌಟ್ಸ್ ಮಾಸ್ಟರ್, ಗೈಡ್ಸ್ ಕ್ಯಾಪ್ಟನ್ ಹಾಗೂ ಕಬ್ಸ್, ಬುಲ್–ಬುಲ್ಸ್, ಸ್ಕೌಟ್ಸ್, ಗೈಡ್ಸ್‌ಗಳು ಭಾಗವಹಿಸಿದ್ದರು.

* ಜೂನ್ 16 ಜಿಲ್ಲಾ ಸಂಸ್ಥೆ ರಾಯಚೂರು ಹಾಗೂ ಸ್ಥಳೀಯ ಸಂಸ್ಥೆಗಳಾದ ಲಿಂಗಸುಗೂರು, ಮಸ್ಕಿ ಹಾಗೂ ಸಿಂಧನೂರು ವತಿಯಿಂದ ಪರಿಸರ ದಿನಾಚರಣೆ ಅಂಗವಾಗಿ ನೀರಿನ ಕುರಿತು ಎರಡನೇ ವಾರದ ಶಿಬಿರಾಗ್ನಿ ಕಾರ್ಯಕ್ರಮ ಹಾಗೂ ಶ್ರೀಮತಿ ಸುಮಂಗ ಲಾಲೂತಿಮಠ ಫ್ಲಾಕ್ ಲೀಡರ್ ರಾಯಚೂರುರವರ ಶ್ರದ್ಧಾಂಜಲಿ ಕಾರ್ಯಕ್ರಮವನ್ನು ಸಹ ಆಯೋಜನೆ ಮಾಡಲಾಯಿತು. ಇದೇ ಸಂದರ್ಭದಲ್ಲಿ ಅಧ್ಯಕ್ಷರು, ಕಾರ್ಯದರ್ಶಿಗಳು, ಪದಾಧಿಕಾರಿಗಳು ಹಾಗೂ ಕಬ್ ಮಾಸ್ಟರ್, ಫ್ಲಾಕ್ ಲೀಡರ್, ಸ್ಕೌಟ್ಸ್ ಮಾಸ್ಟರ್, ಗೈಡ್ಸ್ ಕ್ಯಾಪ್ಟನ್ ಹಾಗೂ ಕಬ್ಸ್, ಬುಲ್–ಬುಲ್ಸ್, ಸ್ಕೌಟ್ಸ್–ಗೈಡ್ಸ್ ಮಕ್ಕಳು ಭಾಗವಹಿಸಿದ್ದರು.

ಶಿರಸಿ

* ಜೂನ್ 03 ರಂದು ಶಿರಸಿ ತಾಲೂಕಿನ ಇಸಳೂರು ಶ್ರೀ ನೀಕೆತನ ಶಾಲೆಯಲ್ಲಿ ಬೇಸಿಗೆ ಶಿಬಿರವನ್ನು ಆಯೋಜಿಸಲಾಗಿತ್ತು. ಶಿಬಿರವನ್ನು ಶ್ರೀ ವಿ.ಎಚ್. ಭಟ್ಕಳ ಜಿಲ್ಲಾ ಮುಖ್ಯ ಆಯುಕ್ತರು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಶ್ರೀಮತಿ ವಸುಧಾ ಹೆಗಡೆ ಉಪ ಪ್ರಾಂಶುಪಾಲರು ಹಾಗೂ ಸ್ಕೌಟ್ಸ್ ಮಾಸ್ಟರ್ ಗೈಡ್ ಕ್ಯಾಪ್ಟನ್ ಉಪಸ್ಥಿತರಿದ್ದರು.



* ಜೂನ್ 05 ರಂದು ಜಿಲ್ಲಾ ಸಂಸ್ಥೆ ಶಿರಸಿ ಹಾಗೂ ಅರಣ್ಯ ಇಲಾಖೆಯ ಸಹಯೋಗದೊಂದಿಗೆ "ಸಾಲು ಮರದ ತಿಮ್ಮಕ್ಕ ಉದ್ಯಾನವನ"ದಲ್ಲಿ ಗಿಡ ನೆಡುವುದರ ಮುಖಾಂತರ ವಿಶ್ವ ಪರಿಸರ ದಿನಾಚರಣೆಯನ್ನು ಆಚರಿಸಲಾಯಿತು ಈ ಸಂದರ್ಭದಲ್ಲಿ ಅರಣ್ಯ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ಹಾಗೂ ಜಿಲ್ಲಾ



ಮುಖ್ಯ ಆಯುಕ್ತರು ಮತ್ತು ಸ್ಕೌಟ್ಸ್–ಗೈಡ್ಸ್ ರೋವರ್ಸ್ ರೇಂಜರ್ಸ್‌ಗಳು ಉಪಸ್ಥಿತರಿದ್ದರು.

* ಜೂನ್ 14 ರಂದು ಸರಕಾರಿ ಮಾದರಿ ಹಿರಿಯ ಪ್ರಾಥಮಿಕ ಮಾರಿಗುಡಿ ಶಾಲೆಯಲ್ಲಿ ಯೋಗೋತ್ಸವ ಕಾರ್ಯಕ್ರಮವನ್ನ ಹಮ್ಮಿಕೊಳ್ಳಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾ ಮುಖ್ಯ ಆಯುಕ್ತರಾದ ಶ್ರೀ ವಿ.ಎಚ್. ಭಟ್ಕಳ ಹಾಗೂ ಶಾಲೆಯ ಮುಖ್ಯೋಪಾಧ್ಯಯರು ಸಿಬ್ಬಂದಿ ವರ್ಗದವರು, ಸ್ಕೌಟ್ಸ್–ಗೈಡ್ಸ್ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.



* ಜೂನ್ 15 ರಂದು ಯಲ್ಲಾಪುರ ತಾಲೂಕಿನ ಹುಲಗೋಡ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನೂತನ ಸ್ಕೌಟ್ಸ್–ಗೈಡ್ಸ್ ದಳ ಉದ್ಘಾಟನಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು ಕಾರ್ಯಕ್ರಮವನ್ನು ಶ್ರೀ ಎನ್.ಆರ್ ಹೆಗಡೆ ಕೇತ್ರ ಶಿಕ್ಷಣಾಧಿಕಾರಿಗಳು ಉದ್ಘಾಟಿಸಿ "ಮಕ್ಕಳಿಗೆ ಶಾಲಾ ಹಂತದಲ್ಲಿ ಶಿಕ್ಷಣದ ಜೊತೆಗೆ ಸ್ಕೌಟ್ಸ್ ಗೈಡ್ಸ್ ನಂತಹ ಶಿಕ್ಷಣ ದೊರೆತರೆ ಅವರ ವ್ಯಕ್ತಿತ್ವ ವಿಕಸನಕ್ಕೆ ಸಹಕಾರಿಯಾಗುತ್ತದೆ. ಹಾಗೂ ಜೀವನ ಕೌಶಲ್ಯಗಳು ಮತ್ತು ಶಿಸ್ತನ್ನು ಮಕ್ಕಳು ಕಲಿಯುತ್ತಾರೆ" ಎಂದು ಹೇಳಿದರು ಈ ಸಂದರ್ಭದಲ್ಲಿ ಜಿಲ್ಲಾ ಮುಖ್ಯ ಆಯುಕ್ತರಾದ ಶ್ರೀ ವಿ.ಎಚ್.ಭಟ್ಕಳ, ಯಲ್ಲಾಪುರ ಸ್ಥಳಿಯ ಸಂಸ್ಥೆಯ ಅಧ್ಯಕ್ಷರಾದ ಶ್ರೀ ನಂದನ ಬಾಳಿಗೆ ಸ್ಥಳೀಯ ಸಂಸ್ಥೆಯ ಪದಾಧಿಕಾರಿಗಳು ಹಾಗೂ ಶಾಲೆಯ ಮುಖ್ಯೋಪಾಧ್ಯಯರು ಸಿಬ್ಬಂದಿ ವರ್ಗದವರು, ಪಾಲಕರು ಉಪಸ್ಥಿತರಿದ್ದರು.



ಶಿವಮೊಗ್ಗ

* ಶಿವಮೊಗ್ಗ ಜಿಲ್ಲಾ ಸಂಸ್ಥೆ ಹಾಗೂ ಜಿಲ್ಲಾ ಆಯುಷ್ ಇಲಾಖೆ, ಶಿವಮೊಗ್ಗರವರ ಸಂಯುಕ್ತಾಶ್ರಯದಲ್ಲಿ ಜಿಲ್ಲಾ ಸ್ಕೌಟ್ ಭವನದಲ್ಲಿ ಅಂತರಾಷ್ಟ್ರೀಯ ಯೋಗ ದಿನಾಚರಣೆಯ ಪೂರ್ವಭಾವಿ ಯೋಗೋತ್ಸವವನ್ನು ಹಮ್ಮಿಕೊಳ್ಳಲಾಗಿತ್ತು. ಈ ಕಾರ್ಯಕ್ರಮದಲ್ಲಿ ಶಿವಮೊಗ್ಗದ ನಗರ ಶಾಲೆ ಕಾಲೇಜುಗಳ ಒಟ್ಟು 500 ಸ್ಕೌಟ್ಸ್-ಗೈಡ್ಸ್, ರೋವರ್ಸ್-ರೇಂಜರ್ಸ್, ಸ್ಕೌಟ್ ಮಾಸ್ಟರ್ ಮತ್ತು ಗೈಡ್ ಕ್ಯಾಪ್ಟನ್‌ಗಳು ಹಾಜರಿದ್ದರು. ಬೆಳಿಗ್ಗೆ 8 ಗಂಟೆಗೆ ಖ್ಯಾತ ಮಕ್ಕಳ ತಜ್ಞರು, ಶಾಸಕರು ವಿಧಾನ ಪರಿಷತ್‌ನ ಡಾ॥ ಧನಂಜಯ ಸರ್ಜಿರವರು ಹೂಕುಂಡಕ್ಕೆ ನೀರು ಹಾಕುವುದರ ಮೂಲಕ ಶಿಬಿರವನ್ನು ಉದ್ಘಾಟನೆ ಮಾಡಿದರು. "ಹಿಂದೆ ಋಷಿ ಮುನಿಗಳು ಹಾಗೂ ತಪಸ್ವಿಗಳು ಯಾವುದೇ ಕಾಯಿಲೆ ಇಲ್ಲದೇ ಯೋಗದ ಮುಖಾಂತರ ಮಾತ್ರ ಗುಣಮಾಡಿಕೊಂಡು ನೂರಾರು ವರ್ಷಗಳ ಕಾಲ ಬದುಕುತ್ತಿದ್ದರು" ಎಂದರು. ಡಾ॥ ಲಿಂಗರಾಜ್‌ರವರು ಮಾತನಾಡುತ್ತಾ ಜೂನ್ 10 ರಿಂದ 20ನೇ ತಾರೀಕಿನವರೆಗೆ ಪೂರ್ವಭಾವಿ ಕಾರ್ಯಕ್ರಮ ಯೋಗೋತ್ಸವವನ್ನು ಇಂದು ಆಚರಿಸುತ್ತಿದ್ದು. ಈ ವರ್ಷದ ಧ್ಯೇಯವಾಕ್ಯ ಮಹಿಳಾ ಸಬರೀಕರಣಕ್ಕಾಗಿ ಯೋಗ ಎಂಬುದಾಗಿದ್ದು ಮಹಿಳಾ ಕಾಲೇಜು ಹಾಸ್ಟೇಲ್‌ಗಳಲ್ಲಿ ಯೋಗಾಭ್ಯಾಸವನ್ನು ಆಯುಷ್ ಇಲಾಖೆಯವರಿಂದ ಮಾಡಿಸುತ್ತಿರುವುದು, ಮುಂದೆಯೂ ಇದನ್ನು ರೂಢಿಸಿಕೊಳ್ಳಬೇಕೆಂದು ತಿಳಿಸಿದರು. ಆಯುಷ್ ಇಲಾಖೆಯ ಶ್ರೀ ಮಹೇಂದ್ರ ಬಿ.ಆರ್. ಮತ್ತು ಕು॥ ಮೋನಿಕಾ ಸಿ.ಎಸ್.ರವರು ಕೆಲವು ಆಸನಗಳನ್ನು ಮಾಡಿ ತೋರಿಸಿ ಮಕ್ಕಳಿಂದ ಮಾಡಿಸಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಜಿಲ್ಲೆಯ ಮುಖ್ಯ ಆಯುಕ್ತರಾದ ಶ್ರೀ ಕೆ.ಪಿ. ಬಿಂದುಕುಮಾರ್‌ರವರು ಮಾತನಾಡಿ ನಿವೆಲ್ಲರೂ ದಿನಾಲೂ ಯೋಗ ಮಾಡಿ ಆರೋಗ್ಯವನ್ನು ಕಾಪಾಡಿಕೊಳ್ಳಿ ಎಂದು ಕರೆ ನೀಡಿದರು. ಜಿಲ್ಲಾ ಗೈಡ್ ಆಯುಕ್ತರಾದ ಶ್ರೀಮತಿ ಶಕುಂತಲಾ ಚಂದ್ರಶೇಖರ್‌ರವರು ಸ್ವಾಗತಿಸಿದರು. ಡಾ॥ ಅನಿಲ್ ಕುಮಾರ್‌ರವರು ವಂದಿಸಿದರು. ಸಭಾ ಕಾರ್ಯಕ್ರಮವನ್ನು ಶ್ರೀಮತಿ ಭಾರತಿ ಡಾಯಸ್, ರಾಜ್ಯ ಸಹಾಯಕ ಸಂಘಟನಾ ಆಯುಕ್ತರವರು ನಿರ್ವಹಿಸಿದರು.



ವಿಜಯಪುರ

* ಜಿಲ್ಲಾ ಸಂಸ್ಥೆ ವಿಜಯಪುರ ಹಾಗೂ ಜಿಲ್ಲಾ ಆಯುಷ್ ಇಲಾಖೆ ವಿಜಯಪುರ ಇವರ ಸಹಯೋಗದಲ್ಲಿ ಜೂನ್ 15 ರಂದು ವಾಸಂತಿಬಾಯಿ ಜಿಗಜಿನ್ನಿ ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ತರಬೇತಿ ಹಾಗೂ ಶಿಬಿರ ಕೇಂದ್ರ, ಬುರಣಾಪುರದಲ್ಲಿ "ಯೋಗೋತ್ಸವ"ದ ನಿಮಿತ್ಯ ಯೋಗಾಭ್ಯಾಸ ಮಾಡಿಸಲಾಯಿತು. ಆಯುಷ್ ಇಲಾಖೆಯ ವೈದ್ಯಾಧಿಕಾರಿಗಳಾದ ಡಾ.ಮಹೇಶ ನಾವಲಗಿ ರವರ ನೇತೃತ್ವದಲ್ಲಿ 3 ಜನ ಪ್ರತಿಭಾನ್ವಿತ ಯೋಗ ತರಬೇತುದಾರರು ಯೋಗದ ಮಹತ್ವವನ್ನು ಸಾರಿದರು. ಜಿಲ್ಲಾ ಉಪಾಧ್ಯಕ್ಷರಾದ ಶ್ರೀ ಉದಯ್ ಯಾಳವಾರ, ಜಿಲ್ಲಾ ಗೈಡ್ ಆಯುಕ್ತರಾದ ಶ್ರೀಮತಿ. ವಿದ್ಯಾವತಿ ಅಂಕಲಗಿ, ಜಿಲ್ಲಾ ತರಬೇತಿ ಆಯುಕ್ತರು (ಸ್ಕೌ), ಶ್ರೀ ಎಸ್.ಎಸ್. ಬೊಮ್ಮನಹಳ್ಳಿ, ಚಡಚಣ



ಸ್ಥಳೀಯ ಸಂಸ್ಥೆಯ ಕಾರ್ಯದರ್ಶಿಗಳಾದ ಶ್ರೀ ಎಸ್.ಸಿ. ಉಮರಾಣಿ ಸೇರಿದಂತೆ ಜಿಲ್ಲಾ ಪದಾಧಿಕಾರಿಗಳು ಉಪಸ್ಥಿತರಿದ್ದರು.

ವಿಜಯನಗರ

* ಜೂನ್ 05 ರಂದು ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಜಿಲ್ಲಾ ಸಂಸ್ಥೆ ಹಾಗೂ ಸ್ಥಳೀಯ ಸಂಸ್ಥೆ ಮತ್ತು ಜಿಲ್ಲಾ ರೆಡ್ ಕ್ರಾಸ್ ಸಂಸ್ಥೆಯ ಸಹಯೋಗದೊಂದಿಗೆ ವಿಜಯನಗರ ಜಿಲ್ಲಾ ಕ್ರೀಡಾಂಗಣದಲ್ಲಿ ಸಸಿ ನೆಡುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಈ ಕಾರ್ಯಕ್ರಮಕ್ಕೆ ವಿಜಯನಗರ ಜಿಲ್ಲೆಯ ಜಿಲ್ಲಾಧಿಕಾರಿಗಳಾದ ಮಾನ್ಯ ಶ್ರೀ ಎಂ ಎಸ್ ದಿವಾಕರ್ ಇವರು ಸಸಿ ನೆಟ್ಟು ನೀರುಣಿಸುವುದರ ಮೂಲಕ ಚಾಲನೆ ನೀಡಿದರು. ಮಾನ್ಯರು ಈ ಕಾರ್ಯಕ್ರಮ ಕೇವಲ ಈ ಒಂದು ದಿನಕ್ಕೆ ಮಾತ್ರ ಸೀಮಿತವಾಗದೆ ನಿರಂತರವಾಗಿ ಸಾಗಬೇಕು. ಹಾಗೂ ಪ್ರತಿಯೊಬ್ಬ ಮಗು ತನ್ನ ಹುಟ್ಟು ಹಬ್ಬವನ್ನು ಗಿಡ ನೆಡುವುದರ ಮೂಲಕ ಆಚರಿಸಲು ಸಲಹೆ ನೀಡಿದರು. ಈ ಕಾರ್ಯಕ್ರಮದಲ್ಲಿ ಹೊಸಪೇಟೆ ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಶ್ರೀ ಎಂ. ಚನ್ನಬಸಪ್ಪ ಇವರು ಭಾಗವಹಿಸಿ ಸಸಿಯನ್ನು ನೆಟ್ಟು ನೀರುಣಿಸಿ, ಪರಿಸರ ರಕ್ಷಣೆಯು ಪ್ರತಿಯೊಬ್ಬರ ಕರ್ತವ್ಯವಾಗಿರಬೇಕು ಹಾಗಾದರೆ ಮಾತ್ರ ಪರಿಸರ ರಕ್ಷಿಸಲು ಮತ್ತು ಬೆಳೆಸಲು ಸಹಕಾರಿಯಾಗುತ್ತದೆ, ಎಂದು ಮಕ್ಕಳಿಗೆ ಕರೆ ನೀಡಿದರು. ರೆಡ್ ಕ್ರಾಸ್ ಸಂಸ್ಥೆಯ ಅಧ್ಯಕ್ಷರಾದ ಶ್ರೀ ಎಚ್ ಶ್ರೀನಿವಾಸ್ ರಾವ್, ಜಿಲ್ಲಾ ಕಾರ್ಯದರ್ಶಿಗಳಾದ ಶ್ರೀಮತಿ ಅನ್ನಪೂರ್ಣಮ್ಮ, ರಾಜ್ಯ ಕಾರ್ಯಕಾರಿಣಿ ಸಮಿತಿಯ ಸದಸ್ಯರಾದ ಶ್ರೀಮತಿ ರೇಖಾ ಪ್ರಕಾಶ್ ಹಾಗೂ ಇತರ ಪದಾಧಿಕಾರಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಸಂಸ್ಥೆಯ ಕಾರ್ಯದರ್ಶಿಗಳಾದ ಶ್ರೀ ಪಿ ಮಂಜುನಾಥ್ ಹಾಗೂ ನಗರದ ವಿವಿಧ ಶಾಲೆಗಳಿಂದ ನೂರಕ್ಕೂ ಹೆಚ್ಚು ಸ್ಕೌಟ್ಸ್ ಗೈಡ್ಸ್‌ಗಳು ಹಾಗೂ ಸ್ಕೌಟರ್ಸ್ ಮತ್ತು ಗೈಡರ್ಸ್‌ಗಳು ಭಾಗವಹಿಸಿದ್ದರು.



ಯಾದಗಿರಿ

* ಜೂನ್ 15 ರಂದು ಆಯುಷ್ ಇಲಾಖೆ ಯಾದಗಿರಿ, ಜಿಲ್ಲಾ ಸಂಸ್ಥೆ ಯಾದಗಿರಿ ಹಾಗೂ ಸ್ಥಳೀಯ ಸಂಸ್ಥೆ ಯಾದಗಿರಿ ವತಿಯಿಂದ 10ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯ ಅಂಗವಾಗಿ ಯೋಗೊತ್ಸವ ಪೂರ್ವಭಾವಿ ಕಾರ್ಯಕ್ರಮವನ್ನು ಸರಕಾರಿ ಪದವಿ ಮಹಾವಿದ್ಯಾಲಯ ಯಾದಗಿರಿ ಇಲ್ಲಿ ಆಯೋಜನೆ ಮಾಡಲಾಯಿತು. ಇದೇ ಸಂದರ್ಭದಲ್ಲಿ ಆಯುಷ್ ಇಲಾಖೆಯ ಡಾ. ಪ್ರಕಾಶ್ ರಾಜಪುರ ಮತ್ತು ಡಾ. ರಮೇಶ್ ಸಜ್ಜನ್, ಶ್ರೀ ರವಿ ಕುಮಾರ್ ಪಾಟೀಲ್, ಯೋಗ ಶಿಕ್ಷಕರಾದ ಶ್ರೀ ಅನಿಲ್ ಗುರೂಜಿ, ಶ್ರೀ ಶಿವರೆಡ್ಡಿ ಹಾಗೂ ಸರಕಾರಿ ಪದವಿ ಮಹಾವಿದ್ಯಾಲಯ ಕಾಲೇಜಿನ ಪ್ರಾಂಶುಪಾಲರಾದ ಡಾ. ಸುಭಾಷ್ ಚಂದ್ರ ಕೌಲಗಿ ಹಾಗೂ ಇತರೆ ಶಾಲೆಯ ಸಿಬ್ಬಂದಿ ವರ್ಗದವರು ಇದ್ದರು ಈ ಕಾರ್ಯಕ್ರಮವನ್ನು ಶ್ರೀ ಮಹಮ್ಮದ್ ಶರ್ಫುದ್ದೀನ್ ರವರು ಸಂಘಟಿಸಿದ್ದರು. ಹಾಗೂ ಸ್ಕೌಟ್ಸ್–ಗೈಡ್ಸ್, ರೋವರ್ಸ್–ರೇಂಜರ್ಸ್ ಮಕ್ಕಳು ಭಾಗವಹಿಸಿದ್ದರು.



ಬೆಂಗಳೂರು ಗ್ರಾಮಾಂತರ

* ಬೆಂಗಳೂರು ಗ್ರಾಮಾಂತರ ಜಿಲ್ಲೆ ಹಾಗೂ ಅರಣ್ಯ ಇಲಾಖೆ ಸಂಯುಕ್ತ ಆಶ್ರಯದಲ್ಲಿ ರಾಜ್ಯ ತರಬೇತಿ ಕೇಂದ್ರ ದೊಡ್ಡಬಳ್ಳಾಪುರದಲ್ಲಿ ಜೂನ್ 07 ರಂದು ಪರಿಸರ ದಿನಾಚರಣೆಯನ್ನು ಆಚರಿಸಲಾಯಿತು ಈ ಸಂದರ್ಭದಲ್ಲಿ ಜಿಲ್ಲಾ ಮುಖ್ಯ ಆಯುಕ್ತರು ಶ್ರೀ ನಾಗರಾಜ, ಅರಣ್ಯ ಇಲಾಖೆಯ ಅಧಿಕಾರಿ ಶ್ರೀಮತಿ ಲಕ್ಷ್ಮಿ ಹಾಗೂ ಅವರ ಸಿಬ್ಬಂದಿ ವರ್ಗ ಮತ್ತು ಜಿಲ್ಲೆಯ ಪದಾಧಿಕಾರಿಗಳು ಹಾಗೂ 80 ರೋವರ್ಸ್ ಮತ್ತು ರೇಂಜರ್ಸ್ ಭಾಗವಹಿಸಿದ್ದರು.



Practise what you Preach & Preach what you Practise

(Parables from stories of Sri Ramakrishna Paramahamsa)

J. Suryanarayan
Scout Master & English Faculty
Maruthi Vidyalaya, ICSE, Bengaluru

Once a lady came with her young lad to meet Sri Ramakrishna Paramahamsa, a priest at the Kali Temple at Dakshineshwar, Kolkata and met him after a long wait. She told him that her son was addicted to eating a lot of sweets and would not give it up in spite of her advice and wanted Ramakrishna to counsel him in that regard Ramakrishna spoke to the child lovingly for a while and then asked his mother to meet him with her son after one week.

The mother brought her child after one week and met him, this time 100, Ramakrishna spoke to him affectionately, enquiring about his welfare and asked him to meet him after a week. The lady promptly brought her son again, the third time to Ramakrishna who spoke to him, enquiring about his school, studies, friends, hobbies, games which the boy answered with alacrity. He then warmly asked his mother to bring him the following week.

The mother returned home disappointed, crestfallen wondering about her son giving up cating sweets. Nevertheless, without despair, frustration, despondence, she summoned hope and visited Ramakrishna a week later with his son for the fourth time, and met him, however, this time she lost her patience & mental poise as well. She expressed anger & displeasure at Ramakrishna for making her make four visits to see him.

Ramakrishna, this time, nonchalantly, with a beaming smile advised the boy with parental concern, requested him to reduce eating sweets which the boy readily agreed. He then turned towards the mother and told her that he himself was addicted to sweets and it took him about three weeks to give it up completely. Now, the mother realised her misunderstanding/ misgiving and apologised to him. Ramakrishna smiled gracefully and blessed the lady & her little lad.

Moral of the story: Practise what you Preach & Preach what you Practise

ಶ್ರದ್ಧಾಂಜಲಿ



ದಾವಣಗೆರೆಯ ಪ್ರತಿಷ್ಠಿತ ಚಿಗಟೇರಿ ಮನೆತನದವರಾದ **ಶ್ರೀ ಜಯಪ್ರಕಾಶ್ ಜೆ. ಚಿಗಟೇರಿ** ಅವರು ದಿನಾಂಕ 21 ಜೂನ್ 2024ರಂದು ಬೆಂಗಳೂರಿನಲ್ಲಿ ನಿಧನ ಹೊಂದಿದರು. ಇವರಿಗೆ 75 ವರ್ಷ ವಯಸ್ಸಾಗಿತ್ತು. ನಾಲ್ಕು ದಶಕಗಳ ಹಿಂದೆ ಶ್ರೀಯುತರು ದಾವಣಗೆರೆ ಜಿಲ್ಲಾ ಸ್ಕೌಟ್ ಆಯುಕ್ತರಾಗಿ ಸೇವೆ ಸಲ್ಲಿಸಿದ್ದರು. ಇವರು ಕೊಂಡಜ್ಜಿ ಸ್ಕೌಟ್ಸ್ ಮತ್ತು ಗೈಡ್ಸ್ ತರಬೇತಿ ಕೇಂದ್ರದ ಅಭಿವೃದ್ಧಿ ಸಮಿತಿಯ ಜಂಟಿ ಕಾರ್ಯದರ್ಶಿಯಾಗಿ ಹಾಗೂ ದಾವಣಗೆರೆ ಜಿಲ್ಲಾ ಸಂಸ್ಥೆಯ ಅಧ್ಯಕ್ಷರಾಗಿ ಸೇವೆ ಸಲ್ಲಿಸುತ್ತಿದ್ದರು.

ಇವರ ತಂದೆ ದಿವಂಗತ ಜಯಣ್ಣ ಚಿಗಟೇರಿಯವರು 1951ರಲ್ಲಿ ಯೂರೋಪ್‌ನ ಆಸ್ಟ್ರೀಯಾ ದೇಶದ ಸಾಲ್ಜ್‌ಬರ್ಗ್ (Salzburg) ನಲ್ಲಿ ಜರುಗಿದ 7ನೇ ವಿಶ್ವ ಜಾಂಬೂರಿಯಲ್ಲಿ ಭಾರತದ ಪ್ರತಿನಿಧಿಯಾಗಿ ಭಾಗವಹಿಸಿದ್ದರು. ಅವರ ಸ್ಮರಣೆಯಲ್ಲಿ ಕೊಂಡಜ್ಜಿ ತರಬೇತಿ ಕೇಂದ್ರದ ಅತಿ ಎತ್ತರದ ಸ್ಥಳದಲ್ಲಿ 'ಶ್ರೀ ಜಯಣ್ಣ ಚಿಗಟೇರಿ ಅಷ್ಟಾಂಗಣ ಗೋಪುರ'ವನ್ನು 1974ರಲ್ಲಿ ಭಾರತದ ಉಪರಾಷ್ಟ್ರಪತಿಗಳಾಗಿದ್ದ ಮಾನ್ಯ ಶ್ರೀ ಬಸಪ್ಪ ದಾನಪ್ಪ ಜತ್ತಿ ಅವರು ಉದ್ಘಾಟಿಸಿದರು. ಗೋಪುರದ ನಿರ್ಮಾಣದ ಕಾರ್ಯವನ್ನು ಶ್ರೀ ಜಯಪ್ರಕಾಶ್ ಜೆ. ಚಿಗಟೇರಿ ಸಹೋದರರು ನಿರ್ವಹಿಸಿದರು.

ಶ್ರೀಯುತರು 1964–65ರಲ್ಲಿ ಆಸ್ಟ್ರೇಲಿಯದ ಮೆಲ್ಬೋರ್ನ್ ಬಳಿ ಜರುಗಿದ 'ಏಳನೇ ಆಸ್ಟ್ರೇಲಿಯನ್ ಸ್ಕೌಟ್ ಜಂಬೂರಿ'ಯಲ್ಲಿ ಭಾರತ ತಂಡದ ಪ್ರತಿನಿಧಿಯಾಗಿ ಭಾಗವಹಿಸಿದರು. ಈ ಜಂಬೂರಿಯನ್ನು 'Challenge Valley Jamboree' ಎಂದು ಕರೆಯಲಾಗಿತ್ತು. ರಾಜ್ಯ ಸಂಸ್ಥೆಯಲ್ಲಿ ರಾಜ್ಯ ಕೋಶಾಧಿಕಾರಿಯಾಗಿದ್ದ ಶ್ರೀ ಪ್ರಭುದೇವ ಜೆ. ಚಿಗಟೇರಿ ಹಾಗೂ ದಾವಣಗೆರೆ ಜಿಲ್ಲಾ ಮುಖ್ಯ ಆಯುಕ್ತರಾಗಿರುವ ಶ್ರೀ ಮುರುಘರಾಜೇಂದ್ರ ಜೆ. ಚಿಗಟೇರಿ ಇವರ ಸಹೋದರರು.

ಶ್ರೀಯುತರು ತಮ್ಮ ಪತ್ನಿ, ಪುತ್ರ, ಇಬ್ಬರು ಪುತ್ರಿಯರು, ಅಳಿಯಂದಿರು, ಮೊಮ್ಮಕ್ಕಳು ಹಾಗೂ ಅಪಾರ ಬಂಧು–ಮಿತ್ರರನ್ನು ಅಗಲಿದ್ದಾರೆ.



ಶ್ರೀ ಶರಣಪ್ಪ ಕಂಬಳಿ, ಎ.ಎಲ್.ಟಿ (ಸ್ಕೌಟ್ಸ್), ಮಾಜಿ ಜಿಲ್ಲಾ ಕಾರ್ಯದರ್ಶಿ ಹಾಗೂ ನಿವೃತ್ತ ಮುಖ್ಯೋಪಾಧ್ಯಾಯರು, ಬೆಂಗಳೂರು ಗ್ರಾಮಾಂತರ ಜಿಲ್ಲೆ. ಇವರು ದಿನಾಂಕ: 13 ಜೂನ್ 2024 ರಂದು ನಿಧನರಾದರು. ಇವರಿಗೆ 70 ವರ್ಷ ವಯಸ್ಸಾಗಿತ್ತು, ಶ್ರೀಯುತರು ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಸ್ಕೌಟ್ ಮಾಸ್ಟರ್ ಆಗಿದ್ದ ಇವರು ಹಾಗೂ ಜಿಲ್ಲಾ ತರಬೇತಿ ಆಯುಕ್ತರಾಗಿ ಮೂರು ದಶಕಗಳಿಗೂ ಹೆಚ್ಚು ಕಾಲ ಕಾರ್ಯನಿರ್ವಹಿಸಿ ಸ್ಕೌಟ್–ಗೈಡ್ ಚಳವಳಿಯ ಬೆಳವಣಿಗೆಗೆ ಸಹಕರಿಸಿದ್ದರು.



ಶ್ರೀಮತಿ ಉಮಾ ಕೆ, ಗೈಡ್ ಕ್ಯಾಪ್ಟನ್, ಹೋಲಿ ಕ್ರಾಸ್ ಸ್ಕೂಲ್, ಬೆಂಗಳೂರು ದಕ್ಷಿಣ ಜಿಲ್ಲೆ. ಇವರು ದಿನಾಂಕ 24 ಜೂನ್ 2024 ರಂದು ಬೆಂಗಳೂರಿನಲ್ಲಿ ನಿಧನರಾದರು. ಇವರಿಗೆ 37 ವರ್ಷ ವಯಸ್ಸಾಗಿತ್ತು. ಇವರು ಗೈಡ್ ವಿಭಾಗದಲ್ಲಿ ಬೇಸಿಕ್ ತರಬೇತಿಯನ್ನು ಪಡೆದಿದ್ದು ಜಿಲ್ಲಾ ಹಾಗೂ ಸ್ಥಳೀಯ ಮಟ್ಟದಲ್ಲಿ ನಡೆಯುತ್ತಿದ್ದ ಸಾಕಷ್ಟು ಶಿಬಿರ ಮತ್ತು ಕಾರ್ಯಕ್ರಮಗಳಲ್ಲಿ ಸಕ್ರಿಯವಾಗಿ ಭಾಗವಹಿಸುತ್ತಿದ್ದರು.

ಇವರುಗಳ ಆತ್ಮಕ್ಕೆ ಸದ್ಗತಿ ದೊರಕಲೆಂದು ಹಾಗೂ ಅವರ ಅಗಲಿಕೆಯ ದುಃಖವನ್ನು ಭರಿಸುವ ಶಕ್ತಿಯನ್ನು ಅವರ ಕುಟುಂಬದವರಿಗೆ ನೀಡಲೆಂದು ಭಗವಂತನಲ್ಲಿ ಪ್ರಾರ್ಥಿಸುತ್ತೇವೆ.

– ರಾಜ್ಯ ಕಾರ್ಯದರ್ಶಿ

ಅಂತರರಾಷ್ಟ್ರೀಯ ಯೋಗಾ ದಿನಾಚರಣೆ ಪ್ರಯುಕ್ತ ವಿವಿಧ ಜಿಲ್ಲೆಗಳ ಸ್ಕೌಟ್ಸ್–ಗೈಡ್ಸ್ ರೋವರ್ಸ್–ರೇಂಜರ್ಸ್‌ಗಳು ಯೋಗಾ ಕಾರ್ಯಕ್ರಮದಲ್ಲಿ ಭಾಗವಹಿಸಿರುವ ವಿಹಂಗಮ ನೋಟ


ಬೆಂಗಳೂರು ಉತ್ತರ


ಬಿಬಿಎಂಪಿ


ಚಾಮರಾಜನಗರ


ದಕ್ಷಿಣ ಕನ್ನಡ


ದಾವಣಗೆರೆ


ಹಾಸನ


ಕೊಡಗು


ಕೊಪ್ಪಳ

RNI No: 13348/1959. Title Code: KARBIL00285. MAG No. MAG(3)/NPP/184/2021-2022
Postal Regd. No. KA/BGGPO/2580/2021-23. Licensed to Post Without Prepayment License
No. PMG/BG/WPP-340/2021-2023. Date of Publishing 28th of Every Month
Posted at: Bengaluru PSO, Mysore Road, Bengaluru-26 on 28th & 30th of every month (No. of Pages: 32)



If not delivered, please return to :
THE EDITOR, Karnataka Scout & Guide
State Headquarters, Shanthi Gruha
#39, Palace Road, Bengaluru - 560 001
Ph.: 080-22260017, 22267470
e-mail.: info@bsgkarnataka.org
shanthigruha@scout.org.in
www.bsgkarnataka.org

Published by: K. Gangappa Gowda, Owened by: K. Gangappa Gowda belongs to: Bharat Scouts and Guides, Karnataka, No.39, Shanthi Gruha Palace Road, Bengaluru 560 001. Published at: Bharat Scouts and Guides, Karnataka, No.39, Shanthi Gruha Palace Road, Bengaluru-560 001.
Printed by: L. Lingappa at Sathyasri Printers Pvt. Ltd., 16/1, 3rd Cross, 2nd Main, Kasturiba Nagar, Mysore Road, Bengaluru 560 026
Editor: K. Gangappa Gowda